**ಸಂಪುಟ:** 05 **ಸಂಚಿಕೆ:** 307 **ಪುಟಗಳು:** 08 **ಮಂಗಳವಾರ** 20 **ಜನವರಿ** 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ನೀವು ಏನು ಯೋಚಿಸುತ್ತೀರಿ, ಏನು ಮಾತಾಡುತ್ತೀರಿ ಮತ್ತು ಏನು ಮಾಡುತ್ತೀರಿ ಎಂಬುದರ ಮೇಲೆ ನಿಮ್ಮ ಸಂತೋಷ ನಿರ್ಧಾರಿತವಾಗುತ್ತದೆ

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಬಳ್ಳಾರಿ ಗಲಾಟೆ ತನಿಖೆ ಸಿಬಿಐಗೆ ನೀಡದೆ ಇರುವುದಕ್ಕೆ ಕಾರಣ ಬಿಚ್ಚಿಟ್ಟ ಪ್ರಿಯಾಂಕ್

• ಉದಯವಾಹಿನಿ, ಬೆಂಗಳೂರು

ಬಳ್ಳಾರಿಯಲ್ಲಿ ನಡೆದ ಗಲಾಟೆ ಹಾಗೂ ಫೈರಿಂಗ್ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಬೇಕು ಎಂದು ಬಿಜೆಪಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಹಾಗೂ ಬಿಜೆಪಿ ಮುಖಂಡರು ಆಗ್ರಹಿಸಿದ್ದಾರೆ. ಆದರೆ ಸಿಬಿಐಗೆ ಯಾಕೆ ನೀಡುತ್ತಿಲ್ಲ ಎಂಬ ವಿಚಾರವಾಗಿ ಸಚಿವ ಪ್ರಿಯಾಂಕ್ ಖರ್ಗೆ ಕಾರಣ ಬಿಚ್ಚಿಟ್ಟಿದ್ದಾರೆ. ಬೆಂಗಳೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಈ ಹಿಂದೆ ಸಿಬಿಐ ಬರೆದಿದ್ದ ಪತ್ರದ ಬಗ್ಗೆ ಉಲ್ಲೇಖಿಸಿ ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದ್ದಾರೆ.

ರಾಜ್ಯದಲ್ಲಿ ನಡೆದ ಪ್ರಕರಣಗಳ ತನಿಖೆಯನ್ನು ಸಿಬಿಐಗೆ ನೀಡಿದರೆ ಅವರಿಗೆ ಅಗತ್ಯವಿರುವ ಸಂಪನ್ಮೂಲಗಳನ್ನು ನಾವೇ ಕೊಡಬೇಕು ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಸಿಬ್ಬಂದಿ ಸೇರಿದಂತೆ ಸಂಪನ್ಮೂಲಗಳನ್ನು ಕೊಡಬೇಕು ಅಂದಿದ್ದಾರೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಪತ್ರವನ್ನು ಸಿಬಿಐ ಬರೆದಿದೆ ಎಂದು ತಿಳಿಸಿದರು.

ಬಿಜೆಪಿಗರು ಆ ಪತ್ರ ನೋಡಲಿ ಎಂದು ಸವಾಲು ಹಾಕಿದ ಅವರು, ರಾಜ್ಯದಲ್ಲಿ ನಡೆದ ಪ್ರಕರಣಗಳ ಕುರಿತಾಗಿ ನಮ್ಮ ಪೊಲೀಸ್ ಇಲಾಖೆ ನಡೆಸಿದ್ದ ತನಿಖೆಗಳನ್ನು ಸಿಬಿಐ ಸಾಕಷ್ಟು ಬಾರಿ ಎತ್ತಿ ಹಿಡಿದಿದೆ ಎಂದು ಅವರು ಇದೇ ಸಂದರ್ಭದಲ್ಲಿ ಒತ್ತಿ ಹೇಳಿದರು. ಪರೇಶ್ ಮೆಸ್ತಾ ಕೇಸ್ ಏನಾಯ್ತು ಎಂದು ಪ್ರಶ್ನಿಸಿ ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದರು. ಇನ್ನು ಇದೇ ಸಂದರ್ಭದಲ್ಲಿ ಸಚಿವ ಆರ್ ಬಿ ತಿಮ್ಮಾಪುರ ವಿರುದ್ಧ



ಭ್ರಷ್ಟಾಚಾರ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಬಿಜೆಪಿ ನಾಯಕರು ಈ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ, ಆದರೆ ಯಾವುದೇ ದಾಖಲೆ ಕೊಟ್ಟಿಲ್ಲ. ಪ್ರಕರಣಕ್ಕೆ ಸಂಬಂಧಿಸಿದಂತೆ ಈಗ ಅಧಿಕಾರಿ ಸಿಕ್ಕಿಕೊಂಡಿದ್ದಾರೆ. ಈ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ವಿವರಿಸಿದರು. ಆರೋಪ ಸಾಬೀತಾದರೆ ಮಂತ್ರಿ ಸ್ಥಾನದಲ್ಲಿ ಆರ್ ಬಿ ತಿಮ್ಮಾಪುರ ಇರಲ್ಲ. ಗುರುವಾರದಿಂದ ಜಂಟಿ ಅಧಿವೇಶನ ಆರಂಭಗೊಳ್ಳಲಿದೆ. ಅಲ್ಲಿ ಈ ಸಂಬಂಧಿಸಿದಂತೆ ದಾಖಲೆಗಳನ್ನು ಬಿಜೆಪಿ ನಾಯಕರು ನೀಡಲಿ ಹಾಗೂ ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು. ಸುಮ್ಮನೆ ಸಾವಿರಾರು ಕೋಟಿ ಹಗರಣ ಆಗಿದೆ ಎಂದು ಆರೋಪ ಮಾಡುತ್ತಾರೆ. ಈ ಹಿಂದೆ ಆರೋಪ ಮಾಡಿದ್ದು ಸಾಬೀತು ಮಾಡಲು ಸಾಧ್ಯವಾಗಿಲ್ಲ. ಬಿಜೆಪಿಯವರು ಸುಳ್ಳು ಹೇಳುವುದನ್ನು ನಿಲ್ಲಿಸಲಿ. ಸುಳ್ಳು ಹೇಳುವುದೆ ಬಿಜೆಪಿಗೆ ಪವೃತ್ತಿಯಾಗಿದೆ ಎಂದು ಕಿಡಿಕಾರಿದರು.

**ಬಿಜೆಪಿ ನಾಯಕರಿಗೆ ತಿರುಗೇಟು**

ಮಹಿಳಾ ಅಧಿಕಾರಿಯ ಮೇಲೆ ರಾಜೀವ್ ಗೌಡ ಧಮ್ಕಿ ಪ್ರಕರಣಕ್ಕೆ ಇದೇ ಸಂದರ್ಭದಲ್ಲಿ ಪ್ರತಿಕ್ರಿಯೆ ನೀಡಿ, ಈಗಾಗಲೇ ರಾಜೀವ್ ಗೌಡ ಅವರಿಗೆ ನೋಟಿಸ್ ಕೂಡ ಕೊಡಲಾಗಿದೆ. ಗೃಹ ಸಚಿವರು ಕೂಡ ಇದನ್ನೇ ಹೇಳಿದ್ದಾರೆ. ಅವರು ತಡೆದುಕೊಂಡಿದ್ದು ತಪ್ಪು. ಆದರೆ ಬಿಜೆಪಿ ನಾಯಕರಿಗೆ ನೈತಿಕತೆ ಇದ್ಯಾ. ಸಿ.ಟಿ ರವಿ ಅವರು ಏನು ಮಾತನಾಡಿದ್ರು, ಆರ್ ಅಶೋಕ್ ಅವರು ನಾಯಿ ಅಂತಾ ಕರೆದ್ರು. ಎಚ್‌ಡಿಕೆ , ದೇವೇಗೌಡ್ರು ಏನು ಮಗ ಅಂತಾ ಅಂದ್ರು. ಅದೆಲ್ಲ ಪಬ್ಲಿಕ್ ಡೊಮೈನ್ ನಲ್ಲಿ ಇದೆ ಅಲ್ವಾ ಎಂದು ತಿರುಗೇಟು ನೀಡಿದರು.

ಮಹಿಳಾ ಅಧಿಕಾರಿಗೆ ನಿಂದಿಸಿದ್ದು ರಾಜೀವ್ ಗೌಡ ಅವರು ಮಾಡಿರುವ ತಪ್ಪು. ಅವರಿಗೆ ಕಾನೂನು ಪ್ರಕಾರ ಶಿಕ್ಷೆ ಆಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಇದೇ ಸಂದರ್ಭದಲ್ಲಿ ತಿಳಿಸಿದರು.

## ಬಿಜೆಪಿ ಕಚೇರಿಗೆ ಪಾದಯಾತ್ರೆ ಮಾಡುತ್ತೇನೆ: ಪ್ರದೀಪ್ ಈಶ್ವರ್

• ಉದಯವಾಹಿನಿ,ಬೆಂಗಳೂರು

ಚಿಕ್ಕಬಳ್ಳಾಪುರ ಹೂವಿನ ಮಾರ್ಕೆಟ್ ನಲ್ಲಿ ನೂರಾರು ಕೋಟಿ ಅವ್ಯವಹಾರ ನಡೆಯುತ್ತಿದೆ. ಕಮಿಷನರ್ ಏಜೆಂಟ್‌ಗಳಾಗಿ ಬಿಜೆಪಿ ಮುಖಂಡರು ಇದ್ದಾರೆ ಎಂದು ಆರೋಪಿಸಿ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಅವರು ಬಿಜೆಪಿ ಕಚೇರಿಗೆ ಪಾದಯಾತ್ರೆ ಕೈಗೊಳ್ಳುವ ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಚಿಕ್ಕಬಳ್ಳಾಪುರ ಹೂವಿನ ಮಾರುಕಟ್ಟೆಯಲ್ಲಿ ರೈತರಿಗೆ ಅನ್ಯಾಯ ಆಗುತ್ತಿದೆ ಎಂದು ಆರೋಪಿಸಿದರು. ಹೂವಿನ ಮಾರುಕಟ್ಟೆಯಲ್ಲ 85 ಜನ ಕಮಿಷನ್ ಏಜಂಟ್ ಇದ್ದಾರೆ.

ಅವರಲ್ಲಿ 70 ಕ್ಕೂ ಹೆಚ್ಚು ಜನ ಬಿಜೆಪಿ ಮುಖಂಡರು ಬಿಜೆಪಿ ಜಿಲ್ಲಾ ಕಾರ್ಯದರ್ಶಿ, ಬಿಜೆಪಿ ಮುಖಂಡರು ಹಾಗೂ ಬಿಜೆಪಿಯ ಪದಾಧಿಕಾರಿಗಳೇ ಇಲ್ಲಿ ವರ್ತಕರಾಗಿದ್ದಾರೆ. ಇವರೆಲ್ಲಾ ಬಿಜೆಪಿ ಸಕ್ರಿಯ ಸದಸ್ಯರು. ಟ್ರೇಡಿಂಗ್ ಲೈಸೆನ್ಸ್, ಕಮಿಷನ್ ಲೈಸೆನ್ಸ್ ಇಟ್ಟುಕೊಂಡು ರೈತರಿಂದ ಹಣ ತೆಗೆದುಕೊಳ್ತಿದ್ದಾರೆ ಎಂದು ಆರೋಪಿಸಿದರು. ಟ್ರೇಡರ್ ಹತ್ರ ಕಮಿಷನ್ ಏಜೆಂಟ್ 3% ಕಮಿಷನ್ ಪಡೆದುಕೊಳ್ಳಬೇಕು. ಆದರೆ ರೈತರ ಬಳಿ ಒಂದು ರೂಪಾಯಿ ಕೂಡ ಕಮಿಷನ್ ತೆಗೆದುಕೊಳ್ಳಬಾರದು ಎಂದಿದೆ. ಹಾಗಿದ್ದರೂ ಬಿಜೆಪಿಯ ಪದಾಧಿಕಾರಿಗಳಾದ ಏಜೆಂಟ್‌ಗಳು 10% ಕಮಿಷನ್ ವಸೂಲಿ ಮಾಡುತ್ತಿದ್ದಾರೆ ಎಂದು ಪ್ರದೀಪ್ ಈಶ್ವರ್ ಆರೋಪ ಮಾಡಿದರು.

## ಶೌಚಾಲಯ ನಿರ್ಮಾಣ:ರಾಜ್ಯ ಸರ್ಕಾರಕ್ಕೆ ಹೈ ನೋಟಿಸ್

• ಉದಯವಾಹಿನಿ, ಬೆಂಗಳೂರು

ಕನಕಪುರ ತಾಲ್ಲೂಕು ಸಾತನೂರು ಹೋಬಳಿಯ ಕಬ್ಬಾಳು ಗ್ರಾಮದ ಸರ್ಕಾರಿ ಕೆರೆ ಜಾಗದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡುತ್ತಿರುವುದನ್ನು ಆಕ್ಷೇಪಿಸಲಾದ ಅರ್ಜಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಲು ಹೈಕೋರ್ಟ್ ಆದೇಶಿಸಿದೆ. ಈ ಸಂಬಂಧ ಕಬ್ಬಾಳು ಗ್ರಾಮದ ಸಾಮಾಜಿಕ ಕಾರ್ಯಕರ್ತ ರವಿಕುಮಾರ್ ಕಂಚನಹಳ್ಳಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಬ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಅರ್ಜಿದಾರರ ಪರ ಹೈಕೋರ್ಟ್ ವಕೀಲೆ ಮಾನಸಿ ಶರ್ಮ ಅವರ ವಾದ ಆಲಿಸಿದ ನ್ಯಾಯಪೀಠ, ಪ್ರತಿವಾದಿಗಳಾದ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ, ಬೆಂಗಳೂರು ದಕ್ಷಿಣ ಜಿಲ್ಲಾಧಿಕಾರಿ, ಬೆಂಗಳೂರು ದಕ್ಷಿಣ ಉಪವಿಭಾಗಾಧಿಕಾರಿ, ಕನಕಪುರ ತಹಶೀಲ್ದಾರ್, ಬಿಡದಿ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿತು.

## ಇದು ನನ್ನ ವಿರುದ್ಧ ದೊಡ್ಡ ಕುತಂತ್ರದ ಭಾಗ: ತಿಮ್ಮಾಪುರ

• ಉದಯವಾಹಿನಿ, ಬೆಂಗಳೂರು

ಉದ್ದೇಶಪೂರಕವಾಗಿ ಭ್ರಷ್ಟಚಾರ ಆರೋಪ ಮಾಡಲಾಗುತ್ತಿದ್ದು, ಇದು ನನ್ನ ವಿರುದ್ಧ ದೊಡ್ಡ ಕುತಂತ್ರದ ಭಾಗವಾಗಿದೆ. ಈ ಸಂಬಂಧ ಕಾನೂನು ಹೋರಾಟ ನಡೆಸುತ್ತೇನೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಹೇಳಿದ್ದಾರೆ. ಅಬಕಾರಿ ಇಲಾಖೆಯಲ್ಲಿ ಸಿಎಲ್ ಪರವಾನಗಿ ನೀಡಲು ಲಂಚಕ್ಕೆ ಬೇಡಿಕೆ ಇಡಲಾಗಿದೆ ಎಂದು ಆರೋಪಿಸಿ ಆಡಿಯೊ ಒಂದನ್ನು ಹರಿಬಿಡಲಾಗಿದೆ.

ಆದರೆ, ಇದರಲ್ಲಿ ನನ್ನ ಮಗ ಏಕೆ ಬರುತ್ತಾನೆ ಆಡಿಯೋದಲ್ಲಿ ಅನೇಕರ ಹೆಸರನ್ನು ಹೇಳುತ್ತಾರೆ. ಇಂತಹ ಆರೋಪಗಳು ನನಗೆ ಬೇಸರ ತಂದಿದ್ದು, ನಾನು ಕಾನೂನು ಹೋರಾಟ ನಡೆಸುತ್ತೇನೆ ಎಂದರು. ನನ್ನ ತೇಜೋವಧೆ ಮಾಡುವ ಕೆಲಸ ನಡೆದಿದೆ. ಕಾನೂನು ಕ್ರಮ ಕೈಗೊಳ್ಳಲು ಅವಕಾಶ ಕೊಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡುತ್ತೇನೆ. ಅಲ್ಲದೆ, ಈ ಪ್ರಕರಣದಲ್ಲಿ ನನ್ನದು ಯಾವುದೇ ರೀತಿಯ ತಪ್ಪಿಲ್ಲ. ಒಟ್ಟಿನಲ್ಲಿ ಕಾನೂನು ಸಲಹೆಗಾರರ ಸಲಹೆ ಪಡೆದು ಕಾನೂನು ಹೋರಾಟ ಮಾಡುತ್ತೇನೆ ಎಂದು ಹೇಳಿದರು.ಪಡೆಯುವ ಮೂಲಕ ಸಿ.ಟಿ.ರವಿ ಗೆಲುವು ಸಾಧಿಸಿದರು.



# 140 ಶಾಸಕರ ಬೆಂಬಲ

### ಬಂಡೆಗೆ ಆನೆಬಲ

**ಕೊಟ್ಟ ಮಾತು ಉಳಿಸಿಕೊಳ್ಳುವಂತೆ ಹೈಕಮಾಂಡ್ ಬೆನ್ನುಬಿದ್ದ ಡಿಕೆಶಿ**

**ಕಾಲವೇ ಉತ್ತರ ನೀಡಲಿದೆ ಎಂದ್ರು!**

**ದೆಹಲಿ ಭೇಟಿಯ ಗುಟ್ಟು ಬಿಚ್ಚಿಟ್ಟ ಡಿಸಿಎಂ**

**ಮತ್ತೆ ಅಧಿಕಾರ ಹಂಚಿಕೆ ಸದ್ದು**



### ಚಾಲುಕ್ಯ ಉತ್ಸವಕ್ಕೆ ಸಿಎಂ ಚಾಲನೆ

ಬಾದಾಮಿ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿ ಪ್ರಸ್ತುತ ಸರ್ಕಾರದ ಅವಧಿಯಲ್ಲಿಯೂ ಮುಂದುವರಿಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ. ಬಾದಾಮಿಯ ಐತಿಹಾಸಿಕ ಪರಂಪರೆಯನ್ನು ಸಾರುವ ಚಾಲುಕ್ಯ ಉತ್ಸವ ಕಳೆದು ಹತ್ತು ವರ್ಷಗಳಿಂದ ನಡೆದಿರಲಿಲ್ಲ. ಆದರೆ 2025-26ರ ಬಜೆಟ್‌ನಲ್ಲಿ ಘೋಷಿಸಿದಂತೆ ಈಗ ಚಾಲುಕ್ಯ ಉತ್ಸವಕ್ಕೆ ಚಾಲನೆ ನೀಡಲು ಸಂತೋಷವಾಗುತ್ತಿದೆ ಎಂದು ಸಿಎಂ ತಿಳಿಸಿದ್ದಾರೆ. ಬಾದಾಮಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಬಾದಾಮಿಯ ಶ್ರೀಮಂತ ಐತಿಹಾಸಿಕ ಪರಂಪರೆಯನ್ನು ಪ್ರದರ್ಶಿಸುವ ಚಾಲುಕ್ಯ ಉತ್ಸವವನ್ನು ಉದ್ಘಾಟಿಸಲು ಸಂತೋಷವಾಗುತ್ತಿದೆ ಎಂದರು. ಬಾದಾಮಿ ಕ್ಷೇತ್ರದ ಅಭಿವೃದ್ಧಿಯ ಕುರಿತಾದ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, ಕಳೆದ ಬಾರಿ ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಬಾದಾಮಿ ಕ್ಷೇತ್ರದ ಅಭಿವೃದ್ಧಿಗೆ ಅನೇಕ ಯೋಜನೆಗಳನ್ನು ಕೈಗೊಳ್ಳಲಾಗಿತ್ತು.

### ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ

**ಇವಿಎಂ ಅಥವಾ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸುವ ವಿಚಾರಕ್ಕೆ ಸಂಬಂಧಿಸಿ**




**ಮಾತನಾಡಿದ ಅವರು, ‘‘ಮತದಾನವನ್ನು ಇವಿಎಂ ಮೂಲಕ ನಡೆಸಬೇಕೋ ಅಥವಾ ಬ್ಯಾಲೆಟ್ ಪೇಪರ್ ಮೂಲಕ ನಡೆಸಬೇಕೋ ಎಂಬುದು ಚುನಾವಣಾ ಆಯೋಗದ ನಿರ್ಧಾರ. ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸುವುದರಿಂದ ತಪ್ಪೇನಿದೆ ಬ್ಯಾಲೆಟ್ ಬುಲೆಟ್‌ಗಿಂತ ಸ್ಟ್ರಾಂಗ್’’ ಎಂದು ಹೇಳಿದರು.**

• ಉದಯವಾಹಿನಿ, ಬೆಂಗಳೂರು

ಸಿಎಂ ಸೇರಿ ಕಾಂಗ್ರೆಸ್ ಪಕ್ಷದ 140 ಶಾಸಕರೂ ನನ್ನ ಬೆಂಬಲಕ್ಕೆ ಇದ್ದಾರೆ. ನಮ್ಮ ನಡುವೆ ಏನು ಚರ್ಚೆಯಾಗಿದೆ ಎಂದು ನಮಗೆ ಗೊತ್ತು, ಇದನ್ನು ಸಾರ್ವಜನಿಕವಾಗಿ ಚರ್ಚೆ ಮಾಡುವುದಿಲ್ಲ’’ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮದವರ ಜೊತೆ ಮಾತನಾಡಿ, ನಿಮ್ಮ ಬೆಂಬಲಿಗರು ಹೈಕಮಾಂಡ್ ತೀರ್ಮಾನದ ಬಗ್ಗೆ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದಾರೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಡಿಕೆಶಿ, ಯಾರು ಹೇಳಿದರು 140 ಶಾಸಕರು ಕೂಡ ನನ್ನ ಬೆಂಬಲಿಗರೇ. ಸಿಎಂ ಸಿದ್ದರಾಮಯ್ಯ ಅವರು ಕೂಡ ನನಗೆ ಬೆಂಬಲವಾಗಿದ್ದಾರೆ. ನಾನು ಹಾಗೂ ಸಿಎಂ ಅವರು ಏನು ಮಾತನಾಡಿದ್ದೇವೆ ಎಂದು ನಿಮಗೆ ಗೊತ್ತಿದೆಯಾ ರಾಹುಲ್ ಗಾಂಧಿ ಸಮ್ಮುಖದಲ್ಲಿ ನಾವು ಏನು ಮಾತನಾಡಿಕೊಂಡಿದ್ದೇವೆ, ಹೈಕಮಾಂಡ್ ಸಮ್ಮುಖದಲ್ಲಿ ಏನು ಮಾತನಾಡಿದ್ದೇವೆ, ಎಲ್ಲಾ ಕೂತು ಏನು ತೀರ್ಮಾನ ಮಾಡಿದ್ದೇವೆ ಎಂದು ನಮಗೆ ಗೊತ್ತಿದೆ. ಈ ವಿಚಾರವನ್ನು ನಿಮ್ಮ ಮುಂದೆ ಬಹಿರಂಗವಾಗಿ ಚರ್ಚೆ ಮಾಡಲು ಸಾಧ್ಯವೇ ಕಾಲವೇ ಎಲ್ಲದಕ್ಕೂ ಉತ್ತರ ನೀಡಲಿದೆ ಎಂದರು.

ನಾವು ದೆಹಲಿಗೆ ಹೋಗುವುದೇ ರಾಜಕೀಯ, ಪಕ್ಷ, ಸರ್ಕಾರದ ಕೆಲಸಗಳಿಗೆ. ಮಾಧ್ಯಮಗಳು ರಾಹುಲ್ ಗಾಂಧಿ ಭೇಟಿಯಾಗಿಲ್ಲ ಎಂದು ಬರೆದಿದ್ದೀರಿ. ಒಂದು ದಿನ ನಾವು ಜೊತೆಯಲ್ಲಿ ಕೂತು ಚರ್ಚೆ ಮಾಡಿರುವ ಫೋಟೋ ವರದಿ ಮಾಡಿದ್ದೀರಿ, ಮರುದಿನ ಭೇಟಿಯೇ ಆಗಿಲ್ಲ ಎಂದು ಹೇಳುತ್ತಿದ್ದೀರಿ. ಈ ವಿಚಾರದಲ್ಲಿ ಕಾಲವೇ ಉತ್ತರ ನೀಡಲಿದೆ ಎಂದು ಹೇಳಿದ್ದೇನೆ. ಇದರ ಹೊರತಾಗಿ ನಾನು ಬೇರೆ ವಿಚಾರ ಚರ್ಚೆ ಮಾಡುವುದಿಲ್ಲ ಎಂದು ತಿಳಿಸಿದರು. ಹೈಕಮಾಂಡ್ ಒಳ್ಳೆಯ ಸುದ್ದಿ ನೀಡಲಿದೆ ಎಂದು ನಿಮ್ಮ ಸಹೋದರ ಹೇಳಿದ್ದಾರೆ ಎಂದು ಕೇಳಿದಾಗ, ನನ್ನ ತಮ್ಮ, ನಮ್ಮ ಕಾರ್ಯಕರ್ತರು, ಮಾಧ್ಯಮಗಳು ಕೂಡ ಹೇಳುತ್ತಿವೆ ಎಂದರು.

**ಒಂದೇ ಬಾರಿಗೆ ಚುನಾವಣೆ ನಡೆಸಲು ಚಿಂತನೆ:** ನ್ಯಾಯಾಲಯ ಆದೇಶ ನೀಡಿದೆ. ನಮ್ಮ ಸರ್ಕಾರ ಸಂವಿಧಾನದ 73, 74ನೇ ತಿದ್ದುಪಡಿಗೆ ಬದ್ಧವಾಗಿದೆ. ಯುವಕರಿಗೆ ಅಧಿಕಾರ ನೀಡಬೇಕು, ಹೊಸ ಪೀಳಿಗೆ ಅಧಿಕಾರಕ್ಕೆ ಬರಬೇಕು. ಈಗ ಐದು ಪಾಲಿಕೆಗಳಿಂದ 369 ವಾರ್ಡ್‌ಗಳನ್ನು ರಚಿಸಲಾಗಿದೆ. ಇನ್ನು ಬೆಂಗಳೂರಿನ ಹೊರವಲಯವನ್ನು ಪಾಲಿಕೆ ವ್ಯಾಪ್ತಿಗೆ ಸೇರಿಸಿಕೊಳ್ಳುವ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದರು. ಜಿಲ್ಲಾ ಹಾಗೂ ತಾಲ್ಲೂಕ ಪಂಚಾಯತ್ ಚುನಾವಣೆ ನಡೆಸಲು ನಮ್ಮ ಸರ್ಕಾರ ತೀರ್ಮಾನಿಸಿದೆ. ಇವುಗಳಿಗೆ ಇದ್ದ ಮೀಸಲಾತಿ ಸಮಸ್ಯೆ ಬಗೆಹರಿಸಲು ಸಿಎಂ ಹಾಗೂ ಸಚಿವರು ತಿಳಿಸಿದ್ದಾರೆ. ಗ್ರಾಮ ಪಂಚಾಯತ್ ಚುನಾವಣೆಗಳನ್ನೂ ಪಕ್ಷದ ಚಿಹ್ನೆ ಮೇಲೆ ನಡೆಸಬೇಕು ಎಂದು ಅನೇಕರು ಸಲಹೆ ನೀಡಿದ್ದು, ನಾವಿನ್ನೂ ಆ ಬಗ್ಗೆ ತೀರ್ಮಾನ ಮಾಡಿಲ್ಲ. ಒಂದೇ ಬಾರಿಗೆ ಎಲ್ಲವನ್ನು ನಡೆಸಲು ಚಿಂತನೆ ನಡೆಯುತ್ತಿದೆ’’ ಎಂದು ಹೇಳಿದರು.ಈ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಮತಯಂತ್ರದ ಹೊರತಾಗಿ ಮತಪತ್ರ ಬಳಸುವ ಬಗ್ಗೆ ಪ್ರತಿಕ್ರಿಯಿಸುತ್ತಾ, ನನಗೂ ಈ ಬಗ್ಗೆ ಮಾಹಿತಿ ಬಂದಿದೆ. ಇದು ರಾಜ್ಯ ಚುನಾವಣಾ ಆಯೋಗಕ್ಕೆ ಬಿಟ್ಟ ವಿಚಾರ. ಮತಪತ್ರ ಬಳಸುವುದರಲ್ಲಿ ತಪ್ಪೇನು ಇಲ್ಲ. ಯಾವ ರೂಪದಲ್ಲಿ ಚುನಾವಣೆ ನಡೆಸಲಾಗುವುದು.

### ದಾವೋಸ್ ಪ್ರಯಾಣ

ದೆಹಲಿಯಿಂದ ನನ್ನ ಪ್ರವಾಸಕ್ಕೆ ಅನುಮತಿ ಸಿಕ್ಕಿದೆ. ನಮ್ಮ ನಾಯಕರಾದ ಸಿದ್ದರಾಮಯ್ಯ ಅವರು ಕೂಡ ತೆರಳುವಂತೆ ತಿಳಿಸಿದ್ದಾರೆ. ದಾವೋಸ್ ಸಭೆಯಲ್ಲಿ ಭಾಗವಹಿಸಬೇಕು ಎಂದು ನನಗೆ ಕರೆಗಳು ಬರುತ್ತಿವೆ. ನಮ್ಮ ವಿರೋಧ ಪಕ್ಷಗಳ ಸ್ನೇಹಿತರೂ ನನಗೆ ಇದೇ ಸಲಹೆ ನೀಡುತ್ತಿದ್ದಾರೆ. ಹೀಗಾಗಿ ತೆರಳುತ್ತಿದ್ದೇನೆ. ರಾಜ್ಯದ ಹಿತದ ವಿಚಾರದಲ್ಲಿ ಕೆಲವೊಮ್ಮೆ ಅವರ ಸಲಹೆಗಳನ್ನು ಸ್ವೀಕರಿಸಬೇಕಲ್ಲವೇ ಎಂದು ತಿಳಿಸಿದರು. ರಾಜಕೀಯಕ್ಕಾಗಿ ದಾವೋಸ್ ಪ್ರವಾಸ ಕೈಬಿಟ್ಟಿರುವುದು ಸರಿಯಲ್ಲ ಎಂಬ ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, ಅವರ ಮಾತಿನಲ್ಲಿ ಅರ್ಥವಿದೆ ಎಂದರು.

ದೆಹಲಿ ಪ್ರವಾಸದಲ್ಲಿ ರಾಜಕೀಯ, ಪಕ್ಷದ ವಿಚಾರ ಚರ್ಚೆ ಮಾಡುವುದರ ಜತೆಗೆ ನಿಮ್ಮ ವಿಚಾರ ಏನಾಯ್ತು ಎಂದು ಕೇಳಿದಾಗ, ‘‘ನನ್ನ ವಿಚಾರಲ್ಲಿ ಪಕ್ಷ ಏನು ಹೇಳುತ್ತದೆಯೋ ಅದನ್ನು ಕೇಳುತ್ತೇವೆ

### ಹೈಕಮಾಂಡ್ ತೀರ್ಮಾನಕ್ಕೆ ಬದ್ಧವಾಗಿರಲು ಒಮ್ಮತದ ನಿರ್ಧಾರ

ಎಂದು ನಾನು ಹಾಗೂ ಸಿಎಂ ಒಮ್ಮತದ ತೀರ್ಮಾನಕ್ಕೆ ಬಂದಿದ್ದೇವೆ. ನಿಮ್ಮ ಟಿಆರ್‌ಪಿಗೆ ಎಂದು ಗಡಿಬಿಡಿಯಾಗಿದೆ’’ ಎಂದು ತಿಳಿಸಿದರು. ನಿಮ್ಮ ಶಾಸಕರೇ ಚರ್ಚೆ ಮಾಡುತ್ತಾರೆ ಎಂದು ಕೇಳಿದಾಗ, ‘‘ಶಾಸಕರಿಗೆ ಆಸೆ ಇರುತ್ತದೆ. ಅದರಲ್ಲಿ ತಪ್ಪೇನಿರುತ್ತದೆ. ಅದನ್ನು ಸರಿಯಲ್ಲ ಎಂದು ಹೇಳಲು ಸಾಧ್ಯವೇ ನಾವು ಅವರ ಕಿವಿಯಲ್ಲಿ ಏನೋ ಹೇಳಿರುತ್ತೇವೆ. ಅವರು ಖುಷಿಯಿಂದ ಕಾಯುತ್ತಿರುತ್ತಾರೆ’’ ಎಂದು ತಿಳಿಸಿದರು.ನೀವು ಬಹಳ ಕಷ್ಟಪಟ್ಟಿದ್ದೀರಿ ಎಂದು ಕೇಳುತ್ತಿದ್ದೇವೆ ಎಂದಾಗ, ‘‘ನಾನೊಬ್ಬನೇ ಕಷ್ಟಪಟ್ಟಿಲ್ಲ. ಎಲ್ಲರೂ ಕಷ್ಟಪಟ್ಟಿದ್ದಾರೆ. 224 ಕ್ಷೇತ್ರಗಳಲ್ಲಿ ಕಾರ್ಯಕರ್ತರು ಹಗಲು ರಾತ್ರಿ ದುಡಿದಿದ್ದಾರೆ. ಕೋವಿಡ್ ಸಂದರ್ಭದಲ್ಲಿ ಕಾರ್ಯಕರ್ತರು ದುಡಿದಿರುವುದನ್ನು ನಾವು ಸದಾ ಸ್ಮರಿಸಬೇಕು.

## ಡಿಜೆಪಿ ರಾಮಚಂದ್ರ ರಾವ್ ಅಶ್ಲೀಲ ವಿಡಿಯೋ ಎಷ್ಟೇ ದೊಡ್ಡ ಅಧಿಕಾರಿಯಾದರೂ ಬಿಡಲ್ಲ: ಸಿಎಂ

• ಉದಯವಾಹಿನಿ,ಬೆಂಗಳೂರು

ಡಿಜಿಪಿ ರಾಮಚಂದ್ರ ರಾವ್ ರಾಸಲೀಲೆ ವಿಡಿಯೋ ಕುರಿತಂತೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದಾರೆ. ಎಷ್ಟೇ ದೊಡ್ಡ ಅಧಿಕಾರಿಯಾದರೂ ಬಿಡುವುದಿಲ್ಲ. ತನಿಖೆ ಮಾಡಿ ಶಿಸ್ತು ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದ್ದಾರೆ.

ಬೆಳಗಾವಿಯಲ್ಲಿ ಮಾಧ್ಯಮಗಳಿಗೆ ಮಾತನಾಡಿದ ಸಿಎಂ, ನನಗೆ ಮುಂಜಾನೆ ಈ ವಿಚಾರ ಗೊತ್ತಾಗಿದೆ. ವಿಚಾರಣೆ ಮಾಡಿಸಿ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುತ್ತೇವೆ. ಕಾನೂನು ಮುಂದೆ ಯಾರೂ ದೊಡ್ಡವರಲ್ಲ. ಎಷ್ಟೇ ಎತ್ತರ ವ್ಯಕ್ತಿಯಾದರೂ ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ. ಕಡ್ಡಾಯವಾಗಿ ಕ್ರಮ ಕೈಗೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದರು.

**ಯಾರೆ ಆದ್ರು, ತಪ್ಪು ಮಾಡಿದ್ರೂ, ಕ್ರಮ ಖಂಡಿತ**

ಡಿಜಿಪಿ ರಾಮಚಂದ್ರ,ರಾವ್ ರಾಸಲೀಲೆ ಪ್ರಕರಣದ ಕುರಿತು ಬೆಳಗಾವಿಯ ನಂದಗಡದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಪ್ರಕ್ರಿಯೆ ನೀಡಿದ್ದಾರೆ. ಯಾರೇ ತಪ್ಪು ಮಾಡಿದ್ರೂ, ಕಾನೂನು ರೀತಿ ಕ್ರಮ ಆಗಲಿ. ತಪ್ಪು ಮಾಡಿದ್ರೆ, ಖಂಡಿತವಾಗಿ ಶಿಕ್ಷೆ ಕೊಡುತ್ತೇವೆ. ಮಹಿಳೆಯರ ಮೇಲೆ ದೌರ್ಜನ್ಯ ಎಸಗಿದ್ರೆ, ಎಷ್ಟೇ ದೊಡ್ಡ ಅಧಿಕಾರಿ ಆದ್ರೂ, ಕ್ರಮವಾಗುತ್ತೆ ಎಂದರು.



**ಗೊತ್ತಿಲ್ಲ ಎನ್ನುವುದು ಉತ್ತರವಲ್ಲ**

ರಾಮಚಂದ್ರ ರಾವ್ ವಿಡಿಯೋ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಬಿಜೆಪಿ ಶಾಸಕ ಎಸ್ ಸುರೇಶ್ ಕುಮಾರ್ ಕಿಡಿಕಾರಿದ್ದಾರೆ. ಈ ಬಗ್ಗೆ ಪೋಸ್ಟ್ ಮಾಡಿರುವ ಅವರು, ಈಗಲೂ ನನಗೆ ಗೊತ್ತಿಲ್ಲ ಎನ್ನುವುದು ಉತ್ತರವಾಗಬಾರದು. ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಪೊಲೀಸ್ ಅಧಿಕಾರಿ ರಾಮಚಂದ್ರ,ರಾವ್ ರವರ ಘನಕಾರ್ಯ ಅಕ್ಷಮ್ಯ ಅಪರಾಧ. ಹಿರಿಯ ಪೊಲೀಸ್ ಅಧಿಕಾರಿ ಶ್ರೀ ರಾಮಚಂದ್ರ, ರಾವ್ ಇಡೀ ಪೊಲೀಸ್ ಇಲಾಖೆಗೆ ಕಳಂಕ ಮೆತ್ತುವ ಕಾರ್ಯವೆಸಗಿದ್ದಾರೆ. ಹಿಂದೆ ಅವರ ಹೆಸರು ಮತ್ತು ಸ್ಥಾನದ ದುರುಪಯೋಗ ಮಾಡಿಕೊಂಡು ಭಾರಿ ಪ್ರಮಾಣದ ಚಿನ್ನದ ಸ್ಮಗ್ಲಿಂಗ್ ನಡೆದಿದ್ದಾಗ ಈ ಅಧಿಕಾರಿಯನ್ನು ಕಡ್ಡಾಯ ರಜೆಯ ಮೇಲೆ ಕಳಿಸಿ ಸರ್ಕಾರ ಕೈ ತೊಳೆದುಕೊಂಡಿತ್ತು ಎಂದಿದ್ದಾರೆ. ಇದೀಗ ಪ್ರಕಟವಾಗಿರುವ ಈ ಪೊಲೀಸ್ ಅಧಿಕಾರಿಯ ಘನಂಧಾರಿ ಕಾರ್ಯವನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಶೀಲಿಸಬೇಕು. ಮತ್ತೆ ಕಡ್ಡಾಯ ರಜೆ ಮೇಲೆ ಕಳಿಸಿ ಕೈ ತೊಳೆದುಕೊಳ್ಳುವುದು ಸರ್ಕಾರಕ್ಕೆ ಭೂಷಣವಲ್ಲ.

ಸಮವಸ್ತ್ರದಲ್ಲಿಯೇ, ತನ್ನ ಕಚೇರಿಯಲ್ಲಿಯೇ ಈ ಹಿರಿಯ ಅಧಿಕಾರಿ ಮಾಡಿರುವ ಕೃತ್ಯ ಪೊಲೀಸ್ ಇಲಾಖೆಯನ್ನೇ ಸಂಶಯದಿಂದ ಅನುಮಾನದಿಂದ ನೋಡುವಂತಾಗಿದೆ. ಡಿಜಿಪಿ ಎಂಬ ಅತ್ಯಂತ ಜವಾಬ್ದಾರಿಯುತ ಹೆಸರಿಗೆ ಈ ವ್ಯಕ್ತಿ ಇಂದು ಅಪಚಾರ ವೆಸಗಿದ್ದಾರೆ. ಸಮಾಜಕ್ಕೆ ಒಳ್ಳೆಯ ಸಂದೇಶ ಕಳಿಸಬೇಕೆಂದರೆ, ಸರ್ಕಾರ ಈ ಬಗ್ಗೆ ತುರ್ತು ಮತ್ತು ಪರಿಣಾಮಕಾರಿ ಕ್ರಮವನ್ನು ಘೋಷಿಸಬೇಕು. ಇಲ್ಲದಿದ್ದರೆ ಇಡೀ ಆಡಳಿತವೇ ಕಡ್ಡಾಯ ರಜೆ ಮೇಲೆ ಹೋದಂತೆ ಜನ ಭಾವಿಸುತ್ತಾರೆ ಎಂದು ಸುರೇಶ್ ಕುಮಾರ್ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ.

## ಗೃಹ ಲಕ್ಷ್ಮೀ ಯೋಜನೆ ಎರಡು ತಿಂಗಳ ಬಾಕಿ ಹಣ ಬಿಡುಗಡೆ

**■ ರಾಜ್ಯ ಸರ್ಕಾರದ ಮಹತ್ವದ ಯೋಜನೆ ಗೃಹ ಲಕ್ಷ್ಮೀ ■ ಎರಡು ತಿಂಗಳ ಗೃಹ ಲಕ್ಷ್ಮೀ ಹಣ ಆಗಿಲ್ಲ ಪಾವತಿ**

• ಉದಯವಾಹಿನಿ, ಬೆಂಗಳೂರು

ಎರಡು ತಿಂಗಳ ಗೃಹ ಲಕ್ಷ್ಮೀ ಹಣವನ್ನು ಸರ್ಕಾರ ಬಿಡುಗಡೆ ಮಾಡಿದೆ. ಆದಷ್ಟು ಬೇಗ ಫಲಾನುಭವಿಗಳ ಖಾತೆಗೆ ಜಮಾ ಆಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಬೆಳಗಾವಿಯಲ್ಲಿ ಸೋಮವಾರ ಮಾತನಾಡಿದ ಅವರು, ಆಧುನಿಕ ಕಾಲದಲ್ಲಿ ಸ್ವಾತಂತ್ರ್ಯ ತಂದು ಕೊಟ್ಟುವರನ್ನು ನಾವು ಬೆಳಕಿಗೆ ತರಬೇಕು. ಇಂದು ಚುನಾವಣೆ ಸಂದರ್ಭದಲ್ಲಿ ಜಾತಿ ಜಾತಿ ಮಧ್ಯೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ನಾವು ಅಭಿವೃದ್ಧಿ ಕೆಲಸದ ಕಡೆ ಮಾತ್ರ ಗಮನ ಕೊಡುತ್ತೇವೆ ಎಂದ ಅವರು, ಎರಡು ತಿಂಗಳ ಗೃಹ ಲಕ್ಷ್ಮೀ ಹಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಡುಗಡೆ ಮಾಡಿದ್ದಾರೆ. ಆದಷ್ಟು ಬೇಗ ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುವುದು ಎಂದರು.

ಎರಡು ತಿಂಗಳ ಗೃಹ ಲಕ್ಷ್ಮೀ ಹಣ ಬಿಡುಗಡೆ ಆಗಿಲ್ಲ ಎಂದು ಬೆಳಗಾವಿ ಅಧಿವೇಶನದಲ್ಲಿ ದೊಡ್ಡ ಮಟ್ಟದಲ್ಲಿ ಗಲಾಟೆ, ಗದ್ದಲಕ್ಕೆ ಕಾರಣವಾಗಿತ್ತು. ಹಣ ಏಕೆ ಬಿಡುಗಡೆ ಮಾಡಿಲ್ಲ ಎಂದು ಬಿಜೆಪಿ ನಾಯಕರು ಪ್ರಶ್ನಿಸಿದ್ದರು. ಇದಕ್ಕೆ ಉತ್ತರ ನೀಡಿದ್ದ ಲಕ್ಷ್ಮೀ ಹೆಬ್ಬಾಳ್ಕರ್, ಮಹಿಳೆ ಎಂಬ ಕಾರಣಕ್ಕಾಗಿ ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದರು.

ನಮ್ಮ ಸರ್ಕಾರದಿಂದ ಇಡೀ ದೇಶವೇ ಮೆಚ್ಚುವಂಥ ಕೆಲಸ




ದೇಶಕ್ಕಾಗಿ ತನ್ನ ಪ್ರಾಣವನ್ನೆ ತ್ಯಾಗ ಮಾಡಿದ ವೀರ ಸಂಗೊಳ್ಳಿ ರಾಯಣ್ಣನ ಪುಣ್ಯ ಭೂಮಿ ನಂದಗಡದಲ್ಲಿ ವೀರ ಭೂಮಿಯನ್ನು ಲೋಕಾರ್ಪಣೆ ಮಾಡುವ ಮೂಲಕ ಇಡೀ ದೇಶವೇ ಮೆಚ್ಚುವಂಥ ಕೆಲಸವನ್ನು ನಮ್ಮ ಸರ್ಕಾರ ಮಾಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

**ಯಾರೆ ಆದ್ರು ತಪ್ಪು ಮಾಡಿದ್ರೂ ಕ್ರಮ ಖಂಡಿತ**

**ಡಿಜಿಪಿ ಶ್ರೇಣಿಯ ಅಧಿಕಾರಿಯ ರಾಸಲೀಲೆ ಪ್ರಕರಣದ ಕುರಿತು ನಂದಗಡದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಪ್ರಕ್ರಿಯೆ ನೀಡಿದ್ದಾರೆ. ಯಾರೇ ತಪ್ಪು ಮಾಡಿದ್ರೂ, ಕಾನೂನು ರೀತಿ ಕ್ರಮ ಆಗಲಿ. ತಪ್ಪು ಮಾಡಿದ್ರೆ, ಖಂಡಿತವಾಗಿ ಶಿಕ್ಷೆ ಕೊಡುತ್ತೇವೆ. ಮಹಿಳೆಯರ ಮೇಲೆ ದೌರ್ಜನ್ಯ ಎಸಗಿದ್ರೆ, ಎಷ್ಟೇ ದೊಡ್ಡ ಅಧಿಕಾರಿ ಆದ್ರೂ, ಕ್ರಮವಾಗುತ್ತೆ ಎಂದರು.**

ನಂದಗಡದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವಸ್ತು ಸಂಗ್ರಹಾಲಯ (ವೀರಭೂಮಿ) ಲೋಕಾರ್ಪಣೆ, ಸಮಾಧಿ ಬಳಿಯ ಕೆರೆಯಲ್ಲಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆ ಅನಾವರಣ ಸಮಾರಂಭ ಮತ್ತು ವಿವಿಧ ಕಾಮಗಾರಿಗಳ ಭೂಮಿ ಪೂಜೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಸರ್ಕಾರಕ್ಕೆ ಮತ್ತು ನಮ್ಮ ಮುಖ್ಯಮಂತ್ರಿಗಳಿಗೆ ನಾನು ಅಭಿನಂದನೆ ಸಲ್ಲಿಸುತ್ತೇನೆ. ಇಂದು ಇಡೀ ರಾಷ್ಟ್ರ ಹೆಮ್ಮೆ ಪಡುವ ಕೆಲಸ ಆಗಿದೆ ಎಂದರು.

ಸಂಗೊಳ್ಳಿ ರಾಯಣ್ಣ ಅಂದರೆ ಧೈರ್ಯ, ಸಂಗೊಳ್ಳಿ ರಾಯಣ್ಣ ಎಂದರೆ ವಿಶ್ವಾಸ, ಅವರ ತ್ಯಾಗ, ದೇಶ ಭಕ್ತಿ ನಮ್ಮ ಕಣ್ಣ ಮುಂದೆ ಕಾಣುತ್ತದೆ. ಸಂಗೊಳ್ಳಿ ರಾಯಣ್ಣನವರ ಹೆಸರು ಹೇಳಿದರೆ ಸಾಕು ಮೈ ರೋಮಾಂಚನ ಆಗುತ್ತೆ. ಇಂಥ ಕ್ರಾಂತಿ ವೀರನನ್ನು 33ನೇ ವಯಸ್ಸಿನಲ್ಲಿ ಗಲ್ಲಿಗೆ ಏರಿಸಲಾಯಿತು. ಕೇವಲ 33ನೇ ವಯಸ್ಸಿನಲ್ಲಿ ತನ್ನ ಕೊರಳನ್ನು ಒಡ್ಡಿದ್ದಾರೆ ಅಂದರೆ ಎಂತಹ ಕ್ರಾಂತಿಕಾರಿ ಇರಬೇಕು ಎಂದು ಸಚಿವರು ಕ್ರಾಂತಿಕಾರಿ ಸಂಗೊಳ್ಳಿ ರಾಯಣ್ಣನ ಹೋರಾಟವನ್ನು ಸ್ಮರಿಸಿದರು.

ಈ ವೇಳೆ ಕಾಗಿನೆಲೆಯ ಕನಕಗುರು ಪೀಠದ ಡಾ.ನಿರಂಜನಾನಂದ ಪುರಿ ಮಹಾಸ್ವಾಮಿಗಳು ಸಮಾರಂಭದ ಸಾನ್ನಿಧ್ಯ ವಹಿಸಿದ್ದರು. ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಸಚಿವರಾದ ಭೈರತಿ ಸುರೇಶ್, ಶಿವರಾಜ್ ತಂಗಡಗಿ, ವಿಧಾನಸಭೆಯ ಮುಖ್ಯ ಸಚೇತಕ ಅಶೋಕ್ ಪಟ್ಟಣ, ಕರ್ನಾಟಕ ಹಣಕಾಸು ಸಂಸ್ಥೆಯ ಅಧ್ಯಕ್ಷ ಹಾಗೂ ಶಾಸಕ ಮಹಾಂತೇಶ್ ಕೌಜಲಗಿ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ.ರೇವಣ್ಣ, ಶಾಸಕರಾದ ವಿಠ್ಠಲ ಹಲಗೇಕರ್, ಬಾಬಾಸಾಹೇಬ್ ಪಾಟೀಲ, ವಿಶ್ವಾಸ್ ವೈದ್ಯ, ಗಣೇಶ್ ಹುಕ್ಕೇರಿ, ಮಹೇಂದ್ರ ತಮ್ಮಣ್ಣವರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮಾಜಿ ಶಾಸಕರಾದ ಅಂಜಲಿ ನಿಂಬಾಳಕರ್ ಉಪಸ್ಥಿತರಿದ್ದರು.

**ಈ ದಿನದ ದರ** ಪೆಟ್ರೋಲ್: 102.98 ₹/L | ಡೀಸೆಲ್ : 91.04 ₹/L | ಬಂಗಾರ: ₹14,624/Gram24ct ₹13,405/Gram22ct | ಬೆಳ್ಳಿ: ₹305.00/Gram

## ಸಂಕ್ರಾಂತಿ ಸುಗ್ಗಿಯ ಪ್ರಯುಕ್ತ ದಿನಸಿ ಕೀಟ್ ಹಾಗೂ ಸೀರೆ ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ .ಆರ್.ಪುರ

ಸೇವೆಯಲ್ಲಿ ಭಗವಂತ ಇದ್ದರೆ ಅದರಿಂದ ಮನಸ್ಸುಂತೃಪ್ತಿ ಕಂಡುಕೊಳ್ಳಬಹದು ಎಂದು ಸಮಾಜಸೇವಕಿ ತೃಪ್ತಿ ರವಿ ರೆಡ್ಡಿ ತಿಳಿಸಿದರು. ಮಹದೇವಪುರ ಕ್ಷೇತ್ರದ ಯಮಲೂರು ವಾರ್ಡಿನ ಆಟೋ ಚಾಲಕರಿಗೆ ಸ್ಟೈಲ್ ಆಂಟ್ ಟ್ರೆಂಡ್ಜ್ ವತಿಯಿಂದ ಸಂಕ್ರಾಂತಿ ಸುಗ್ಗಿಯ ಪ್ರಯುಕ್ತ ದಿನಸಿ ಕೀಟ್ ಹಾಗೂ ಸೀರೆ ವಿತರಣೆ ಮಾಡಿ ಮಾತನಾಡಿದ ಅವರು. ಸಮಾಜಸೇವೆಯಲ್ಲಿ ದೇವರಿದ್ದಾರೆ. ಜನಸೇವೆಯೇ ಜರ್ನಾರ್ಥನನ ಸೇವೆಯೆಂದು ಬದುಕುವುದು ಕಲಿಯೋಣ. ಕಷ್ಟದಲ್ಲಿರುವವರಿಗೆ ಕೈಲಾದ ಸಹಾಯ ಮಾಡುವ ಗುಣಬೆಳೆಸಿಕೊಳ್ಳೊಣ ಎಂದರು. ಆಟೋ ಚಾಲಕರ ಕಷ್ಟಕ್ಕೆ ಸ್ಪಂದಿಸಬೇಕಿದೆ. ಅವರ ನಿಸ್ವಾರ್ಥ ಸೇವೆಗೆ ಗೌರವಿಸವು ಕೆಲಸ ಮಾಡಲಾಗಿದೆ ಎಂದು ನುಡಿದರು. ಕಾರ್ಯಕ್ರಮದಲ್ಲಿ ಸ್ಥಳೀಯ ಆಟೋ ಚಾಲಕರ ಸಂಘದ ಮುಖ್ಯಸ್ಥ ಮುನಿರಾಜು, ವಕೀಲರಾದ ದಯಾನಂದ, ಮುಖಂಡರಾದ ನಾರಾಯಣಸ್ವಾಮಿ, ಮೈಕ್ ಮಂಜು, ಸುಬ್ರಮಣ್ಯ, ಶ್ರೀನಿವಾಸ್.ವಿ, ವಿಮಾಲ ಚಂದ್ರಶೇಖರ್, ನಾಗಸಂದ್ರ ಅಂಜಲ್ಲಿ, ರಾಮಣಜೀ, ರವಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ರಸ್ತೆ ಮಧ್ಯೆ ಗಲಾಟೆ ಮಾಡಿ, ಮಾರಕಾಸ್ತ್ರ ತೋರಿಸಿ ದಂಪತಿಗೆ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ರಸ್ತೆ ಮಧ್ಯೆ ನಿಂತು ಗಲಾಟೆ ಮಾಡಿ, ದಂಪತಿಗೆ ಮಾರಕಾಸ್ತ್ರ ತೋರಿಸಿ ಬೆದರಿಕೆ ಹಾಕಿದ ದ್ವಿಚಕ್ರ ವಾಹನ ಸವಾರನ ಗುರುತು ಪತ್ತೆ ಮಾಡಲಾಗಿದೆ.ವಾಹನ ನೋಂದಣಿ ಸಂಖ್ಯೆಯ ಆಧಾರದ ಮೇಲೆ ಆರೋಪಿ ಅರ್ಬಾಜ್ ಖಾನ್ ಎಂಬುದು ಗೊತ್ತಾಗಿದ್ದು, ಶೀಘ್ರದಲ್ಲಿಯೇ ಬಂಧಿಸಲಾಗುವುದು ಎಂದು ಕಾಡುಗೋಡಿ ಠಾಣೆ ಪೊಲೀಸರು ತಿಳಿಸಿದರು. ಶುಕ್ರವಾರ ಸಂಜೆ 6 ಗಂಟೆ ಸುಮಾರಿಗೆ ದಂಪತಿ ಕಾರಿನಲ್ಲಿ ಹೋಗುವಾಗ ಯಾವುದೋ ಕಾರಣಕ್ಕೆ ದ್ವಿಚಕ್ರ ವಾಹನ ಸವಾರನ ಜತೆ ಜಗಳ ಮಾಡಿಕೊಂಡಿದ್ದಾರೆ. ನಂತರ ವಸತಿ ಸಮುಚ್ಚಯವೊಂದರ ಸಿಗ್ನಲ್ ಬಳಿ ಕಾರು ನಿಲ್ಲಿಸಿದ್ದಾಗ ಬೈಕ್ ನಿಲ್ಲಿಸಿ ಬಂದ ಸವಾರ, ರಸ್ತೆ ಮಧ್ಯೆಯಲ್ಲಿಯೇ ದಂಪತಿ ಜತೆ ಗಲಾಟೆ ಮಾಡಿದ್ದಾನೆ. ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದೆ. ಈ ವೇಳೆ ಆಕ್ರೋಶಗೊಂಡ ಸವಾರ ಮಾರಕಾಸ್ತ್ರ ತೋರಿಸಿ, ಧಮ್ಕಿ ಹಾಕಿದ್ದಾನೆ. ಈ ದೃಶ್ಯ ಕಾರ್‌ನಲ್ಲಿದ್ದ ಡ್ಯಾಶ್ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಇದನ್ನು ಎ.ರೆಡ್ಡಿ ಎಂಬುವರು ಎಕ್‌ನಲ್ಲಿ ಹಂಚಿಕೊಂಡು, ನಗರ ಪೊಲೀಸರಿಗೆ ಟ್ಯಾಗ್ ಮಾಡಿದ್ದರು. ವಿಡಿಯೋ ಹರಿದಾಡಿದ ಬೆನ್ನಲ್ಲೆ ಪೊಲೀಸರು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು, ಬೈಕ್ ಸವಾರನ ಬಂಧನಕ್ಕೆ ಮುಂದಾಗಿದ್ದಾರೆ.

## ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರಿನಲ್ಲಿ ಕುಳಿತ ವ್ಯಕ್ತಿಯಿಂದ ಗನ್ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಕಾರಿನೊಳಗೆ ಕುಳಿತು ವ್ಯಕ್ತಿಯೊಬ್ಬಗನ್ ಪ್ರದರ್ಶಿಸಿ ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಸಿದ ಘಟನೆಯೊಂದು ಬೆಂಗಳೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ. ಬೆಂಗಳೂರು ದಕ್ಷಿಣ ಜಿಲ್ಲೆಯ ತಾಳಕೆರೆ ಹ್ಯಾಂಡ್ ಪೋಸ್ಟ್ ಬಳಿ ಈ ಘಟನೆ ನಡೆದಿದ್ದು, ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಗನ್ ಕಂಡು ರಸ್ತೆಯಲ್ಲಿ ಸಂಚರಿಸುತ್ತಿದ್ದ ವಾಹನ ಸವಾರರು ಮತ್ತು ಸಾರ್ವಜನಿಕರು ಕೆಲಕಾಲ ಆತಂಕಕ್ಕೆ ಒಳಗಾಗಿದ್ದು, ಸ್ಥಳದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ವೈರಲ್ ವಿಡಿಯೋದಲ್ಲಿ ವ್ಯಕ್ತಿ ಪ್ರದರ್ಶಿಸಿರುವ ಗನ್ ಅಸಲಿಯೋ ಅಥವಾ ನಕಲಿಯೋ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ವಿಡಿಯೋ ಕುರಿತು ಸಾರ್ವಜನಿಕರಿಂದ ಆಕ್ರೋಶಗಳು ವ್ಯಕ್ತವಾಗಿವೆ. ಈ ಕುರಿತು ಕುದೂರು ಪೊಲೀಸ್ ಠಾಣೆಯಲ್ಲಿ ಸ್ವಯಂಪ್ರೇರಿತ ಪ್ರಕರಣ ದಾಖಲಾಗಿದ್ದು, ಕಾರಿನ ಮಾಲೀಕನನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆಂದು ತಿಳಿದುಬಂದಿದೆ.

## ಕೆನರಾ ಬ್ಯಾಂಕ್‌ಗೆ ರೂ. 3 ಕೋಟಿ ವಂಚನೆ: ಮ್ಯಾನೇಜರ್ ಹುಡುಕಲು ಹೊರ ರಾಜ್ಯಕ್ಕೆ ತಂಡ

• ಉದಯವಾಹಿನಿ, ಬೆಂಗಳೂರು

ಕೆನರಾ ಬ್ಯಾಂಕ್‌ನ ಮಲ್ಲೇಶ್ವರ ಶಾಖೆಗೆ ಸೇರಿದ ರೂ.3.11 ಕೋಟಿಯನ್ನು ದೋಚಿಕೊಂಡು ಪರಾರಿಯಾಗಿರುವ ಹಿರಿಯ ವ್ಯವಸ್ಥಾಪಕ ಎನ್.ರಘು ಅವರ ಪತ್ತೆಗೆ ಪೊಲೀಸರು ವಿಶೇಷ ತಂಡ ರಚಿಸಿದ್ದಾರೆ. ಗ್ರಾಹಕರ ಹೆಸರಿನಲ್ಲಿ ಚಿನ್ನದ ಸಾಲ ತೆಗೆದುಕೊಂಡು ನಾಪತ್ತೆ ಆಗಿರುವ ಆರೋಪಿಗಾಗಿ ಹುಡುಕಾಟ ಮುಂದುವರಿಸಿದ್ದಾರೆ.

ಕೆನರಾ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಸಹಾಯಕ ಪ್ರಧಾನ ವ್ಯವಸ್ಥಾಪಕ ಕಬೀಂದ್ರ ಕುಮಾರ್ ಸಾಹು ಅವರು ನೀಡಿದ ದೂರಿನ ಮೇಲೆ ಪ್ರಕರಣ ದಾಖಲಾಗಿತ್ತು. ವಿವಿಧ ಜಿಲ್ಲೆಗಳಲ್ಲಿ ಪೊಲೀಸರು ಹುಡುಕಾಟ ನಡೆಸಿದ್ದು, ಆರೋಪಿ ಆಂಧ್ರಪ್ರದೇಶದಲ್ಲಿ ಅಡಗಿರುವ ಸುಳಿವು ಸಿಕ್ಕಿದೆ. ಉತ್ತರ ವಿಭಾಗದ ಜಂಟಿ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ವಿಶೇಷ ತಂಡ ಆಂಧ್ರಪ್ರದೇಶಕ್ಕೆ ತೆರಳಿ, ಆರೋಪಿಯ ಬಂಧನಕ್ಕೆ ಮುಂದಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಘು ಅವರು 40ಕ್ಕೂ ಹೆಚ್ಚು ಗ್ರಾಹಕರ ಹೆಸರಿನಲ್ಲಿ ಚಿನ್ನದ ಮೇಲೆ ಸಾಲ ಪಡೆದು, ಆ ಹಣವನ್ನು ತನ್ನ ಖಾತೆಗೆ ವರ್ಗಾವಣೆ ಮಾಡಿಕೊಂಡು ಬ್ಯಾಂಕ್ ಗ್ರಾಹಕರಿಗೆ ವಂಚಿಸಿದ್ದಾರೆ. ಮನೆಯಲ್ಲಿ ಕಷ್ಟವಿದೆ. ನಿಮ್ಮ (ಗ್ರಾಹಕರು) ಹೆಸರಲ್ಲಿ ಸಾಲ ತೆಗೆದುಕೊಳ್ಳುತ್ತೇನೆ. ನನ್ನ ಬಳಿ ಚಿನ್ನವಿದ್ದು ಅದನ್ನು ಅಡಮಾನ ಇರಿಸಿ ಬ್ಯಾಂಕ್‌ನಲ್ಲಿಟ್ಟು ಸಾಲ ತೆಗೆದುಕೊಳ್ಳುತ್ತೇನೆ ಎಂಬುದಾಗಿ ಗ್ರಾಹಕರಿಗೆ ನಂಬಿಸುತ್ತಿದ್ದರು. ಕೆಲವು ಗ್ರಾಹಕರಿಂದ ಸಹಿ ಪಡೆದು ಸಾಲ ಪಡೆದುಕೊಂಡಿದ್ದಾರೆ ಎಂದು ಪೊಲೀಸರು ಹೇಳಿದರು. ಮ್ಯಾನೇಜರ್ ಮಾತು ನಂಬಿದ್ದ ಗ್ರಾಹಕರು, ಬ್ಯಾಂಕ್ ಖಾತೆಯ ವಿವರ, ಆಧಾರ್ ಕಾರ್ಡ್, ಒಟಿಪಿ ನೀಡಿದ್ದರು. ಜತೆಗೆ ರಘು ಅವರು ಚೆಕ್ ಸಹ ಪಡೆದುಕೊಂಡು, ಗ್ರಾಹಕರ ಹೆಸರಿನಲ್ಲಿ ಸಾಲ ಮಂಜೂರಾತಿ ಮಾಡಿಕೊಳ್ಳುತ್ತಿದ್ದರು ಎಂದು ತಿಳಿಸಿದರು. ಬ್ಯಾಂಕಿನ ಮಾರ್ಗಸೂಚಿ ಪ್ರಕಾರ ಚಿನ್ನದ ಸಾಲಗಳ ತ್ರೈಮಾಸಿಕ ಮರುಮೌಲ್ಯಮಾಪನ ಹಾಗೂ ಲೆಕ್ಕ ಪರಿಶೋಧನೆ ನಡೆಸಲಾಗಿತ್ತು.

# ಸುಗ್ಗಿ-ಹುಗ್ಗಿ ಸಾಂಸ್ಕೃತಿಕ ಸಂಭ್ರಮದಲ್ಲಿ ಮಿಂದೆದ್ದ ಜನ

• ಉದಯವಾಹಿನಿ, ಯಲಹಂಕ


ಉದಯವಾಹಿನಿ ಚಿತ್ರ

ಜನಪದ ಕಲೆಗಳ ಅನಾವರಣ, ರಾಶಿಪೂಜೆ, ಆಹಾರ ಮೇಳ, ಕುರಿ-ಎತ್ತುಗಳ ಪ್ರದರ್ಶನ, ಚಿತ್ತಾರದ ರಂಗೋಲಿ, ಬಾನಂಗಣದಲ್ಲಿ ಹಾರಾಡಿದ ಗಾಳಿಪಟ, ಗ್ರಾಮೀಣ ಕ್ರೀಡೆಗಳು, ವಸ್ತು ಪ್ರದರ್ಶನ, ಎತ್ತಿನ ಬಂಡಿಯಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡರ ನೇತೃತ್ವದಲ್ಲಿ ಬ್ಯಾಟರಾಯನಪುರ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಕೆಬಿಜಿ ಸ್ವಯಂ ಸೇವಕರ ಸಂಘದ ಆಶ್ರಯದಲ್ಲಿ ಆಯೋಜಿಸಿದ್ದ ಎರಡು ದಿನಗಳ ಸಂಕ್ರಾಂತಿ ಸುಗ್ಗಿ-ಹುಗ್ಗಿ ಸಾಂಸ್ಕೃತಿಕ ಸಂಭ್ರಮ ಆಚರಣೆಯಲ್ಲಿ ಕಂಡುಬಂದ ದೃಶ್ಯಗಳಿವು.

ಕಬಡ್ಡಿ, ಹಗ್ಗ-ಜಗ್ಗಾಟ, ರಂಗೋಲಿ, ಮಡಕೆ ಹೊಡೆಯುವ ಹಾಗೂ ಮಕ್ಕಳಿಗಾಗಿ ಚಿತ್ರಕಲೆ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಕಬ್ಬಿನ ಜಲ್ಲೆ ಮತ್ತು ಭತ್ತದ ತೆನೆಯಿಂದ ನಿರ್ಮಿಸಿದ್ದ ಮನೆ ಹಾಗೂ ವಿವಿಧ ಆಕಾರದ ಬೆಲ್ಲದ ಹಚ್ಚುಗಳು ಆಕರ್ಷಕವಾಗಿದ್ದವು. 30ಕ್ಕೂ ಅಧಿಕ ತಂಡಗಳು ಜನಪದ ಪ್ರದರ್ಶನ ನೀಡಿದವು. ಸಾರ್ವಜನಿಕರಿಗೆ ಎಳ್ಳು-ಬೆಲ್ಲ, ಅವರೇಕಾಯಿ, ಕಬ್ಬು, ಗೆಣಸು ಹಾಗೂ ಸಿಹಿ-ಖಾರ ಪೊಂಗಲ್ ವಿತರಿಸಲಾಯಿತು.

ಅವರೆಬೇಳೆ ಮೇಳ, ಗೃಹ ಉಪಯೋಗಿ ವಸ್ತುಗಳು, ಬಟ್ಟೆ, ಸಿರಿಧಾನ್ಯ, ಮಣ್ಣಿನ ಮಡಕೆ, ಪಿಒಪಿ ಬೊಂಬೆಗಳು, ಕೃತಕ ಆಭರಣಗಳು, ಸಿರಿಧಾನ್ಯಗಳು, ತಿಂಡಿ-ತಿನಿಸುಗಳು, ಸಾವಯವ ಪದಾರ್ಥಗಳು ಸೇರಿ ವೈವಿಧ್ಯಮಯ ಉತ್ಪನ್ನಗಳ 80ಕ್ಕೂ ಹೆಚ್ಚು ಮಳಿಗೆಗಳನ್ನು ಸ್ಥಾಪಿಸಲಾಗಿತ್ತು. ಸಾವಿರಾರು ಜನರು ತಮ್ಮ ಮಕ್ಕಳೊಂದಿಗೆ ಹಳ್ಳಿ ಖಾದ್ಯಗಳನ್ನು ಸವಿದು ಸಂಭ್ರಮಿಸಿದರು. ಸಚಿವ ಕೃಷ್ಣ ಬೈರೇಗೌಡ ಮಾತನಾಡಿ, ಭೂಮಿ-ಪ್ರಕೃತಿಯನ್ನು ಆರಾಧಿಸುವುದು ನಮ್ಮ ಮೂಲ ಸಂಸ್ಕೃತಿ ಹಾಗೂ ಜನಪದ ಕಲೆಗಳನ್ನು ಉಳಿಸುವ ಹಾಗೂ ಮುಂದಿನ ಪೀಳಿಗೆಗೆ ಕೊಂಡೊಯ್ಯುವುದಕ್ಕಾಗಿ ಸುಗ್ಗಿ-ಹುಗ್ಗಿ ಕಾರ್ಯಕ್ರಮವನ್ನು ಪ್ರತಿವರ್ಷ ಆಯೋಜಿಸಲಾಗುತ್ತಿದೆ' ಎಂದು ತಿಳಿಸಿದರು.

ಸಾಮಾಜಿಕ ಕಾರ್ಯಕರ್ತೆ ಮೀನಾಕ್ಷಿ ಕೃಷ್ಣ ಬೈರೇಗೌಡ, ಕಾಂಗ್ರೆಸ್ ಮುಖಂಡರಾದ ಎನ್.ಎನ್. ಶ್ರೀನಿವಾಸಯ್ಯ, ಎಂ. ಜಯಗೋಪಾಲಗೌಡ, ಎನ್.ಕೆ. ಮಹೇಶ್‌ಕುಮಾರ್‌ಹಾಗೂ ಪಿ.ವಿ. ಮಂಜುನಾಥಬಾಬು, ವಿ. ವಿ.ಪಾರ್ತಿಬರಾಜನ್ ಹಾಗೂ ವಿ.ಹರಿ, ಆರ್.ಎಂ. ಶ್ರೀನಿವಾಸ್, ಎಚ್.ಎ. ಶಿವಕುಮಾರ್, ಕೆ. ಗೌರೀಶ್, ಪಿ. ರಾಹುಲ್, ಉತ್ತನ ಹಳ್ಳಿ ಜಯಕುಮಾರ್, ಹನುಮಂತಿ ಉಪಸ್ಥಿತರಿದ್ದರು.

# ದ್ವೇಷ ವಿಚಾರ ಪೋಸ್ಟ್ ಹಂಚಿಕೊಳ್ಳುವವರ ವಿರುದ್ಧ ಕಾನೂನು ಕ್ರಮ

### ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಡಾ.ಎಂ.ಎ.ಸಲೀಂ, ಜಿ.ಪರಮೇಶ್ವರ, ಪ್ರಶಾಂತ್ ಕುಮಾರ್ ಠಾಕೂರ್ ಪಾಲ್ಗೊಂಡಿದ್ದರು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಾಮಾಜಿಕ ಜಾಲತಾಣಗಳಲ್ಲಿ ದ್ವೇಷ ಮೂಡಿಸುವಂತ ವಿಚಾರಗಳನ್ನು ಪೋಸ್ಟ್ ಮಾಡಲಾಗುತ್ತಿದೆ. ಇದರಿಂದ ಸಮಾಜದಲ್ಲಿ ಅಶಾಂತಿ ಉಂಟಾಗಿ ಗಲಭೆಗಳಾಗುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕೂಡಲೇ ಕಾನೂನು ಕ್ರಮ ಜರುಗಿಸಿ, ಆರಂಭಿಕ ಹಂತದಲ್ಲೇ ಮಟ್ಟ ಹಾಕಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ ಸೂಚನೆ ನೀಡಿದರು.

ರಾಜ್ಯ ಪೊಲೀಸ್ ಮಹಾ ನಿರ್ದೇಶಕರ ಕಚೇರಿಯಲ್ಲಿ ನಡೆದ ಹಿರಿಯ ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮಾವೇಶದ 2ನೇ ದಿನವಾದ ಅಧಿಕಾರಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನರ ಮೇಲಿನ ದೌರ್ಜನ್ಯ ತಡೆಗಟ್ಟಿ ಸಾಮಾಜಿಕ ನ್ಯಾಯ ಒದಗಿಸುವ ಉದ್ದೇಶದಿಂದ ಸ್ಥಾಪಿಸಿರುವ ಡಿಸಿಆರ್‌ಇ ಪೊಲೀಸ್ ಠಾಣೆ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು. ಶೋಷಿತರೊಂದಿಗೆ ನಾವಿದ್ದೇವೆ ಎಂಬ ಭರವಸೆ ಮೂಡಿಸಬೇಕು. ಅಂತರ್ಜಾತಿ ವಿವಾಹವಾದ ಯುವತಿಯನ್ನು ಆಕೆಯ ತಂದೆಯೇ ಕೊಲೆ ಮಾಡುತ್ತಾನೆ ಎಂದರೆ ಹೇಗೆ ಸಹಿಸುವುದು ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉತ್ತಮವಾಗಿರುವುದರಿಂದಲೇ ಕಳೆದ ವರ್ಷ ರೂ.10 ಲಕ್ಷ ಕೋಟಿ ಹೂಡಿಕೆಯಾಗಿದೆ' ಎಂದು ತಿಳಿಸಿದರು.

ಹಿರಿಯ ಪೊಲೀಸ್ ಅಧಿಕಾರಿಗಳು ಶಾಲಾ- ಕಾಲೇಜುಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು, ಉಪನ್ಯಾಸ ನೀಡಬೇಕು. ಎಲ್ಲಾ ಅಧಿಕಾರಿಗಳು ಸಭೆಯಿಂದ ಹೋಗುವ ಮೊದಲು, ಡ್ರಗ್ಸ್ ದಂಧೆಯನ್ನು ಸಂಪೂರ್ಣವಾಗಿ ಮಟ್ಟ ಹಾಕುತ್ತೇವೆ' ಎಂದು ಆತ್ಮಸಾಕ್ಷಿಯಿಂದ ಪ್ರಮಾಣ ಮಾಡಬೇಕು ಎಂದರು.

ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ.ಸಲೀಂ, ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಠಾಕೂರ್, ಡಿಜಿಪಿ ಪ್ರಣವ್ ಮೊಹಾಂತಿ, ಕಾನೂನು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್.ಹಿತೇಂದ್ರ, ಗುಪ್ತವಾರ್ತೆ ಎಡಿಜಿಪಿ ರವಿ, ಬೆಂಗಳೂರು ನಗರ ಪೊಲೀಸ್ ಕಮೀಷನರ್ ಸೀಮಾಂತ್ ಕುಮಾರ್ ಸಿಂಗ್ ಹಾಜರಿದ್ದರು. ಸಮಾಜಘಾತುಕರೊಂದಿಗೆ ಕೈಜೋಡಿಸದಂತೆ ಪ್ರತಿ ಸಭೆಯಲ್ಲಿಯೂ ಎಚ್ಚರಿಸುತ್ತಿದ್ದರೂ ಅದು ಮರುಕಳಿಸುತ್ತಿದೆ. ಠಾಣೆಯಲ್ಲಿ ಕುಳಿತು ಅಕ್ರಮ ವ್ಯವಹಾರ ನಡೆಸುವುದನ್ನು ಸಹಿಸುವುದಿಲ್ಲ. ಅಂಥವರ ಅನಿವಾರ್ಯತೆ ಇಲಾಖೆಗೆ ಇಲ್ಲ.

ರೌಡಿಗಳ ಹುಟ್ಟುಹಬ್ಬದ ಪಾರ್ಟಿಯಲ್ಲಿ ಪೊಲೀಸ್ ಅಧಿಕಾರಿಗಳು ಪಾಲ್ಗೊಳ್ಳುತ್ತಿದ್ದಾರೆ. ಇದೆಲ್ಲವನ್ನು ನೋಡಿಕೊಂಡು ಸುಮ್ಮನಿರಬೇಕೆ ಅಧಿಕಾರಿಗಳು ಎಚ್ಚೆತ್ತುಕೊಳ್ಳದಿದ್ದರೆ ಮತ್ತಷ್ಟು ಕಠಿಣ ಪರಿಣಾಮ ಎದುರಿಸಬೇಕಾಗುತ್ತದೆ' ಎಂದು ಹೇಳಿದರು.

**ಯಾರು ಎಲ್ಲಿಂದ ಬರ್ತಾರೆ ತಿಳಿದುಕೊಳ್ಳಲು ಆಗುವುದಿಲ್ಲವೇ?**

**ರಾಜ್ಯದಲ್ಲಿ ಲಕ್ಷಾಂತರ ಅಕ್ರಮ ಬಾಂಗ್ಲಾ ವಲಸಿಗರು ನೆಲೆಸಿದ್ದಾರೆ ಎಂದು ವರದಿಯಾಗುತ್ತಿದೆ. ಸ್ಥಳೀಯ ಪೊಲೀಸರು ಏನು ಮಾಡುತ್ತಿದ್ದಾರೆ ಪ್ರತಿಯೊಂದು ಪ್ರದೇಶದ ಮಾಹಿತಿ ಪೊಲೀಸರಿಗೆ ಗೊತ್ತಿರಬೇಕು ಎಂಬ ಉದ್ದೇಶದಿಂದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮ ಜಾರಿಗೆ ತರಲಾಗಿದೆ. ಯಾರು ಎಲ್ಲಿಂದ ಬಂದಿದ್ದಾರೆ ಎಂದು ಪೊಲೀಸ್ ಠಾಣೆ ಹಂತದಲ್ಲಿ ತಿಳಿದುಕೊಳ್ಳಲು ಆಗುವುದಿಲ್ಲವೆ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.**

**ಡ್ರಗ್ಸ್ ದಂಧೆ, ಸೈಬರ್ ಅಪರಾಧಗಳನ್ನು ಮಟ್ಟಹಾಕುವುದು ಸವಾಲಾಗುತ್ತಿದೆ. ಇಲಾಖೆಯು ತಾಂತ್ರಿಕವಾಗಿ ಬಲಗೊಳ್ಳಬೇಕು. ಹೊಸ ತಂತ್ರಜ್ಞಾನ, ಅವಿಷ್ಕಾರಗಳನ್ನು ಅಳವಡಿಸಿಕೊಂಡು ಡ್ರಗ್ಸ್ ದಂಧೆ ಮತ್ತು ಸೈಬರ್ ಅಪರಾಧಗಳನ್ನು ಮಟ್ಟ ಹಾಕಬೇಕು ಎಂದು ಹೇಳಿದರು. ಸಮಾವೇಶದಲ್ಲಿ ಚರ್ಚೆಯಾಗಿರುವ ವಿಚಾರಗಳು ಕೆಳಹಂತದ ಸಿಬ್ಬಂದಿಗಳಿಗೆ ತಲುಪಬೇಕು. ಆಗ ಮಾತ್ರ ರಾಜ್ಯ ಪೊಲೀಸರ ಕಾರ್ಯಕ್ಷಮತೆ ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.**

**-ಗೃಹ ಸಚಿವ ಜಿ.ಪರಮೇಶ್ವರ**

## ಸಹಾಯಕ ಜೈಲರ್ ಮೇಲೆ ಹಲ್ಲೆ ಮಾಡಿದ ಇಬ್ಬರು ಸಜಾಬಂಧಿಗಳ ವಿರುದ್ಧ ಪ್ರಕರಣ ದಾಖಲು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಸಹಾಯಕ ಜೈಲರ್ ಅವರ ಕರ್ತವ್ಯಕ್ಕೆ ಅಡ್ಡಿಪಡಿಸಿ. ಅವರ ಮೇಲೆ ಸಜಾಬಂಧಿಗಳು ಹಲ್ಲೆ ನಡೆಸಿರುವ ಘಟನೆ ನಡೆದಿದೆ. ಸಹಾಯಕ ಜೈಲರ್ ಎಸ್.ಮೂರ್ತಿ ಅವರ ದೂರಿನ ಮೇರೆಗೆ ಆನಂದ್ (33) ಮತ್ತು ಅಬ್ದುಲ್ ಘನಿ(41) ಎಂಬುವರ ವಿರುದ್ಧ ಪರಪ್ಪನ ಅಗ್ರಹಾರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿ, ತನಿಖೆ ಕೈಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜನವರಿ 7ರಂದು ಮಧ್ಯಾಹ್ನ 3 ಗಂಟೆ ಸುಮಾರಿಗೆ ಕೈದಿಗಳಾದ ಆನಂದ್ ಮತ್ತು ಅಬ್ದುಲ್ ಘನಿ ಎಂಬುವರು ಅನವಶ್ಯವಾಗಿ ಸಜಾಬಂಧಿ ಕಚೇರಿಗೆ ನುಗ್ಗಲು ಯತ್ನಿಸಿದ್ದು. ಈ ವೇಳೆ ಕರ್ತವ್ಯದಲ್ಲಿದ್ದ ಸಹಾಯಕ ಜೈಲರ್ ಹಾಗೂ ಜೈಲು ಸಿಬ್ಬಂದಿ ಅವರನ್ನು ತಡೆದಿದ್ದಾರೆ.

ಇದರಿಂದ ಸಿಟ್ಟಿಗೆದ್ದ ಆರೋಪಿಗಳು, ಅವಾಚ್ಯ ಶಬ್ದಗಳಿಂದ ನಿಂದಿಸಿ ಕುರ್ಚಿಯಲ್ಲಿ ಕುಳಿತಿದ್ದ ಸಹಾಯಕ ಜೈಲರ್‌ಗೆ ಒದ್ದು, ಹಲ್ಲೆನಡೆಸಿ, ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ರೀತಿಯ ಘಟನೆಗಳು ಜೈಲಿನಲ್ಲಿ ನಿತ್ಯವೂ ನಡೆಯುತ್ತಿದ್ದು ಹಾಗೂ ಭಯದ ವಾತಾವರಣ ನಿರ್ಮಾಣವಾಗಿದೆ. ಸಿಬ್ಬಂದಿಗೆ ಸೂಕ್ತ ರಕ್ಷಣೆ ಇಲ್ಲದಂತಾಗಿದೆ.

ಪರಿಸ್ಥಿತಿ ಕೈ ಮೀರುವ ಮೊದಲು ಆರೋಪಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ದೂರುದಾರರು ಮನವಿ ಮಾಡಿದ್ದಾರೆ. ಕೈದಿಗಳಿಗೆ ಐಷಾರಾಮಿ ಸೌಲಭ್ಯಗಳು ಲಭ್ಯವಾಗುತ್ತಿರುವ ಕುರಿತ ವಿಡಿಯೋ ತುಣುಕುಗಳು ಜಾಲತಾಣದಲ್ಲಿ ಹರಿದಾಡಿದ ಬೆನ್ನಲ್ಲೇ ಇಬ್ಬರು ಜೈಲು ಅಧಿಕಾರಿಗಳನ್ನು ಈಚೆಗೆ ಅಮಾನತು ಮಾಡಲಾಗಿತ್ತು. ಅಲ್ಲದೆ ನೂತನ ಡಿಜಿಪಿಯಾಗಿ ಅಲೋಕ್ ಕುಮಾರ್ ಅವರನ್ನು ನೇಮಿಸಲಾಗಿತ್ತು.

## ಕೆಎಸ್‌ಆರ್‌ಟಿಸಿ ಸೇರಿದಂತೆ 4 ನಿಗಮಗಳ ನೌಕರರಿಂದ ಮುಷ್ಕರ ಘೋಷಣೆ

• ಉದಯವಾಹಿನಿ, ಬೆಂಗಳೂರು

ವೇತನ ಹಿಂಬಾಕಿ ಮತ್ತು ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಎಸ್‌ಆರ್‌ಟಿಸಿ ಸೇರಿದಂತೆ ನಾಲ್ಕು ಸಾರಿಗೆ ನಿಗಮಗಳ ನೌಕರರು ಮತ್ತೆ ಮುಷ್ಕರ ಘೋಷಿಸಿದ್ದಾರೆ.

ನಾಲ್ಕು ಸರ್ಕಾರಿ ಸಾರಿಗೆ ನಿಗಮಗಳ ನೌಕರರು ಜನವರಿ 29 ರಂದು ಬೆಂಗಳೂರು ಚಲೋ ಪ್ರತಿಭಟನೆ ನಡೆಸುವುದಾಗಿ ಘೋಷಿಸಿದ್ದಾರೆ. ಸರ್ಕಾರದೊಂದಿಗೆ ಪದೇ ಪದೇ ಮಾತುಕತೆ ನಡೆಸಿದರೂ ಯಾವುದೇ ಫಲಿತಾಂಶಸಿಗದ ಹಿನ್ನೆಲೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಗಳ ಜಂಟಿ ಕ್ರಿಯಾ ಸಮಿತಿಯು ಈ ನಿರ್ಧಾರವನ್ನು ಪ್ರಕಟಿಸಿದೆ.

ಈಗಾಗಲೇ ಬೆಂಗಳೂರು ಚಲೋ ಚಳವಳಿ ಕುರಿತಂತೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಜಂಟಿ ಕ್ರಿಯಾ ಸಮಿತಿ ಪತ್ರ ಬರೆದಿದೆ. ಕಳೆದ 38 ತಿಂಗಳಿನಿಂದ ವೇತನ ಹಿಂಬಾಕಿ ಬಂದಿಲ್ಲ. ಈ ಬಗ್ಗೆ ಹಲವು ಬಾರಿ ನಾವು ಮನವಿ ಮಾಡಿದರೂ ಅದಕ್ಕೆ ಸ್ಪಂದಿಸುತ್ತಿಲ್ಲ. ಹೀಗಾಗಿ ನಾವು ಹೋರಾಟದ ಹಾದಿ ಹಿಡಿಯಬೇಕಿದೆ ಎಂದು ಕ್ರಿಯಾಸಮಿತಿ ಅಧ್ಯಕ್ಷ ಅನಂತಸುಬ್ಬರಾವ್ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಕಾರ್ಮಿಕ ಸಂಘಟನೆಗಳ ಪ್ರಕಾರ, ಸಾರಿಗೆ ನೌಕರರಿಗೆ ಕಳೆದ 38 ತಿಂಗಳಿನಿಂದ ಬಾಕಿ ವೇತನ ಬಂದಿಲ್ಲ. ಇದಲ್ಲದೆ, ಜನವರಿ 1, 2024 ರಿಂದ ಬರಬೇಕಿದ್ದ ವೇತನ ಪರಿಷ್ಕರಣೆ ಇನ್ನೂ ಜಾರಿಗೆ ಬಂದಿಲ್ಲ. ರಾಜ್ಯಾದ್ಯಂತ ದೈನಂದಿನ ಸಾರ್ವಜನಿಕ ಸಾರಿಗೆ ಸೇವೆಗಳನ್ನು ಖಚಿತಪಡಿಸಿಕೊಳ್ಳುವ ನೌಕರರಲ್ಲಿ ಈ ವಿಳಂಬವು ಆರ್ಥಿಕ ಒತ್ತಡವನ್ನು ಹೆಚ್ಚಿಸಿದೆ ಎಂದು ಯೂನಿಯನ್ ನಾಯಕರು ಹೇಳಿದ್ದಾರೆ.

**ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ**

**ಜನವರಿ 29 ರಂದು ಬೆಳಗ್ಗೆ 10 ರಿಂದ ಸಂಜೆ 4 ರವರೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಾರಿಗೆ ನೌಕರರು ಪ್ರತಿಭಟನೆ ನಡೆಸಲಿದ್ದು, ಸಾರಿಗೆ ಸೇವೆಯಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ. ಈ ಪ್ರತಿಭಟನೆ ಶಾಂತಿಯುತವಾಗಿರುತ್ತದೆ ಎಂದು ಒಕ್ಕೂಟಗಳು ತಿಳಿಸಿದೆ. ಸಮಿತಿ ಸದಸ್ಯರಾದ ಎಚ್ ವಿ ಅನಂತಸುಬ್ಬ ರಾವ್, ಬಿ ಜಯದೇವ ಅರಸು, ಎಚ್ ಡಿ ರೇವಪ್ಪ, ಜಗದೀಶ್ ಎಚ್ ಆರ್ ಮತ್ತು ರಾಜೇಂದ್ರ ಗೌಡ ಜಿ ಕೆ ಅವರು, ಸಾರಿಗೆ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆ ನೀಡಿದ್ದಾರೆ.**

## ದಂಪತಿಗೆ ಮಾರಕಾಸ್ತ್ರ ತೋರಿಸಿ ಬೆದರಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕ್ಷುಲ್ಲಕ ಕಾರಣಕ್ಕೆ ದಂಪತಿಗೆ ಮಾರಕಾಸ್ತ್ರ ತೋರಿಸಿ ಬೆದರಿಕೆ ಹಾಕಿದ್ದ ಆರೋಪಿಯನ್ನು ಕಾಡುಗೋಡಿ ಪೊಲೀಸ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಆರ್.ಟಿ.ನಗರ ನಿವಾಸಿ ಸೈಯದ್ ಅರ್ಬಾಜ್ ಖಾನ್ (25) ಬಂಧಿತ ಆರೋಪಿ. ಶುಕ್ರವಾರ ಸಂಜೆ ದಂಪತಿ ಕಾರಿನಲ್ಲಿ ಹೋಗುವಾಗ ಓವರ್ ಟೇಕ್ ವಿಚಾರಕ್ಕೆ ಆರೋಪಿ ಜಗಳ ಮಾಡಿದ್ದಾನೆ. ನಂತರ ಅಪಾರ್ಟ್‌ಮೆಂಟ್‌ವೊಂದರ ಸಿಗ್ನಲ್‌ನಲ್ಲಿ ಕಾರು ನಿಲ್ಲಿಸಿದ್ದಾಗ ಬೈಕ್ ನಿಲ್ಲಿಸಿ ಬಂದ ಆರೋಪಿ ನಡು ರಸ್ತೆಯಲ್ಲಿಯೇ ದಂಪತಿ ಜತೆ ಗಲಾಟೆ ಮಾಡಿದ್ದ.

ಈ ವೇಳೆ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದ್ದು, ಅದು ವಿಕೋಪಕ್ಕೆ ಹೋದಾಗ ಮಾರಕಾಸ್ತ್ರವನ್ನು ತೋರಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿ, ನಿಮ್ಮನ್ನು ಇಲ್ಲಿಯೇ ಮುಗಿಸುತ್ತೇನೆ ಎಂದು ಬೆದರಿಕೆ ಹಾಕಿದ್ದ.

ಬೈಕ್ ಸವಾರನ ಹುಚ್ಚಾಟ ಕಾರಿನಲ್ಲಿದ್ದ ಡ್ಯಾಶ್ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಈ ವಿಡಿಯೋ ವೈರಲ್ ಆದ ಹಿನ್ನೆಲೆಯಲ್ಲಿ ಪೊಲೀಸರು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು ಬೈಕ್ ನೋಂದಣಿ ಸಂಖ್ಯೆ ಆಧರಿಸಿ ಆರೋಪಿಯನ್ನು ಬಂಧಿಸಿದ್ದಾರೆ.

ಆರೋಪಿ ಸೈಯದ್ ಅರ್ಬಾಜ್ ವಿರುದ್ಧ ಗೋವಿಂದಪುರ ಠಾಣೆಯಲ್ಲಿ ಡಕಾಯಿತಿಗೆ ಸಂಚು, ಫ್ರೇಜರ್‌ಟೌನ್, ಸಂಪಂಗಿ ರಾಮನಗರ ಠಾಣೆಗಳಲ್ಲಿ ಹಲ್ಲೆ, ಅಶೋಕನಗರ ಠಾಣೆಯಲ್ಲಿ ಬೈಕ್ ಕಳವು ಪ್ರಕರಣಗಳು ದಾಖಲಾಗಿವೆ.

## ಲಾಲ್‌ಬಾಗ್ ನವೀಕರಣ: ರೂ.10 ಕೋಟಿ ಅನುದಾನ ಕೋರಿ ಜಿಬಿಎಗೆ ಪ್ರಸ್ತಾವ

• ಉದಯವಾಹಿನಿ, ಬೆಂಗಳೂರು



ಸಸ್ಯಕಾಶಿ ಲಾಲ್‌ಬಾಗ್ ಉದ್ಯಾನದ ನಡಿಗೆ ಪಥಗಳು, ಪಾದಚಾರಿ ಮಾರ್ಗದ ದುರಸ್ತಿ, ಮುಖ್ಯರಸ್ತೆಗಳ ಡಾಂಬರೀಕರಣ, ಬ್ಯಾಂಡ್ ಸ್ಟ್ಯಾಂಡ್ ಹಾಗೂ ಗುಲಾಬಿ ಉದ್ಯಾನದ ನವೀಕರಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.10 ಕೋಟಿ ಅನುದಾನ ನೀಡುವಂತೆ ಕೋರಿ ತೋಟಗಾರಿಕೆ ಇಲಾಖೆಯು ಜಿಬಿಎಗೆ ಪ್ರಸ್ತಾವ ಸಲ್ಲಿಸಿದೆ.ದಶಕಗಳಿಂದ ದುರಸ್ತಿ ಕಾಣದ ಈ ನಡಿಗೆ ಪಥಗಳು ಕಿತ್ತು ಹೋಗಿ, ಸಾಲು ಸಾಲು ಗುಂಡಿಗಳು ಬಿದ್ದಿವೆ.

ಪಾದಚಾರಿ ಮಾರ್ಗಗಳು ಸಮತಟ್ಟಾಗಿಲ್ಲದ ಕಾರಣ ವಾಯು ವಿಹಾರಿಗಳು, ಪ್ರವಾಸಿಗರು ನಡೆಯುವಾಗ ಎಲ್ಲಿ ಬೀಳುತ್ತೇವೋ ಎಂಬ ಆತಂಕದಲ್ಲೇ ಹೆಜ್ಜೆ ಹಾಕುತ್ತಾರೆ. ಮಳೆಗಾಲದಲ್ಲಂತೂ ಪಾದಚಾರಿ ಮಾರ್ಗಗಳೆಲ್ಲ ಜಾರು ಬಂಡಿಗಳಾಗುತ್ತವೆ. ಹದಗೆಟ್ಟಿರುವ ಪಾದಚಾರಿ ಮಾರ್ಗಗಳಲ್ಲಿಯೇ ವಾಯುವಿಹಾರಿಗಳು ಸಂಚರಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಪ್ರತ್ಯೇಕ ಪಥ, ಕೆರೆಯ ಉದ್ದಕ್ಕೂ ಜಾಗಿಂಗ್ ಟ್ರ್ಯಾಕ್ ನಿರ್ಮಿಸಬೇಕು ಎಂದು ವಾಯುವಿಹಾರಿಗಳು ಇಟ್ಟಿದ್ದ ಬೇಡಿಕೆಗೆ ತೋಟಗಾರಿಕೆ ಇಲಾಖೆ ಸ್ಪಂದಿಸಿದೆ. 240 ಎಕರೆ ಪ್ರದೇಶದಲ್ಲಿ ಇರುವ ಲಾಲ್‌ಬಾಗ್‌ನ 8 ಕಿ.ಮೀ ನಡಿಗೆ ಪಥ, ಇದರ ಜೊತೆಗೆ ಪಾದಚಾರಿ ಮಾರ್ಗಗಳ ಅಭಿವೃದ್ಧಿ, 6.5 ಕಿ.ಮೀ ರಸ್ತೆಗೆ ಡಾಂಬರೀಕಣ ಮಾಡಲು ಯೋಜನೆ ರೂಪಿಸಿದೆ. ಬೆಂಗಳೂರು ನಡಿಗೆ ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಲಾಲ್‌ಬಾಗ್‌ಗೆ ಭೇಟಿ ನೀಡಿದ್ದ ಸಾರ್ವಜನಿಕರು ಬಯಸಿದಂತೆ ಲಾಲ್‌ಬಾಗ್ ಅಭಿವೃದ್ಧಿಗೆ ಜಿಬಿಎ ವತಿಯಿಂದ ? 10 ಕೋಟಿ ಅನುದಾನ ನೀಡಲಾಗುವುದು ಎಂದಿದ್ದರು. ಲಾಲ್‌ಬಾಗ್‌ನ ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸಿ ಜಿಬಿಎಗೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆ ಅಧಿಕಾರಿಗಳು ತಿಳಿಸಿದರು.

**ಲಾಲ್‌ಬಾಗ್‌ನ ಆಕರ್ಷಣೀಯ ಕೇಂದ್ರಗಳಲ್ಲಿ ಒಂದಾಗಿರುವ ಗಾಜಿನ ಮನೆಯ ಮುಂಭಾಗದಲ್ಲಿರುವ ವಾದ್ಯ ರಂಗಮಂಟಪದಲ್ಲಿ (ಬ್ಯಾಂಡ್ ಸ್ಟ್ಯಾಂಡ್) ಬಿರುಕು ಬಿಟ್ಟಿತ್ತು. ಇದನ್ನು ತೆರವುಗೊಳಿಸಿ, ಆಧುನಿಕ ತಂತ್ರಜ್ಞಾನ ಬಳಸಿಕೊಂಡು ರೂ. 4 ಕೋಟಿ ವೆಚ್ಚದಲ್ಲಿ ಬ್ಯಾಂಡ್ ಸ್ಟ್ಯಾಂಡ್ ಪುನರ್ ನಿರ್ಮಿಸಲಾಗುವುದು. ಇದರ ಸೌಂದರ್ಯಕ್ಕೆ ಯಾವುದೇ ಧಕ್ಕೆ ಆಗದಂತೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಬೆಂಗಳೂರಿನ ಮರ ವಿಜ್ಞಾನ ಸಂಶೋಧನಾ ಸಂಸ್ಥೆ ಹಾಗೂ ತಜ್ಞರ ಸಲಹೆಗಳನ್ನು ಪಡೆದುಕೊಳ್ಳಲಾಗುವುದು.**

**-ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಎಂ. ಜಗದೀಶ್**

# ಜಿಬಿಎ ವ್ಯಾಪ್ತಿಯ ಎಲ್ಲಾ 369 ವಾರ್ಡ್‌ಗಳ ಕರಡು ಮತದಾರರ ಪಟ್ಟಿ ಪ್ರಕಟ

### ಬಿಎ ಚುನಾವಣೆಯ ಟೈಮ್‌ಲೈನ್ ಬಹಿರಂಗಪಡಿಸಿದ ಚುನಾವಣಾ ಆಯುಕ್ತ ಸಂಗ್ರೇಶಿ, ಯಾವಾಗ? ಹೇಗಿರಲಿದೆ ಎಲೆಕ್ಷನ್?

• ಉದಯವಾಹಿನಿ, ಬೆಂಗಳೂರು



ಬಹುನಿರೀಕ್ಷಿತ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಚುನಾವಣೆಯನ್ನು ಮೇ 25ರ ನಂತರ ನಡೆಸಲಾಗುವುದು ಎಂದು ರಾಜ್ಯ ಮುಖ್ಯ ಚುನಾವಣಾ ಆಯುಕ್ತರಾದ ಜಿ.ಎಸ್. ಸಂಗ್ರೇಶಿ ಸೋಮವಾರ ಘೋಷಿಸಿದ್ದಾರೆ. ಇದೇ ವೇಳೆ, ಈ ಬಾರಿ ಇವಿಎಂ ಬದಲಿಗೆ ಮತಪತ್ರಗಳನ್ನು ಅಂದರೆ ಬ್ಯಾಲೆಟ್ ಪೇಪರ್‌ಗಳನ್ನು ಬಳಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಚುನಾವಣಾ ಸಿದ್ಧತೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು.

**ಇವಿಎಂಗೆ ಗುಡ್‌ಬೈ, ಮತಪತ್ರಕ್ಕೆ ಜೈ**

2015ರ ಬಿಬಿಎಂಪಿ ಚುನಾವಣೆಯಲ್ಲಿ ಇವಿಎಂಗಳನ್ನು ಬಳಸಲಾಗಿತ್ತು. ಆದರೆ, ಈ ಬಾರಿ ಮತಪತ್ರಗಳನ್ನು ಬಳಸುವುದಾಗಿ ಆಯೋಗ ತಿಳಿಸಿದೆ. ಇದಕ್ಕೆ ಸ್ಪಷ್ಟ ಕಾರಣ ನೀಡದಿದ್ದರೂ, ಕಾನೂನಿನಲ್ಲಿ ಇದಕ್ಕೆ ಅವಕಾಶವಿದೆ ಎಂದು ಆಯುಕ್ತರು ಸಮರ್ಥಿಸಿಕೊಂಡಿದ್ದಾರೆ. ಈ ಹಿಂದೆ ರಾಜ್ಯದ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಬ್ಯಾಲೆಟ್ ಪೇಪರ್ ಗಳನ್ನು ಬಳಸಲು ರಾಜ್ಯ ಸರ್ಕಾರ ನಿರ್ಧರಿಸಿತ್ತು. ಈ ಸಂಬಂಧ ಸಂಪುಟದಲ್ಲಿ ತೀರ್ಮಾನವನ್ನು ತೆಗೆದುಕೊಳ್ಳಲಾಗಿತ್ತು. ಮತಪತ್ರಗಳ ಬಳಕೆಯನ್ನು ನಿಷೇಧಿಸಲಾಗಿಲ್ಲ. ಅಮೆರಿಕದಂತಹ ಮುಂದುವರಿದ ದೇಶಗಳಲ್ಲೇ ಬ್ಯಾಲೆಟ್ ಪೇಪರ್ ಬಳಸಲಾಗುತ್ತಿದೆ. ಭಾರತದಲ್ಲಿ ಎಂಎಲ್ಎ ಮತ್ತು ಎಂಪಿ ಚುನಾವಣೆಗಳಿಗೆ ಮಾತ್ರ ಇವಿಎಂ ಕಡ್ಡಾಯವಾಗಿದೆ. ಎಲ್ಲಾ ಬಾಧ್ಯಸ್ಥರೊಂದಿಗೆ ಚರ್ಚಿಸಿ, ಸುಪ್ರೀಂ ಕೋರ್ಟ್ ಅವಲೋಕನಗಳನ್ನು ಪರಿಗಣಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಇದು ಸಮಯ ವ್ಯರ್ಥ ಮಾಡುವ ಪ್ರಕ್ರಿಯೆಯಲ್ಲ, ಇದು 100% ಯಶಸ್ವಿಯಾಗಲಿದೆ, ಎಂದು ಸಂಗ್ರೇಷಿ ಸ್ಪಷ್ಟಪಡಿಸಿದರು.



**ಮತದಾರರ ಪಟ್ಟಿ ವೇಳಾಪಟ್ಟಿ:** ರಾಜ್ಯ ಚುನಾವಣಾ ಆಯೋಗದ ನಿರ್ದೇಶನದಂತೆ, ಜಿಬಿಎ ವ್ಯಾಪ್ತಿಯ 5 ನಗರ ಪಾಲಿಕೆಗಳ ಒಟ್ಟು 369 ವಾರ್ಡ್‌ಗಳ ಕರಡು ಮತದಾರರ ಪಟ್ಟಿಯನ್ನು ಸೋಮವಾರ (ಜನವರಿ 19) ಸಾರ್ವಜನಿಕ ಪರಿಶೀಲನೆಗೆ ಪ್ರಕಟಿಸಲಾಗಿದೆ. ಆಕ್ಷೇಪಣೆ ಸಲ್ಲಿಕೆಗೆ ಜನವರಿ 20ರಿಂದ ಫೆಬ್ರವರಿ 3ರವರೆಗೆ ಅವಕಾಶ ಇದೆ. ಫೆಬ್ರವರಿ 4ರಿಂದ ಫೆಬ್ರವರಿ 18ರವರೆಗೆ ಆಕ್ಷೇಪಣೆಗಳ ವಿಲೇವಾರಿ ಮಾಡಲಾಗುತ್ತದೆ. ಮಾರ್ಚ್ 16 ರಂದು ಅಂತಿಮ ಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಜಿ.ಎಸ್. ಸಂಗ್ರೇಶಿ ಮಾಹಿತಿ ನೀಡಿದ್ದಾರೆ. ಸುಪ್ರೀಂ ಕೋರ್ಟ್ ಜಿಬಿಎ ಚುನಾವಣೆಯನ್ನು ಜೂನ್ 30ರೊಳಗೆ ನಡೆಸುವಂತೆ ಗಡುವು ನೀಡಿತ್ತು. ಸರ್ಕಾರ ಕೂಡ ಇದಕ್ಕೂ ಮೊದಲು ಚುನಾವಣೆ ನಡೆಸುವುದಾಗಿ ಹೇಳಿದೆ.

**ವಾರ್ಡ್‌ವಾರು ವಿವರ**

**ಒಟ್ಟು 369 ವಾರ್ಡ್‌ಗಳ ಪೈಕಿ, ಬೆಂಗಳೂರು ಪಶ್ಚಿಮ ಪಾಲಿಕೆಯ ವಾರ್ಡ್ ಸಂಖ್ಯೆ 23ರಲ್ಲಿ ಅತಿ ಹೆಚ್ಚು 49,530 ಮತದಾರರಿದ್ದರೆ, ಬೆಂಗಳೂರು ಪೂರ್ವ ಪಾಲಿಕೆಯ ವಾರ್ಡ್ ಸಂಖ್ಯೆ 16 ಅತಿ ಕಡಿಮೆ 10,926 ಮತದಾರರು ಇದ್ದಾರೆ. ವಾರ್ಡ್‌ವಾರು ಮತದಾರರ ಸಂಖ್ಯೆ ಮತ್ತು ವಿವರಗಳನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ಸಂಜೆಯೊಳಗೆ ಅಪ್‌ಲೋಡ್ ಮಾಡಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ. ಬಿಹಾರದಲ್ಲಿ ಕೇಂದ್ರ ಸರ್ಕಾರ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಿದರೆ, ಕರ್ನಾಟಕದಲ್ಲಿ ರಾಜ್ಯ ಸರ್ಕಾರವೇ ಈ ಜವಾಬ್ದಾರಿಯನ್ನು ನಿರ್ವಹಿಸುತ್ತಿದೆ ಎಂದು ಅವರು ಇದೇ ವೇಳೆ ಸ್ಪಷ್ಟಪಡಿಸಿದರು.**

**ಕರಡು ಪಟ್ಟಿಯ ಪ್ರಕಾರ, ಜಿಬಿಎ ವ್ಯಾಪ್ತಿಯಲ್ಲಿ ಒಟ್ಟು 88.91 ಲಕ್ಷ ಮತದಾರರಿದ್ದಾರೆ**

- ಬೆಂಗಳೂರು ಪಶ್ಚಿಮ: 27.25 ಲಕ್ಷ
- ಬೆಂಗಳೂರು ಉತ್ತರ: 19.54 ಲಕ್ಷ
- ಬೆಂಗಳೂರು ದಕ್ಷಿಣ: 17.44 ಲಕ್ಷ
- ಬೆಂಗಳೂರು ಕೇಂದ್ರ: 14.25 ಲಕ್ಷ
- ಬೆಂಗಳೂರು ಪೂರ್ವ: 10.41 ಲಕ್ಷ

# ಜೆಡಿಎಸ್‌ನಲ್ಲಿ ಇದ್ದೀನಿ, ಮುಂದೆಯೂ ಇರುತ್ತೇನೆ: ಜಿಟಿಡಿ

## ■ ಜೆಡಿಎಸ್‌ಗೆಂದು ದ್ರೋಹ ಮಾಡಿಲ್ಲ, ಚಾಮುಂಡೇಶ್ವರಿ ಕಣದಿಂದ ಸ್ಪರ್ಧಿಸೋದು ನಾನೇ

• **ಉದಯವಾಹಿನಿ, ಮೈಸೂರು**

ನಾನು ಚಾಮುಂಡೇಶ್ವರಿ ಕ್ಷೇತ್ರದ ಜನರಿಗೆ ಯಾವುದೇ ರೀತಿಯ ದ್ರೋಹ ಮಾಡಿಲ್ಲ. ಹಲವಾರು ವರ್ಷಗಳ ಕಾಲ ಪಕ್ಷದಲ್ಲಿದ್ದುಕೊಂಡು ಪಕ್ಷ ಕಟ್ಟಿ ಸಂಘಟನೆ ಮಾಡಿದ್ದೇನೆ. ನಾನು ಹೆಚ್. ಡಿ. ದೇವೇಗೌಡ, ಹೆಚ್. ಡಿ. ಕುಮಾರಸ್ವಾಮಿ ಜೊತೆಯಲ್ಲಿ ಸಾಗಿ ಬಂದಿದ್ದೇನೆ. ನಾನೀಗ ಜೆಡಿಎಸ್ ಶಾಸಕನಾಗಿದ್ದು, ಮುಂದಿನ ಚುನಾವಣೆಯಲ್ಲೂ ಜೆಡಿಎಸ್ ಅಭ್ಯರ್ಥಿಯಾಗಿಯೇ ಸ್ಪರ್ಧಿಸುತ್ತೇನೆ. ಪಕ್ಷದ ಹಿರಿಯ ನಾಯಕರ ವಿರುದ್ಧ ಮಾತನಾಡಲ್ಲ ಎಂದು ಮುಂಬರುವ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಮಾಜಿ ಸಚಿವ ಸಾ ರಾ ಮಹೇಶ್ ಚಾಮುಂಡೇಶ್ವರಿ ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಹೇಳಿಕೆ ಉಲ್ಲೇಖಿಸಿ, ಹಾಲಿ ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡ ಮಾತನಾಡಿ ಟಾಂಗ್ ಕೊಟ್ಟರು.

**ನಾನು ಜೆಡಿಎಸ್ ತೊರೆಯಲ್ಲ:** ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿಲ್ಲ. ನನ್ನ ಕ್ಷೇತ್ರ ಬಹಳ ದೊಡ್ಡದಿದೆ.ಹಾಗಾಗಿ ನನ್ನ ಕ್ಷೇತ್ರದಲ್ಲಿ ಓಡಾಡುತ್ತಿದ್ದೇನೆ. ನಾನು ಜೆಡಿಎಸ್ ನಲ್ಲೇ ಇದ್ದೇನೆ. ಜೆಡಿಎಸ್ ನಿಂದ ಒಂದು ಹೆಜ್ಜೆಯನ್ನು ಆಚೆಗೆ ಇಟ್ಟಿಲ್ಲ. ಪಕ್ಷದಲ್ಲಿ ನಡೆದ ಕೆಲ ಬೆಳವಣಿಗೆಗಳಿಂದ ವೈಯಕ್ತಿಕವಾಗಿ ನನಗೆ ನೋವಾಗಿದೆ. ನನ್ನ ನೋವನ್ನು ತೋಡಿಕೊಂಡಿದ್ದೇನೆ. ನಾನು ಜೆಡಿಎಸ್ ತೊರೆದಿಲ್ಲ ಎಂದು ಹೇಳಿದರು. ಚಾಮುಂಡೇಶ್ವರಿ ಕ್ಷೇತ್ರದ ಜನತೆಗೆ, ಯಾವುದೇ ನಾಯಕರಿಗೂ ದ್ರೋಹ ಮಾಡೋ ಬುದ್ಧಿ ನನಗಿಲ್ಲ. ನಾನು ನಾಯಕತ್ವ ನೋಡಿ ಬೆಂಬಲ ಕೊಡುವವನು. ಈ ಹಿಂದಿನಿಂದಲೂ ಎಲ್ಲಾ ಚುನಾವಣೆಗಳಲ್ಲೂ ಗೆದ್ದು, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಮೂರು ಬಾರಿ ಶಾಸಕನಾಗಿ ಕೆಲಸ ಮಾಡಿದ್ದೇನೆ. ಚಾಮುಂಡೇಶ್ವರಿ ಕ್ಷೇತ್ರದಿಂದಲೇ ಕುಮಾರಪರ್ವ ಪ್ರಾರಂಭ ಮಾಡಿದ್ದು. ಯಡಿಯೂರಪ್ಪರ ಜೊತೆ ಮರಳಿ ಮನೆಗೆ ಕಾರ್ಯಕ್ರಮ ಮಾಡಿದೆ. ಸಿದ್ದರಾಮಯ್ಯ ಕಾಂಗ್ರೆಸ್‌ಗೆ ಹೋದ ನಂತರ ಕುಮಾರಸ್ವಾಮಿ ಮೆರವಣಿಗೆ ಮಾಡಿ ಕರೆ ತಂದಿದ್ದು ನಾನೇ ಎಂದು ಹೇಳಿದರು.



**ಜನರಿಗೆ ದ್ರೋಹ ಮಾಡಿಲ್ಲ**

> ಚಾಮುಂಡೇಶ್ವರಿ ಕ್ಷೇತ್ರದಿಂದ ನಾನೇ ಜೆಡಿಎಸ್ ಅಭ್ಯರ್ಥಿ ನಾನು ಎಂದಿದ್ದ ಸಾ ರಾ.ಮಹೇಶ್ ಅವರ ಹೇಳಿಕೆಗೆ ಜಿ.ಟಿ.ದೇವೇಗೌಡ ಅವರು ಮೈಸೂರಿನಲ್ಲಿ ಟಾಂಗ್ ಕೊಟ್ಟಿದ್ದಾರೆ. ನನಗೆ ನೋವಾದಾಗ ಹೇಳಿಕೊಂಡಿದ್ದೇನೆ. ಆದರೆ, ಪಕ್ಷದ ವಿರುದ್ಧ ಎಂದಿಗೂ ಮಾತನಾಡಿಲ್ಲ. ನಾನು ಜೆಡಿಎಸ್‌ನಲ್ಲೇ ಇರುತ್ತೇನೆ, ಮುಂದುವರೆಯುತ್ತೇನೆ. ದೇವೇಗೌಡರ ಹಾದಿಯಲ್ಲಿ ಬೆಳೆದು ಬಂದವ ನಾನು ಪಕ್ಷಕ್ಕೆ ದ್ರೋಹ ಬಗೆದಿಲ್ಲ.
>
> – ಜಿ.ಟಿ. ದೇವೇಗೌಡ, ಜೆಡಿಎಸ್ ಶಾಸಕ

**ಪಕ್ಷದ ವಿರುದ್ಧ ಮಾತಾಡಲ್ಲ**


ಈ ಹಿಂದೆ ಕುಮಾರಸ್ವಾಮಿಯನ್ನು ದಲಿತರ ಮನೆಯಲ್ಲಿ ವಾಸ್ತವ್ಯ ಹೂಡಿಸಿದ್ದು ನಾನೇ. ಜೆಡಿಎಸ್‌ನಲ್ಲಿ ಅನೇಕ ಜವಾಬ್ದಾರಿ ನಿಭಾಯಿಸಿದ್ದೇನೆ. ದೇವೇಗೌಡರ ಆಶೀರ್ವಾದದಿಂದ ಕೆಲಸ ಮಾಡಿಕೊಂಡು ಬಂದಿದ್ದೇನೆ.. ಈಗಲೂ ಅವರಿಗೆ ಬೆಂಬಲ ಕೊಟ್ಟು ಶಾಸಕನಾಗಿ ಕೆಲಸ ಮಾಡಿದ್ದೇನೆ. ಜೆಡಿಎಸ್ ಪಕ್ಷವನ್ನು ಕೂಡ ಕಟ್ಟಿದ್ದೇನೆ. ಚಾಮುಂಡೇಶ್ವರಿ ಕ್ಷೇತ್ರದ ಜನತೆ ನನ್ನನ್ನು ತಮ್ಮ ಮನೆ ಮಗನ ರೀತಿ ನೋಡಿಕೊಂಡು ಬಂದಿದ್ದಾರೆ. ಈಗಲೂ ಜೆಡಿಎಸ್‌ನಲ್ಲಿ ಇದ್ದೇನೆ. ಮುಂದೆಯೂ ಜೆಡಿಎಸ್ ನಲ್ಲೇ ಉಳಿಯುತ್ತೇನೆ. ನಾನು ಪಕ್ಷದಿಂದ ದೂರ ಉಳಿದಿದ್ದ ಮಾತ್ರಕ್ಕೆ ಯಾರ ವಿರುದ್ಧವೂ ಯಾವತ್ತು ಮಾತನಾಡಿಲ್ಲ ಎಂದು ಜಿಟಿ ದೇವೇಗೌಡ ಅವರು ಹೇಳಿದರು. ಚಾಮುಂಡೇಶ್ವರಿ ಕ್ಷೇತ್ರ ದೊಡ್ಡ ಕ್ಷೇತ್ರ.ಈ ಕ್ಷೇತ್ರದ ಸೇವೆ ಸಲ್ಲಿಸಿ ದಣಿದಿದ್ದೇನೆ. ನನ್ನ ಕೈ ಹಿಡಿದವರ ಸೇವೆ ಮಾಡಬೇಕು. ಈ ಕಾರಣಕ್ಕಾಗಿ ಕ್ಷೇತ್ರದಲ್ಲಿ ಹೆಚ್ಚು ಓಡಾಟ ಮಾಡ್ತಿದ್ದೇನೆ. ಚುನಾವಣೆಗೆ ಇನ್ನು ಎರಡು ವರ್ಷ ನಾಲ್ಕು ತಿಂಗಳು ಇದೆ. ಪುನರ್ ವಿಂಗಡಣೆ ಆದರೆ ಮೂರು ವರ್ಷ ಇದೆ. ಕ್ಷೇತ್ರದ ಅಭಿವೃದ್ಧಿಗೋಸ್ಕರ ಬಸವರಾಜ ಬೊಮ್ಮಾಯಿ, ಸಿದ್ದರಾಮಯ್ಯ ಹತ್ತಿರಕ್ಕೆ ಹೋಗಿದ್ದೇನೆ. ಇದನ್ನು ಬಿಟ್ಟರೆ ಬೇರೇನೂ ಇಲ್ಲ ಎಂದು ಮೈಸೂರಿನಲ್ಲಿ ಶಾಸಕ ಜಿ ಟಿ ದೇವೇಗೌಡ ಹೇಳಿದರು.

# ಬಂಗಾರು ಬೆಟ್ಟದಲ್ಲಿ ಕ್ವಾರಿಗೆ ಅನುಮತಿ

• **ಉದಯವಾಹಿನಿ, ಚಿಂತಾಮಣಿ**

ತಾಲ್ಲೂಕಿನ ಕೋಟಗಲ್ ಗ್ರಾಮ ಪಂಚಾಯಿತಿಗೆ ಸೇರಿದ ನರಸಾಪುರದ ಬಳಿ ಇರುವ ಚೌಡೇಶ್ವರಿ ಕನಿಕಲಮ್ಮ ಬಂಗಾರು ಬೆಟ್ಟದಲ್ಲಿ ಕ್ವಾರಿ ನಡೆಸಲು ಅನುಮತಿ ನೀಡಿರುವುದನ್ನು ವಿರೋಧಿಸಿ ಜನರು ಪ್ರತಿಭಟನೆ ನಡೆಸಿದರು. ನರಸಾಪುರ ಶ್ರೀನಿವಾಸರೆಡ್ಡಿ ಮಾತನಾಡಿ, ಚೌಡೇಶ್ವರಿ ಕನಿಕಲಮ್ಮ ಬೆಟ್ಟ ಮುಜರಾಯಿ ಇಲಾಖೆಗೆ ಸೇರಿದ್ದು ಬೆಟ್ಟದ ಸುತ್ತಲು ಕೆರೆ, ಉತ್ತಮ ಪರಿಸರಇದೆ.

ರೈತರು ಕುರಿ, ಮೇಕೆ, ದನಕರುಗಳನ್ನು ಮೇಯಿಸಿ ಜೀವನ ಸಾಗಿಸುತ್ತಿದ್ದಾರೆ. ಇಂತಹ ಪ್ರಕೃತಿ ಮಡಿಲಲ್ಲಿ ಎರಡು ಕ್ವಾರಿ ನಡೆಸಲು ಅನುಮತಿ ನೀಡಿರುವುದಕ್ಕೆ ಆತಂಕಕ್ಕೀಡಾಗಿದ್ದೇವೆ ಎಂದರು. ಬಹುತೇಕ ಮಂದಿ ತೀರ ಹಿಂದುಳಿದ ಸಮುದಾಯಗಳನ್ನು ಹೊಂದಿರುವ ಗ್ರಾಮಗಳಾಗಿವೆ. ಕ್ವಾರಿಗಳನ್ನು ನಡೆಸಲಿ ಆದರೆ ನಮ್ಮ



ಉದಯವಾಹಿನಿ ಚಿತ್ರ

ಗ್ರಾಮಗಳ ಜನರು ವಾಸ ಮಾಡಲು ಬೇರೆ ಕಡೆ ಯೋಗ್ಯವಾದ ಜಮೀನು ಮನೆಗಳನ್ನು ಕೊಟ್ಟು ಸರ್ಕಾರ ಕ್ವಾರಿಗಳನ್ನು ನಡೆಸಿಕೊಳ್ಳಲಿ ಎಂದು ಒತ್ತಾಯಿಸಿದರು.


ಮುಜರಾಯಿ ಇಲಾಖೆಗೆ ಸೇರಿದ ಗುಡಿಯನ್ನು ಸರ್ಕಾರ ಅಭಿವೃದ್ಧಿಪಡಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು ನ್ಯಾಯ ದೊರಕಿಸಿ ದೇವಾಲಯವನ್ನು ಉಳಿಸಬೇಕು ಎಂದು ಮನವಿ ಮಾಡಿದರು.

# ಆಧುನಿಕ ಬೇಸಾಯ ಪದ್ಧತಿ ಅಳವಡಿಸಿಕೊಳ್ಳಿ: ಶಾಸಕ ಕೆ.ಎಂ.ಉದಯ್

• **ಉದಯವಾಹಿನಿ, ಭಾರತೀನಗರ**

ನೀರು ಅತ್ಯಮೂಲ್ಯವಾಗಿದ್ದು, ರೈತರು ಅದನ್ನು ಪೋಲು ಮಾಡುವುದು ಹೆಚ್ಚಾಗಿ ಕಂಡು ಬರುತ್ತಿದೆ. ಮಿತವಾಗಿ ಬಳಕೆ ಮಾಡುವ ಆಧುನಿಕ ಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಎಂದು ಶಾಸಕ ಕೆ.ಎಂ.ಉದಯ್ ಸಲಹೆ ನೀಡಿದರು. ಸಮೀಪದ ಮುಟ್ಟನಹಳ್ಳಿ ಬಳಿಯ ಸೂಳೆಕೆರೆಯ ಆಧುನೀಕರಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ಭಾಗದ ರೈತರು ಕಾಲಾಂತರಗಳಿಂದಲೂ ನೀರು ನೋಡುತ್ತಾ ಬಂದಿದ್ದಾರೆ.

ಆದರೆ ಶಿಂಷಾ ನದಿಯ ಆಚೆಗಿನ ಬೆಳ್ಳೂರು, ಕೂಳಗೆರೆ, ಬನ್ನಹಳ್ಳಿ ಸೇರಿದಂತೆ ಹಲವು ಗ್ರಾಮಗಳ ರೈತರು ನೀರಿಗಾಗಿ ಪ್ರತಿದಿನ ಪರಿತಪಿಸುತ್ತಾರೆ ಎಂದು ಹೇಳಿದರು. ಸೂಳೆಕೆರೆಯಲ್ಲಿ ಅತಿಕ್ರಮಣವಾಗಿದ್ದ 300 ಎಕರೆಯಷ್ಟು ಜಾಗವನ್ನು ತೆರವುಗೊಳಿಸಿದ್ದು. ಶೀಘ್ರ ಕೆರೆ ಆಧುನೀಕರಣ ಕಾಮಗಾರಿಯನ್ನು



ಉದಯವಾಹಿನಿ ಚಿತ್ರ

ಮುಗಿಸುವಂತೆಯೂ ನೋಡಿಕೊಳ್ಳಲಾಗುವುದು. ಇದಲ್ಲದೆ ದೊಡ್ಡ ನಾಲೆಗಳ ಆಧುನೀಕರಣಕ್ಕೂ ಕ್ರಮ ಕೈಗೊಳ್ಳಲಾಗಿದ್ದು, ಇದರಿಂದ ಕೊನೆ ಭಾಗದ ನಾಲೆಗಳಿಗೂ ನೀರು ತಲುಪುವಂತಾಗುತ್ತದೆ ಎಂದು ತಿಳಿಸಿದರು.

ಶಾಸಕ ರವಿಕುಮಾರ್ ಗಣಿಗ ಮಾತನಾಡಿ, 80 ಕೋಟಿಗೂ ಅಧಿಕ ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಾಗಿದ್ದು, ಮದ್ದೂರು, ಮಂಡ್ಯ ಕ್ಷೇತ್ರದಲ್ಲಷ್ಟೇ ಅಭಿವೃದ್ಧಿ ಕಾಮಗಾರಿಗೆ ಹಣ ತರಲಾಗಿದೆ. ಕೆ.ಎಂ. ಉದಯ್ ಅವರು 1200 ಕೋಟಿಯಷ್ಟು ಅನುದಾನ ತಂದು ಮದ್ದೂರು ಪಟ್ಟಣವನ್ನು ವಿಭಿನ್ನವಾಗಿ ಅಭಿವೃದ್ಧಿಪಡಿಸಲು ಮುಂದಾಗಿದ್ದಾರೆ ಎಂದು ಹೇಳಿದರು. ಮಂಡ್ಯದಿಂದ ಬರುವ ಕೊಳಚೆ ನೀರು ಸೂಳೆಕೆರೆಗೆ ಸೇರುತ್ತಿದ್ದು, 32 ಕೋಟಿ ವೆಚ್ಚದಲ್ಲಿ ಬೇರೊಂದು ನಾಲೆಯ ಮೂಲಕ ಮಂಡ್ಯದ ಕೊಳಚೆ ನೀರನ್ನು ಹರಿಸಲು ಕಾರ್ಯಯೋಜನೆ ರೂಪಿಸಿದ್ದು, ಶೀಘ್ರ ಕಾಮಗಾರಿ ಮುಗಿಸಲಾಗುವುದು ಎಂದು ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, 1862ರಲ್ಲಿ ಕೊಪ್ಪ ಬಳಿಯ ತಗ್ಗಹಳ್ಳಿ ಬಳಿ ನಾಲೆಗಳನ್ನು ನಿರ್ಮಿಸಿ ವಿದ್ಯುತ್‌ಚ್ಛಕ್ತಿ ತಯಾರಿಸಲು ಯೋಜನೆ ರೂಪಿಸಲಾಗಿತ್ತು. ಅದಾದ ನಂತರ 1911ರಲ್ಲಿ ಕೆಆರ್‌ಎಸ್ ಅಣೆಕಟ್ಟೆಯನ್ನು ಕಟ್ಟಲು ಅಂದಿನ ನಾಲ್ವಡಿ ಕೃಷ್ಣರಾಜ ಒಡೆಯರ್ ಅಡಿಗಲ್ಲು ಹಾಕಿದ್ದರು. ಇದರ ಫಲವಾಗಿ ಜಿಲ್ಲೆಯ 1,082 ಹೆಕ್ಟೇರ್‌ನಲ್ಲಿ ರೈತರು ಬೆಳೆ ಬೆಳೆಯುತ್ತಿದ್ದಾರೆ ಎಂದು ತಿಳಿಸಿದರು.

# ತಾಂತ್ರಿಕ ಅಡಚಣೆ; ಇ-ಖಾತೆಗೆ ತಪ್ಪದ ಜನರ ಪರದಾಟ

• **ಉದಯವಾಹಿನಿ, ತುರುವೇಕೆರೆ**

ಸಾರ್ವಜನಿಕರ ಆಸ್ತಿ ಡಿಜಿಟಲೀಕರಣ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಇ-ಖಾತಾ ಪ್ರಕ್ರಿಯೆ ಆರಂಭಿಸಿ ತಿಂಗಳು ಕಳೆದರೂ ತಾಂತ್ರಿಕ ಸಮಸ್ಯೆಯಿಂದಾಗಿ ಗ್ರಾಮೀಣ ಭಾಗದ ಜನರ ಪರದಾಟ ತಪ್ಪಿಲ್ಲ. ಮನೆಯಲ್ಲಿಯೇ ಕುಳಿತು ಆನ್‌ಲೈನ್ ಮೂಲಕ ಇ-ಖಾತೆ ಪಡೆಯಲು, ಗ್ರಾಮ ಪಂಚಾಯಿತಿಯಿಂದಲೂ ಪಡೆಯಬಹುದೆಂದು ಸರ್ಕಾರ ಇ-ಸ್ವತ್ತು 2.0 ತಂತ್ರಾಂಶ ಪರಿಚಯಿಸಿದೆ.

ತಾಲ್ಲೂಕಿನ ಕಸಬಾ, ದಂಡಿನಶಿವರ, ಮಾಯಸಂದ್ರ, ದಬ್ಬೆಘಟ್ಟ ಹೋಬಳಿಯ 27 ಗ್ರಾಮ ಪಂಚಾಯಿತಿಗಳಲ್ಲೂ ಸರ್ಕಾರ ಹೇಳಿದಂತೆ ಸಕಾಲಕ್ಕೆ ಇ-ಸ್ವತ್ತುಗಳು ಸಿಗುತ್ತಿಲ್ಲ. ಜನರು ತಮ್ಮ ದಾಖಲೆಗಳೊಂದಿಗೆ ಕಚೇರಿಗೆ ಹೋದರೆ ಇ-ಖಾತಾ ಸಾಫ್ಟ್‌ವೇರ್ ಕಾರ್ಯನಿರ್ವಹಿಸುತ್ತಿಲ್ಲ. ಸರಿಯಾದ ಮೇಲೆ ಬನ್ನಿ ಎಂದು ಪಂಚಾಯಿತಿ ಅಧಿಕಾರಿಗಳು ಹೇಳಿ ಕಳುಹಿಸುತ್ತಿದ್ದಾರೆ.ಅರ್ಜಿದಾರ ಅಕೌಂಟ್ ನಂಬರ್ ಎಂಟ್ರಿ ಮಾಡಿದರೆ ಬೇರೊಬ್ಬರ ಹೆಸರು ಮತ್ತು ವಿಳಾಸ ಬರುತ್ತದೆ. ಇ-ಸ್ವತ್ತು ತಂತ್ರಾಂಶದ ವಿದ್ಯುತ್ ಬಿಲ್ ಕಾಲಂನಲ್ಲಿ 10 ಅಂಕಿಯ ಅಕೌಂಟ್





ಉದಯವಾಹಿನಿ ಚಿತ್ರ

ನಂಬರ್ ಕೇಳುತ್ತದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಕೇವಲ ಏಳು ಅಂಕಿಯ ನಂಬರ್ ಇದೆ. ಅರ್ಜಿದಾರನ ಜಮೀನಿನ ಇ.ಸಿ ಫಿಟ್‌ಆಗುತ್ತಿಲ್ಲ. ಇ-ಸ್ವತ್ತನ್ನು ಸಕಾಲದ ಮಾದರಿಯಲ್ಲಿ 15 ದಿನಗಳಿಗೆ ನಿಗದಿ ಪಡಿಸಿರುವುದರಿಂದ ಸಾರ್ವಜನಿಕರಿಗೆ ಆರ್ಥಿಕ ಹೊರೆಯಾಗುತ್ತದೆ. ಇದರಿಂದ ಬಡವರಿಗೆ ಹಣ ಹೊಂದಿಸುವುದು ತೊಂದರೆಯಾಗಲಿದೆ.

ಗ್ರಾಮ ಠಾಣಾ ಸ್ವತ್ತುಗಳಿಗೆ ಸಂಬಂಧಿಸಿದ ಇ-ಸ್ವತ್ತು ಮಾಡುವಾಗ ನೋಂದಣಿಯಾಗಿರುವ ಸೇಲ್ ಡೀಡ್, ವಿಲ್ ಇನ್ನಿತರೆ ದಾಖಲೆಗಳನ್ನು ಕೇಳುತ್ತಿದೆ. ಆದರೆ ಗ್ರಾಮೀಣ ಪ್ರದೇಶದಲ್ಲಿ ಪಿತ್ರಾರ್ಜಿತ ಸ್ವತ್ತುಗಳಿಗೆ ನೋಂದಾಯಿತ ದಾಖಲೆಗಳು ಲಭ್ಯವಿಲ್ಲದಿರುವುದಿಲ್ಲ. ಅದೇ ರೀತಿ ಆಸ್ತಿ ಅಥವಾ ಜಮೀನಿನ ಅಳತೆಯನ್ನು ಅಡಿಗಳಲ್ಲಿ ಎಂಟ್ರಿ ಮಾಡಿದರೆ ಅದು ಮೀಟರ್ ಕಾಲಂನಲ್ಲಿ ನಮೂದಾಗುತ್ತದೆ. ಅರ್ಜಿದಾರ ಇ-ಕೆವೈಸಿ ಮಾಡಿದಾಗ ಆತನ ವಿಳಾಸ ಮತ್ತು ಸಂಬಂಧ ತಪ್ಪಾಗಿ ತೋರುತ್ತದೆ. ಈಗಾಗಲೇ ಅನುಮೋದನೆ ಪಡೆದಿರುವ ಬಡಾವಣೆಗಳಲ್ಲಿ ಬಾಕಿ ಇರುವ ನಿವೇಶನಗಳ ಇ-ಸ್ವತ್ತು ಮಾಡಲು ಸಾಧ್ಯವಾಗುತ್ತಿಲ್ಲ ಇಂತಹ ಅನೇಕ ಸಮಸ್ಯೆಗಳು ಇರುವುದರಿಂದ ಇ-ಸ್ವತ್ತು ಜನರ ಕೈಗೆ ಸಿಗುತ್ತಿಲ್ಲ ಎಂದು ಜನರು ದೂರುತ್ತಾರೆ.

> ಇ-ಸ್ವತ್ತು 2.0 ತಂತ್ರಾಂಶದ ಸಮಸ್ಯೆ ಸರಿಪಡಿಸಲಾಗಿದೆ ಎಂದು ಮೇಲಧಿಕಾರಿಗಳು ಹೇಳಿದ್ದಾರೆ. ಮಾಸ್ಟರ್ ಟ್ರೈನರ್‌ಗಳ ಜೊತೆ ಇ-ಖಾತಾ ಅರ್ಜಿ ಹಾಕುವ ವಸ್ತುಸ್ಥಿತಿ ಕುರಿತು ಚರ್ಚಿಸಿ ಆನಂತರ ಎಲ್ಲಾ ಪಿಡಿಒಗಳಿಗೆ ಸೂಕ್ತ ನಿರ್ದೇಶನ ನೀಡಲಾಗುವುದು.
>
> –ಅನಂತರಾಜು ಇಒ

# ಶಬರಿಮಲೆ ಯಾತ್ರಿಗಳ ಮೇಲೆ ಹಲ್ಲೆ
## ಕರ್ನಾಟಕ ಸೇನಾಪಡೆ ಪ್ರತಿಭಟನೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಾಮರಾಜನಗರ**

ಕರ್ನಾಟಕದಿಂದ ತೆರಳಿದ್ದ ಶಬರಿಮಲೆ ಯಾತ್ರಿಗಳ ವಾಹನ ತಡೆದು ಕನ್ನಡಿಗರ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು. ನಗರದ ಭುವನೇಶ್ವರಿ ವೃತ್ತದಲ್ಲಿ ಜಮಾಯಿಸಿದ್ದ ಪ್ರತಿಭಟನಾಕಾರರು ತಮಿಳುನಾಡು, ಕೇರಳ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಮಾತನಾಡಿ, ತಮಿಳುನಾಡು, ಕೇರಳ ಸರ್ಕಾರಗಳು ಕನ್ನಡಿಗರ ಮೇಲೆ ದಬ್ಬಾಳಿಕೆ ನಡೆಸುತ್ತಿದ್ದು ಕನ್ನಡ ವಿರೋಧಿ ನೀತಿಯನ್ನು ಅನುಸರಿಸುತ್ತಿವೆ ಎಂದರು.

ತಮಿಳುನಾಡಿನಲ್ಲಿ ಕರ್ನಾಟಕದ ಬಾವುಟ ಹಾಕಿಕೊಂಡು ರಾಜ್ಯದ ವಾಹನಗಳು ಹೋದರೆ ಕಿತ್ತುಹಾಕಿ ದೌರ್ಜನ್ಯ, ದಬ್ಬಾಳಿಕೆ ಮಾಡಲಾಗುತ್ತಿದೆ. ಇಂತಹ ಘಟನೆಗಳನ್ನು ಖಂಡಿಸಿ ರಾಷ್ಟ್ರೀಯ ಹೆದ್ದಾರಿ ತಡೆದು ಕೇರಳ, ತಮಿಳುನಾಡು ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಲಾಗುತ್ತಿದೆ ಎಂದು ಹೇಳಿದರು. ಕನ್ನಡಿಗರ ಮೇಲೆ ಹಲ್ಲೆ ಅತ್ಯಂತ ಖಂಡನೀಯವಾಗಿದ್ದು ಮುಂದೆ ಇಂತಹ ಘಟನೆಗಳು ಮರುಕಳಿಸಿದರೆ ಎರಡು ರಾಜ್ಯಗಳ ಗಡಿ ಬಂದ್‌ಮಾಡಬೇಕಾಗುತ್ತದೆ. ಕರ್ನಾಟಕ ಸರ್ಕಾರ ಕೂಡಲೇ ತಮಿಳುನಾಡು, ಕೇರಳ ಸರ್ಕಾರ ಜೊತೆ ಮಾತನಾಡಿ ಕನ್ನಡಿಗರಿಗೆ ಸೂಕ್ತ ರಕ್ಷಣೆ ಕೊಡಿಸಬೇಕು ಎಂದು ಶೀನಿವಾಸಗೌಡ ಒತಾಯಿಸಿದರು.

# ಬಾಲಗಂಗಾಧರನಾಥಶ್ರೀಗೆ ಭಾರತ ರತ್ನ ನೀಡಿ
## ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಆಗ್ರಹ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಶ್ರೀರಂಗಪಟ್ಟಣ**

ಶಿಕ್ಷಣ, ಪರಿಸರ, ಆರೋಗ್ಯ ಇತರ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಆದಿ ಚುಂಚನಗಿರಿ ಮಠದ ಭೈರವೈಕ್ಯ ಬಾಲ ಗಂಗಾಧರನಾಥ ಸ್ವಾಮೀಜಿ ಅವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡಬೇಕು ಎಂದು ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಆಗ್ರಹಿಸಿದರು. ಪಟ್ಟಣದ ಟಿಎಪಿಸಿಎಂಎಸ್ ಕಲ್ಯಾಣ ಮಂಟಪದಲ್ಲಿ ನಡೆದ ಒಕ್ಕಲಿಗರ ಸಂಘದ ತಾಲ್ಲೂಕು ಘಟಕದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಆದಿ ಚುಂಚನಗಿರಿ ಮಠ ಸರ್ವ ಜನಾಂಗದ ಹಿತಕ್ಕಾಗಿ ಹಲವು ದಶಕಗಳಿಂದ ಕೆಲಸ ಮಾಡುತ್ತಿದೆ. ಒಕ್ಕಲಿಗರು ರಾಜ್ಯದ ಅಭಿವೃದ್ಧಿಗೆ ವಿಶೇಷ ಕೊಡುಗೆ ನೀಡಿದ್ದಾರೆ. ಪ್ರತಿ ತಾಲ್ಲೂಕು ಕೇಂದ್ರಗಳಲ್ಲಿ ಒಕ್ಕಲಿಗರ ಭವನಕ್ಕೆ ಜಮೀನು ಮಂಜೂರು ಮಾಡಬೇಕು. ಶ್ರೀರಂಗಪಟ್ಟಣದಲ್ಲಿ ಒಕ್ಕಲಿಗರ ಭವನ ನಿರ್ಮಿಸಿದರೆ 25 ಲಕ್ಷ ನೆರವು ನೀಡುತ್ತೇನೆ ಎಂದು ಭರವಸೆ ನೀಡಿದರು. ಆದಿ ಚುಂಚನಗಿರಿ ಮಹಾ ಸಂಸ್ಥಾನ ಮಠದ ಮೈಸೂರು ಶಾಖೆಯ ಸೋಮೇಶ್ವರನಾಥ ಸ್ವಾಮೀಜಿ ಉದ್ಘಾಟಿಸಿದರು. ಸಹಬಾಳ್ವೆಗೆ ಹೆಸರಾದ ಒಕ್ಕಲಿಗ ಸಮುದಾಯ ಒಗ್ಗಟ್ಟು ಕಾಯ್ದುಕೊಳ್ಳಬೇಕು. ದುಡಿಮೆಯನ್ನೇ ನೆಚ್ಚಿ ಬದುಕುವ ಒಕ್ಕಲಿಗರಲ್ಲಿ ಇತರರಿಗೆ ನೆರವು ನೀಡುವ ಗುಣ ಪರಂಪರಾಗತವಾಗಿ ಬಂದಿದೆ. ಈ ನಾಡನ್ನು ಕಟ್ಟಿ ಬೆಳೆಸಿದ ಸಮಾಜದ ಗಣ್ಯರನ್ನು ನೆನೆಯಬೇಕು. ಸ್ವಾವಲಂಬನೆಗಾಗಿ ಒಗ್ಗೂಡಿ ಕೆಲಸ ಮಾಡಬೇಕು. ಮಕ್ಕಳ ಭವಿಷ್ಯ ರೂಪಿಸಬೇಕು ಎಂದು ತಿಳಿಸಿದರು.

ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಮಾತನಾಡಿ, ತಾಲ್ಲೂಕಿನಲ್ಲಿ ಮೂರ್ನಾಲ್ಕು ಒಕ್ಕಲಿಗರ ಸಂಘಗಳಿವೆ. ಎಷ್ಟೇ ಸಂಘಗಳು ಇದ್ದರೂ ನಿರ್ದಿಷ್ಟ ಉದ್ದೇಶಕ್ಕಾಗಿ ಸಂಘಟಿತರಾಗಬೇಕು. ಸಮುದಾಯದ ಅಧಿಕಾರಿಗಳು, ಮುಖಂಡರು ಮಠಾಧೀಶರ ಸಲಹೆಯಂತೆ ನಡೆಯಬೇಕು ಎಂದರು.

# ಕಲಬೆರಕೆ ಹಾಲು ತಯಾರಿಕೆ: ಮತ್ತೊಬ್ಬ ಆರೋಪಿ ಬಂಧನ

• **ಉದಯವಾಹಿನಿ, ಕೆಜಿಎಫ್**

ನಕಲಿ ಹಾಲು ತಯಾರಿಕೆಗೆ ಸಂಬಂಧಿಸಿದಂತೆ ಪೊಲೀಸರು ಚಿಂತಾಮಣಿ ತಾಲ್ಲೂಕಿನ ರಾಜಾರೆಡ್ಡಿ (55) ಎಂಬಾತನನ್ನು ಬಂಧಿಸಿದ್ದು, ಬಂಧಿತರ ಸಂಖ್ಯೆ ಒಂಬತ್ತಕ್ಕೇರಿದೆ. ಎಲ್ಲಾ ಆರೋಪಿಗಳು ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿದ್ದಾರೆ. ತಾಲ್ಲೂಕಿನ ಜನತೆಗೆ ಆತಂಕ ತಂದಿದ್ದ ನಕಲಿ ಹಾಲು ತಯಾರಿಕಾ ಜಾಲವನ್ನು ಪೊಲೀಸರು ಬೇಧಿಸಿದಾಗ, ಪ್ರಕರಣದಲ್ಲಿ ಇನ್ನೂ ಸಾಕಷ್ಟು ಮಂದಿ ಇರಬಹುದೆಂಬ ಶಂಕೆ ಇದ್ದು, ವಿಚಾರಣೆ ನಡೆಸಿ ಕ್ರಮ ಕೈಗೊಳ್ಳುವುದಾಗಿ ಎಸ್‌ಪಿ ಶಿವಾಂಶು ರಜಪೂತ್ ಹೇಳಿದ್ದರು. ಈ ಹಿನ್ನೆಲೆ ಕೆಎಂಎಫ್ ಹಾಲು ಸರಬರಾಜು ಮಾಡುತ್ತಿದ್ದ ಹಾಲು ಸಾಗಾಣಿಕೆ ಗುತ್ತಿಗೆದಾರನನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.

ಹಾಲು ಉತ್ಪಾದನೆ ಮಾಡಲು ಪಾಮ್ ಆಯಿಲ್, ನಂದಿನಿಗೆ ಸೇರಿದ ಹಾಲಿನ ಪೌಡರ್ ಮತ್ತಿತರ ರಾಸಾಯನಿಕ ವಸ್ತುಗಳನ್ನು ಪೊಲೀಸರು ಈಚೆಗೆ ನಗರದ ಹೊರವಲಯದ ಬಳ್ಳಗೆರೆ ಗ್ರಾಮದ ತೋಟದ ಮನೆಯಲ್ಲಿ ವಶಪಡಿಸಿಕೊಂಡಿದ್ದರು. ಮಾರಾಟ ಮಾಡಲು ಸಾಧ್ಯವಾಗದ ನಂದಿನಿಗೆ ಸೇರಿದ 390 ಪಾಕೆಟ್ ಹಾಲಿನ ಪುಡಿ ಸಿಕ್ಕಿರುವುದರ ಹಿಂದೆ ಯಾರ್ಯಾರ ಕೈವಾಡ ಇದೆ ಎಂಬುವುದರ ಕುರಿತು ಪೊಲೀಸರು ತನಿಖೆಯನ್ನು ಚುರುಕು ಮಾಡಿದ್ದಾರೆ.



ಉದಯವಾಹಿನಿ ಚಿತ್ರ

ಪೌಡರ್ ಹಾಲಿಗೆ ಎಣ್ಣೆಯನ್ನು ಮಿಶ್ರಣ ಮಾಡಿ, ಒಂದು ಲೀಟರ್‌ನಿಂದ ಇಪ್ಪತ್ತು ಲೀಟರ್ ಹಾಲು ತಯಾರು ಮಾಡಲಾಗುತ್ತಿತ್ತು ಇದನ್ನು ಡೇರಿಗೆ ಸಾಗಾಣಿ ಮಾಡುತ್ತಿದ್ದ ನಾಲ್ವರನ್ನು ಪೊಲೀಸರು ಹುಡುಕುತ್ತಿದ್ದಾರೆ. ಅವರು ಯಾವ ಡೇರಿಗೆ ಹಾಲನ್ನು ಹಾಕುತ್ತಿದ್ದರು. ಅದು ಯಾವ ಹಾಲಿನ ಘಟಕಕ್ಕೆ ಹೋಗುತ್ತಿತ್ತು ಎಂಬುದರ ಕುರಿತು ತನಿಖೆ ಮುಂದುವರೆದಿದೆ. ಈ ಮಧ್ಯೆ ನಂದಿನಿ ಹಾಲಿನ ಪುಡಿ ಒಂದೆಡೆ ಸಂಗ್ರಹ ಆಗಿರುವುದು ಕೂಡ ತನಿಖೆಯ ಪ್ರಮುಖ ವಿಷಯವಾಗಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಸಾದಲಿಯ ಕೆಎಂಎಫ್ ಘಟಕದಿಂದ ಹಾಲಿನ ಪುಡಿ ಸರಬರಾಜು ಆಗುತ್ತಿತ್ತು. ಎಲ್ಲಿಂದ ಇಷ್ಟು ಪ್ರಮಾಣದ ಹಾಲಿನ ಪುಡಿ ಕಳ್ಳತನವಾಗಿದೆ. ಇಲ್ಲವೇ ಯಾವ ಅಧಿಕಾರಿಗಳ ಕೈವಾಡ ಇದೆ ಎಂಬುದರ ಕುರಿತು ತನಿಖೆ ನಡೆಯುತ್ತಿದೆ. ಅಂಗನವಾಡಿಗಳಲ್ಲಿ 3 ರಿಂದ 6 ವರ್ಷದ ಮಕ್ಕಳಿಗೆ ಪ್ರತಿನಿತ್ಯ ಹಾಲಿನ ಪುಡಿಯಿಂದ ಹಾಲು ಮಾಡಿ, ಕುಡಿಯಲು ನೀಡಲಾಗುತ್ತದೆ.

ಗರ್ಭಿಣಿ ಸ್ತ್ರೀಯರಿಗಾಗಿ ಅಂಗನವಾಡಿಯಲ್ಲಿ ನೀಡಲಾಗುತ್ತದೆ. ಅಂಗನವಾಡಿಗಳಿಗೆ ಅರ್ಧ ಕೆಜಿ ಹಾಲಿನ ಪುಡಿ ನೀಡಿದರೆ, ಶಾಲೆಗಳಿಗೆ ಒಂದು ಕೆಜಿ ಹಾಲಿನಪುಡಿ ಪೊಟ್ಟಣವನ್ನು ನೀಡಲಾಗುತ್ತಿದೆ. ಪೋಷಣ್ ಆ್ಯಪ್ ಮೂಲಕ ಪ್ರತಿನಿತ್ಯ ಎಲ್ಲಾ ಪೌಷ್ಠಿಕಾಂಶಗಳು ದಾಖಲಾಗುತ್ತಿರುವುದರಿಂದ ದುರುಪಯೋಗವಾಗುವ ಸಾಧ್ಯತೆ ಕಡಿಮೆ ಎಂಬುದು ಅಧಿಕಾರಿಗಳ ಮಾತಾಗಿದೆ.

ಜೊತೆಗೆ ಅಂಗನವಾಡಿಗಳಿಗೆ ಸರಬರಾಜು ಆಗುವ ಮಿಲೆಟ್ ಲಡ್ಡು, ಪುಷ್ಟಿ ಪಾಕೆಟ್ ಮತ್ತು ಬೆಲ್ಲ ಕೂಡ ನಕಲಿ ಹಾಲು ತಯಾರಿಕೆ ಘಟಕದಲ್ಲಿ ದೊರೆತಿದ್ದು, ಇನ್ನಷ್ಟು ಆರೋಪಿಗಳು ಈ ಜಾಲದಲ್ಲಿ ಇದ್ದಾರೆ. ಈ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸುತ್ತಾರೆ.

> ಕೆಜಿಎಫ್ ತಾಲ್ಲೂಕಿನ ಅಂಗನವಾಡಿಗಳಲ್ಲಿ ಫಲಾನುಭವಿಗಳ ಸಂಖ್ಯೆಗೆ ಅನುಗುಣವಾಗಿ ಹಾಲಿನ ಪುಡಿ ಪಾಕೆಟ್ ವಿತರಣೆಯಾಗಿದ್ದು ಯಾವುದೇ ಲೋಪ ಕಾಣುತ್ತಿಲ್ಲ. ಹಿರಿಯ ಅಧಿಕಾರಿಗಳಿಗೆ ಈ ಸಂಬಂಧವಾಗಿ ವರದಿ ನೀಡಲಾಗಿದೆ.
>
> –ರಾಜೇಶ್ ಶಿಶು ಅಭಿವೃದ್ಧಿ ಯೋಜನಾಧಿಕಾರಿ

# ಪ್ರಾಣ ಉಳಿಸಲಿದೆಯೇ ಈ ಮೇಲ್ಸೇತುವೆ?: ಸಾರ್ವಜನಿಕರಲ್ಲಿ ಹೀಗೊಂದು ಚರ್ಚೆ

## ● ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತಗಳು ಕಡಿಮೆಯಾಗುತ್ತವೆಯೇ? ಹೀಗೊಂದು ಚರ್ಚೆ ಸಾರ್ವಜನಿಕರಲ್ಲಿ ಆರಂಭ

• **ಉದಯವಾಹಿನಿ, ಮಾಗಡಿ**

ರಾಷ್ಟ್ರೀಯ ಹೆದ್ದಾರಿ 75 ತಾಳೆಕೆರೆ ಹ್ಯಾಂಡ್‌ಪೋಸ್ಟ್ ಬಳಿ ಹೆದ್ದಾರಿ ಪ್ರಾಧಿಕಾರದಿಂದ ಮೇಲ್ಸೇತುವೆ ನಿರ್ಮಾಣ ಕಾರ್ಯ ನಡೆಯುತ್ತಿದೆ. ಈ ನಿರ್ಮಾಣದಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತಗಳು ಕಡಿಮೆಯಾಗುತ್ತವೆಯೇ? ಹೀಗೊಂದು ಚರ್ಚೆ ಸಾರ್ವಜನಿಕರಲ್ಲಿ ಆರಂಭವಾಗಿದೆ ತಾಳೆಕೆರೆ ಹ್ಯಾಂಡ್‌ಪೋಸ್ಟ್ ಬಳಿ ರಸ್ತೆ ದಾಟುವಾಗ ಈ ಹಿಂದೆ ಅನೇಕ ಅಪಘಾತಗಳಾಗಿ ಹಲವರು ಪ್ರಾಣ ಕಳೆದುಕೊಂಡಿದ್ದಾರೆ. ಹೆದ್ದಾರಿಯಲ್ಲಿ ವೇಗವಾಗಿ ಬರುವ ವಾಹನಗಳಿಗೆ ಎದುರಿಗೆ ಬರುವ ದ್ವಿಚಕ್ರ ವಾಹನಗಳು ಕಾಣಿಸದೆ ಅಪಘಾತಗಳು ಹೆಚ್ಚಾಗುತ್ತಿದ್ದವು. ಈಗ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮೇಲ್ಸೇತುವೆ ನಿರ್ಮಿಸುತ್ತಿದೆ. ಸೇತುವೆ ಕೆಳಗಿನಿಂದ ವಾಹನಗಳು ಸಾಗುವುದರಿಂದ ರಾಷ್ಟ್ರೀಯ ಹೆದ್ದಾರಿಯನ್ನು ಸುರಕ್ಷಿತವಾಗಿ ದಾಟಲು ಸಾಧ್ಯವಾಗಲಿದೆ.

ಹೆದ್ದಾರಿ ಪಕ್ಕದಲ್ಲಿ ಸರ್ವಿಸ್ ರಸ್ತೆ ಮಾಡಿರುವುದರಿಂದ ಮಾಗಡಿ ಕಡೆಯಿಂದ ಬರುವ ವಾಹನಗಳು ನೇರವಾಗಿ ಹೆದ್ದಾರಿಗೆ ಬರದೆ ಸರ್ವಿಸ್ ರಸ್ತೆ ಮೂಲಕ ಸಾಗಿ, ಜಾನ್ಸನ್ ಬಳಿ ಹೆದ್ದಾರಿಗೆ ಸೇರಿಕೊಳ್ಳುತ್ತದೆ. ಇದರಿಂದ ಅಪಘಾತಗಳು ಕಡಿಮೆಯಾಗುವ ನಿರೀಕ್ಷೆಯಿದೆ. ಪ್ರಾಧಿಕಾರದ ಈ ಕಾರ್ಯ ವ್ಯಾಪಾರಸ್ಥರಿಗೆ ತೊಂದರೆ ಆಗಬಹುದಾದರೂ ಸಾರ್ವಜನಿಕರ ಪ್ರಾಣ ಉಳಿಸುವ ಕೆಲಸವಾಗಿದೆ. ಇನ್ನೊಂದು ವರ್ಷದಲ್ಲಿ ಕಾರ್ಯ ಪೂರ್ಣಗೊಂಡು ಸಾರ್ವಜನಿಕರಿಗೆ ಲಭ್ಯವಾಗಲಿದೆ. ಈ ಕಾರ್ಯವನ್ನು ಶೀಘ್ರ ಮುಗಿಸಿದರೆ ಸಮಸ್ಯೆ ತೀವ್ರತೆ ಕಡಿಮೆಯಾಗುತ್ತದೆ ಎಂಬುದು ಸ್ಥಳೀಯರು ಮತ್ತು ವಾಹನ ಚಾಲಕರ ಅಭಿಪ್ರಾಯವಾಗಿದೆ.



ಉದಯವಾಹಿನಿ ಚಿತ್ರ

**ವಾಹನ ಚಾಲಕರ ಅಭಿಪ್ರಾಯ**

**ಜಾನ್ಸನ್ ಬಳಿ ಸಂಚಾರ ದಟ್ಟಣೆ:** ರಾಷ್ಟ್ರೀಯ ಹೆದ್ದಾರಿ 75 ಜಾನ್ಸನ್ ಪ್ರದೇಶದಲ್ಲಿ ಶನಿವಾರ, ಭಾನುವಾರ ಮತ್ತು ರಜಾದಿನಗಳಲ್ಲಿ ಅಧಿಕ ಸಂಚಾರದಿಂದ ದೊಡ್ಡ ದಟ್ಟಣೆ ಸಂಭವಿಸುತ್ತಿತ್ತು. ಜಾನ್ಸನ್ ಸರ್ಕಲ್‌ನಲ್ಲಿ ಬೆಂಗಳೂರಿನಿಂದ ಬರುವ ವಾಹನಗಳು ಎಡಕ್ಕೆ ತಿರುಗಿ ಕುಣಿಗಲ್‌ಗೆ ಹೋಗಬೇಕು. ಕುಣಿಗಲ್‌ನಿಂದ ಬರುವ ವಾಹನಗಳು ಬಲಕ್ಕೆ ತಿರುಗಿ ಹೆದ್ದಾರಿ ಸೇರಬೇಕು. ಈ ಎರಡೂ ದಿಕ್ಕು ಕೂಡುವಡೆಯಲ್ಲಿಯೇ ಹಾಸನ- ಧರ್ಮಸ್ಥಳದಿಂದ ಬರುವ ವಾಹನಗಳು ಸೇರುತ್ತವೆ. ಹೊಟೇಲ್. ವಿಶ್ರಾಂತಿಗಾಗಿ ರಸ್ತೆ ಅಂಚಿನಲ್ಲಿ ವಾಹನಗಳು ನಿಲ್ಲಿಸುವುದರಿಂದಲೂ ದಟ್ಟಣೆ ಹೆಚ್ಚಾಗುತ್ತಿತ್ತು. ಕಿಲೋಮೀಟರ್ ವಾಹನಗಳ ಸರತಿ ನಿಲ್ಲುತ್ತಿತ್ತು. ಈಗ ಪ್ರಾಧಿಕಾರ ಸರ್ವಿಸ್ ರಸ್ತೆ ನಿರ್ಮಿಸಿ ಮುಖ್ಯ ರಸ್ತೆಗೆ ನೇರ ಪ್ರವೇಶವಿಲ್ಲದಂತೆ ಕಬ್ಬಿಣದ ಗರಾಟೆ ಹಾಕುತ್ತಿದೆ. ಇದರಿಂದ ಸಂಚಾರ ದಟ್ಟಣೆ ಸಮಸ್ಯೆ ಕಡಿಮೆಯಾಗಲಿದೆ. ಸರ್ವಿಸ್ ರಸ್ತೆ ಕಾರ್ಯ ಇನ್ನೂ ನಡೆಯುತ್ತಿರುವುದರಿಂದ ಸಮಸ್ಯೆ ಸಂಪೂರ್ಣ ಮುಕ್ತಿಗಾಗಿ ಸ್ವಲ್ಪ ಸಮಯ ಬೇಕಿದೆ. ಪ್ರಾಧಿಕಾರದ ಈ ಪ್ರಯತ್ನಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

**ಪ್ರಮುಖ ರಾಷ್ಟ್ರೀಯ ಹೆದ್ದಾರಿ:** ರಾಷ್ಟ್ರೀಯ ಹೆದ್ದಾರಿ 75 ಬಹಳ ಮುಖ್ಯ ರಸ್ತೆ. ಬೆಂಗಳೂರಿನಿಂದ ಕುಣಿಗಲ್, ಹಾಸನ, ಧರ್ಮಸ್ಥಳ, ಚಿಕ್ಕಮಗಳೂರು, ಮಂಗಳೂರು ಮುಂತಾದ ಊರುಗಳಿಗೆ ಹೋಗುವ ಪ್ರವಾಸಿಗಳು ಇದನ್ನೇ ಬಳಸುತ್ತಾರೆ. ಜಾನ್ಸನ್ ಬಳಿ ಏಕಕಾಲದಲ್ಲಿ ಹಲವು ದಿಕ್ಕಿನಿಂದ ವಾಹನಗಳು ಸೇರುವುದರಿಂದ ಸಂಚಾರ ದಟ್ಟಣೆ ತೀವ್ರವಾಗಿತ್ತು. ಕುಣಿಗಲ್ ಶಾಸಕ ಡಾ.ರಂಗನಾಥ್ ಅವರು, ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ಗೃಹ ಸಚಿವ ಜಿ.ಪರಮೇಶ್ವರ ಅವರಿಗೆ ಮನವಿ ಮಾಡಿ ಮೇಲ್ಸೇತುವೆ ನಿರ್ಮಾಣ, ಸಂಚಾರ ಠಾಣೆ ಸ್ಥಾಪನೆ ಮಾಡಲು ಒತ್ತಾಯಿಸಿದ್ದರು. ಈಗ ಸರ್ವಿಸ್ ರಸ್ತೆ ಕಾರ್ಯ ಹಮ್ಮಿಕೊಳ್ಳಲಾಗಿದೆ. ಮುಖ್ಯ ರಸ್ತೆಗೆ ನೇರ ಪ್ರವೇಶ ತಡೆಯಲಾಗುತ್ತಿದೆ. ಇದರಿಂದ ದಟ್ಟಣೆ ಸಮಸ್ಯೆ ಕಡಿಮೆಯಾಗಲಿದೆ.

### ಬಸ್ ನಿಲ್ದಾಣ ಶೌಚಾಲಯ ನಿರ್ಮಿಸಿ

> ತಾಳೆಕೆರೆ ಹ್ಯಾಂಡ್ ಪೋಸ್ಟ್ ಬಳಿ ಸರ್ವಿಸ್ ರಸ್ತೆ ಮತ್ತು ಮೇಲ್ಸೇತುವೆ ನಿರ್ಮಾಣದಿಂದ ಅನುಕೂಲವಾಗಲಿದೆ. ಸರ್ವಿಸ್ ರಸ್ತೆಯಲ್ಲಿ ಬೀದಿ ದೀಪಗ ಅಳವಡಿಸಬೇಕು. ಅಲ್ಲದೆ ತಾಳೆಕೆರೆ ಹ್ಯಾಂಡ್ ಪೋಸ್ಟ್‌ನಿಂದ ಮಾಗಡಿ ಮತ್ತು ಇತರ ಕಡೆಗೆ ಹೋಗಲು ಸೂಕ್ತ ಸ್ಥಳದಲ್ಲಿ ಬಸ್ ನಿಲ್ದಾಣ ಮತ್ತು ಶೌಚಾಲಯ ನಿರ್ಮಿಸಿ ಪ್ರಯಾಣಿಕರ ಅನುಕೂಲ ಮಾಡಿಕೊಡಬೇಕು.
>
> –ಗೋವಿಂದರಾಜು, ರೈತ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ

### ವಾಹನ ಚಾಲಕರಿಗೆ ಅನುಕೂಲ

> ಸರ್ವಿಸ್ ರಸ್ತೆ ಮತ್ತು ಮೇಲ್ಸೇತುವೆ ಕಾರ್ಯವನ್ನು ವಿಳಂಬವಿಲ್ಲದೆ ವೇಗವಾಗಿ ಪೂರ್ಣಗೊಳಿಸಿದರೆ ವಾಹನ ಚಾಲಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ಇಲ್ಲದಿದ್ದರೆ ವಾಹನ ದಟ್ಟಣೆಯಿಂದ ಸ್ಥಳೀಯರು ಮತ್ತು ವಾಹನ ಚಾಲಕರಿಗೆ ತೊಂದರೆಯಾಗಬಹುದು. ಮೇಲ್ಸೇತುವೆ ನಿರ್ಮಾಣ ಬಹಳ ಉಪಯುಕ್ತವಾಗಿದೆ ಮತ್ತು ಅಪಘಾತಗಳು ಕಡಿಮೆಯಾಗುವ ನಿರೀಕ್ಷೆಯಿದೆ. ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಬೇಕು.
>
> –ಎಂ.ಕೆ. ಧನಂಜಯ, ಜಿ.ಪಂ ಮಾಜಿ ಸದಸ್ಯ

## ಮಿನಿ ನ್ಯೂಸ್

### ಪ್ರತಿಯೊಬ್ಬರು ರಸ್ತೆ ಸುರಕ್ಷಿತಾ ನಿಯಮ ಅನುಸರಿಸಿ : ನ್ಯಾಯಾಧೀಶ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗುಂಡ್ಲುಪೇಟೆ**

ಪ್ರತಿಯೊಬ್ಬ ವಾಹನ ಸವಾರರು ರಸ್ತೆ ಸುರಕ್ಷಿತಾ ನಿಯಮಗಳನ್ನ ಅನುಸರಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಬಸವರಾಜ ತಳವಾರ್ ಸಲಹೆ ನೀಡಿದರು. ಸಿ ಎಂ ಐ ಪಬ್ಲಿಕ್ ಶಾಲೆಯಲ್ಲಿ ಕಾನೂನು ಸೇವೆಗಳ ಸಮಿತಿ ವಕೀಲರ ಸಂಘ, ಪೊಲೀಸ್ ಇಲಾಖೆ, ಸಾರಿಗೆ ಇಲಾಖೆ ಚಾಮರಾಜನಗರ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚಾರಣೆ ನಿಮಿತ್ತ ನಡೆದ ಕಾರ್ಯಕ್ರಮವನ್ನ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರ ಜೀವವೂ ಅಮೂಲ್ಯವಾದುದು ಆದುದರಿಂದ ವಾಹನ ಚಾಲನೆ ಮಾಡುವ ಸಂದರ್ಭದಲ್ಲಿ ಸಂಚಾರ ನಿಯಮಗಳನ್ನ ಪಾಲನೆ ಮಾಡುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದೇ ರಸ್ತೆ ಸುರಕ್ಷತಾ ಮಾಸಾಚಾರಣೆಯ ಪ್ರಮುಖ ಉದ್ದೇಶವಾಗಿದೆ ಎಂದರು. ಈ ಸಂದರ್ಭದಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ, ವಕೀಲ ಪುಟ್ಟಸ್ವಾಮಿ, ಕಾರ್ಯದರ್ಶಿ ಜವರಾಜು, ಶಾಲಾ ಮುಖ್ಯ ಶಿಕ್ಷಕ ರೇಜೇಶ್ ಸೇರಿದಂತೆ ಹಲವರು ಹಾಜರಿದ್ದರು.

### ವಾಹನ ಡಿಕ್ಕಿ ಹೊಡೆದು ಚಿರತೆ ಸಾವು

• **ಉದಯವಾಹಿನಿ, ಕನಕಪುರ**

ವಾಹನವೊಂದು ಡಿಕ್ಕಿ ಹೊಡೆದ ಪರಿಣಾಮ ಚಿರತೆ ಮೃತಪಟ್ಟಿರುವ ಘಟನೆ ನಗರದ ಹೊರವಲಯದ ರಾಷ್ಟ್ರೀಯ ಹೆದ್ದಾರಿ 209ರ ಮಹಾರಾಜರಕಟ್ಟೆ ರಸ್ತೆ ಬಳಿ ನಡೆದಿದೆ. ಸಂಚಾರಿ ಆರಕ್ಷಕ ಉಪ ನಿರೀಕ್ಷಕ ನಾಗರಾಜು ಮತ್ತು ಸಿಬ್ಬಂದಿ ಗಸ್ತಿನಲ್ಲಿರುವಾಗ ಘಟನೆಯ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಿದ್ದಾ. ಮಾಹಿತಿ ತಿಳಿದ ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳಾದ ಉಪ ವಲಯ ಅರಣ್ಯಾಧಿಕಾರಿ ರವಿ, ಅರಣ್ಯಾಧಿಕಾರಿ ಶಿವಕುಮಾರ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ವನ್ಯಜೀವಿ ಸಂರಕ್ಷಣೆ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಚಿರತೆ ಸಾವಿಗೆ ಕಾರಣವಾದ ವಾಹನ ಚಾಲಕರ ವಿರುದ್ಧ ಕ್ರಮ ವಹಿಸಲಾಗುವುದು ಎಂದು ಉಪ ವಲಯ ಅರಣ್ಯಾಧಿಕಾರಿ ರವಿ ತಿಳಿಸಿದ್ದಾರೆ.

### ನಕಲಿ ಗನ್ ಪ್ರದರ್ಶನ ಮೂವರು ವಶಕ್ಕೆ

• **ಉದಯವಾಹಿನಿ, ಕುದೂರು**

ಬೆಂಗಳೂರು-ಕುಣಿಗಲ್ ಹೆದ್ದಾರಿಯಲ್ಲಿ ನಕಲಿ ಗನ್ ಪ್ರದರ್ಶಿಸಿದ ಮೂವರನ್ನು ಕುದೂರು ಠಾಣೆ ಪೊಲೀಸರು ಬಂಧಿಸಿದ್ದಾರೆ. ಬೆಂಗಳೂರು ಮೂಲದ ಮೂವರು ಯುವಕರು ಬಂಧಿತರು. ಬೆಂಗಳೂರು-ಕುಣಿಗಲ್ ಹೆದ್ದಾರಿಯಲ್ಲಿ ಕಾರಿನಲ್ಲಿ ಪ್ರಯಾಣ ಮಾಡುತ್ತಿದ್ದಾಗ ಯುವಕನೊಬ್ಬ ತನ್ನ ಕೈಯಲ್ಲಿ ಗನ್ ಮಾದರಿ ವಸ್ತುವನ್ನು ಹಿಡಿದು ಸಾರ್ವಜನಿಕರಿಗೆ ಪ್ರದರ್ಶಿಸಿದ್ದ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿತ್ತು. ಈ ಸಂಬಂಧ ಕುದೂರು ಠಾಣೆ ಪೊಲೀಸರು ಮೂವರು ಯುವಕರನ್ನು ವಶಕ್ಕೆ ಪಡೆದು ಕೃತ್ಯಕ್ಕೆ ಬಳಸಿದ್ದ ನಕಲಿ ಗನ್, ಕಾರನ್ನು ವಶಕ್ಕೆ ಪಡೆದಿದ್ದಾರೆ.

### ಬೆಂ-ಮೈ ಹೆದ್ದಾರಿ ಬದಿ ಕಾಡಿಗೆ ಬೆಂಕಿ: ಬಾನೆತ್ತರಕ್ಕೆ ಆವರಿಸಿದ ಹೊಗೆ

• **ಉದಯವಾಹಿನಿ, ಚನ್ನಪಟ್ಟಣ**

ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಚನ್ನಪಟ್ಟಣ, ಮದ್ದೂರು ತಾಲ್ಲೂಕುಗಳ ಗಡಿಯಲ್ಲಿರುವ ಬೆಟ್ಟದ ಅರಣ್ಯ ಪ್ರದೇಶದಲ್ಲಿ ಮಧ್ಯಾಹ್ನ ಬೆಂಕಿ ಕಾಣಿಸಿಕೊಂಡಿತು. ಮದ್ದೂರಿನ ಮಾರದೇವನಹಳ್ಳಿ, ಹೊಸೂರು ಅರಣ್ಯದಲ್ಲಿ, ಚನ್ನಪಟ್ಟಣದ ಅಟ್ಟೂರು ಗುಡ್ಡ, ದೇವರಹೊಸಹಳ್ಳಿ, ಕಣ್ವ ಜಲಾಶಯದ ರಸ್ತೆಯ ಕಾಡಿನಲ್ಲಿ ಘಟನೆ ನಡೆದಿದೆ. ಕುರುಚಲು ಅರಣ್ಯದಲ್ಲಿ ಆರಂಭದಲ್ಲಿ ಸಣ್ಣದಾಗಿ ಕಾಣಿಸಿಕೊಂಡ ಬೆಂಕಿಯು, ನಂತರ ನಿಧಾನವಾಗಿ ಅರಣ್ಯದೊಳಗೆ ಹರಡುತ್ತಾ ಹೋಯಿತು. ಬೆಂಕಿಯ ತೀವ್ರತೆಗೆ ಅರಣ್ಯದೊಳಗಿನಿಂದ ಎದ್ದ ಹೊಗೆಯು ಆಗಸದೆತ್ತರಕ್ಕೆ ವ್ಯಾಪಿಸಿತು. ಹೆದ್ದಾರಿಯಲ್ಲಿ ಸಾಗುತ್ತಿದ್ದ ವಾಹನ ಸವಾರರು ಅರಣ್ಯದೊಳಗಿನಿಂದ ಗೋಚರಿಸುತ್ತಿದ್ದ ಹೊಗೆ ಕಂಡು ಆತಂಕ ವ್ಯಕ್ತಪಡಿಸಿದರು. ಕಬ್ಬಿನ ಗದ್ದೆಯಲ್ಲಿ ಯಾರೊ ಬೆಂಕಿ ಹಚ್ಚಿರುವುದರಿಂದ ಈ ರೀತಿ ಹೊಗೆ ಬರುತ್ತಿರಬಹುದು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಶಂಕೆ ವ್ಯಕ್ತಪಡಿಸಿದ್ದರು. ಆದರೆ, ಈ ಕುರಿತು ಪ್ರಯಾಣಿಕರೊಬ್ಬರು ನೀಡಿದ ಮಾಹಿತಿ ಮೇರೆಗೆ, ಅಗ್ನಿಶಾಮಕ ದಳದ ಅಧಿಕಾರಿಗಳಿಗೆ ಕರೆ ಮಾಡಿ ವಿಷಯ ತಿಳಿಸಿದಾಗ, ಕಾಡಿನಲ್ಲಿ ಬೆಂಕಿ ಹೊತ್ತಿಕೊಂಡಿರುವುದು ಖಚಿತವಾಯಿತು. ಕೂಡಲೇ ಮದ್ದೂರು ಭಾಗದ ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆ ಮತ್ತು ಮದ್ದೂರು ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ಚನ್ನಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ಚನ್ನಪಟ್ಟಣ ಅರಣ್ಯ, ಅಗ್ನಿಶಾಮಕ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ತೆರಳಿ ಬೆಂಕಿ ನಂದಿಸುವ ಕಾರ್ಯಾಚರಣೆ ಕೈಗೊಂಡರು.

ಅಂತರಾಳದಿಂದ... EDITORIAL


# ಬೇಲಿಗೆ ಹೆದರುತ್ತಿರುವ ಹೊಲ!

ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮಾವೇಶವನ್ನು ಉದ್ಘಾಟಿಸಿದ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 'ಪೊಲೀಸ್ ಇಲಾಖೆಯ ಸಿಬ್ಬಂದಿಯೇ ಕ್ರಿಮಿನಲ್ ಪ್ರಕರಣಗಳಲ್ಲಿ ಶಾಮೀಲಾಗುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕಾದ ಪೊಲೀಸ್ ಇಲಾಖೆಯ ಸಿಬ್ಬಂದಿಯೇ 2025ರ ಸಾಲಿನಲ್ಲಿ 88 ಕ್ರಿಮಿನಲ್ ಪ್ರಕರಣಗಳಲ್ಲಿ ಶಾಮೀಲಾಗಿದ್ದಾರೆ. ಇದು ನಾಚಿಕೆಗೇಡಿನ ವಿಷಯ. ಬೇಲಿಯೇ ಎದ್ದು ಹೊಲ ಮೇಯ ತೊಡಗಿದರೆ, ನಾಡನ್ನು ರಕ್ಷಿಸುವವರು ಯಾರು? ಎಂದು ಕೇಳಿದ್ದಾರೆ. ಅವರು ಸಮಾರಂಭದಲ್ಲಿ ಎತ್ತಿದ ಪ್ರಶ್ನೆ ಅತ್ಯಂತ ಮಹತ್ವದ್ದಾಗಿದೆ. ಇಂದು ಕಾನೂನು ಸುವ್ಯವಸ್ಥೆ ಕೆಡುವುದಕ್ಕೆ ಪರೋಕ್ಷವಾಗಿ ಪೊಲೀಸ್ ಇಲಾಖೆಯೇ ಕಾರಣವಾಗುತ್ತಿರುವುದರ ಬಗ್ಗೆ ಗಂಭೀರ ಚರ್ಚೆ ನಡೆಯದೇ, ಅಪರಾಧಗಳನ್ನು ಪೂರ್ಣ ಪ್ರಮಾಣದಲ್ಲಿ ತಡೆಯುವುದು ಕಷ್ಟ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಸ್ತಾಪಿಸಿರುವ 88 ಅಪರಾಧ ಪ್ರಕರಣಗಳಲ್ಲಿ ಪೊಲೀಸ್ ಸಿಬ್ಬಂದಿ ನೇರವಾಗಿ ಶಾಮೀಲಾಗಿದ್ದಾರೆ. ಮುಖ್ಯವಾಗಿ ಇವು ಕಳವು, ಕೊಲೆ, ದೌರ್ಜನ್ಯ ಹಿಂಸಾಚಾರದಂತಹ ಅಪರಾಧ ಪ್ರಕರಣಗಳಾಗಿವೆ. ಇಂತಹ ಪ್ರಕರಣಗಳು ಬೆಳಕಿಗೆ ಬರುವುದು ತೀರಾ ಅಪರೂಪ ಯಾಕೆಂದರೆ, ಇಂತಹ ಕೃತ್ಯಗಳಲ್ಲಿ ಪೊಲೀಸರು ಶಾಮೀಲಾಗಿದ್ದರೆ ಅದನ್ನು ತನಿಖೆ ನಡೆಸಿ ಬೆಳಕಿಗೆ ತರಬೇಕಾದವರು ಕೂಡ ಪೊಲೀಸರೇ ಆಗಿರುತ್ತಾರೆ. ತಮ್ಮ ಇಲಾಖೆಯ ಸಿಬ್ಬಂದಿ ಎಸಗಿರುವ ಕೃತ್ಯಗಳನ್ನು ತಮ್ಮವರು' ಎನ್ನುವ ಬಾಂಧವ್ಯವನ್ನು ಮುಂದಿಟ್ಟುಕೊಂಡು ಮುಚ್ಚಿ ಹಾಕುವ ಪ್ರಯತ್ನಗಳು ನಡೆಯುವುದೇ ಹೆಚ್ಚು ಉಳಿದಂತೆ ಪೊಲೀಸ್ ಇಲಾಖೆಯನ್ನು ವ್ಯಾಪಿಸಿರುವ ಲಂಚ, ಭ್ರಷ್ಟಾಚಾರ ಪ್ರತಿ ವರ್ಷ ನೂರಾರು ಅಪರಾಧ ಪ್ರಕರಣಗಳನ್ನು ಮುಚ್ಚಿಹಾಕಿಸುತ್ತವೆ. ಲಂಚ ಪಡೆಯುವ ಸಂದರ್ಭದಲ್ಲಿ ಎಲ್ಲೋ ಒಂದಿಬ್ಬರು ಅಧಿಕಾರಿಗಳು ಅಥವಾ ತಳಸ್ತರದ ಸಿಬ್ಬಂದಿ ಸಿಕ್ಕಿ ಬೀಳುತ್ತಾರೆ ಅಷ್ಟೇ ಈ ನಾಡಿನಲ್ಲಿ ಅಪರಾಧ ಪ್ರಕರಣಗಳನ್ನು ಜೀವಂತವಾಗಿಟ್ಟಿರುವುದು ಪೊಲೀಸ್ ಇಲಾಖೆಯೊಳಗೆ ಹರಡಿಕೊಂಡಿರುವ ಭ್ರಷ್ಟಾಚಾರ. ಇದನ್ನು ಅಧಿಕೃತವಾಗಿ ಅಪರಾಧವಾಗಿ ಗುರುತಿಸಿ ಪ್ರಕರಣ ದಾಖಲಿಸುವ ವ್ಯವಸ್ಥೆಯೊಂದಿದ್ದರೆ ಜೈಲು ತುಂಬಾ ಪೊಲೀಸ್ ಸಿಬ್ಬಂದಿಯೇ ಇರುತ್ತಿದ್ದರು.ಪೊಲೀಸ್ ಇಲಾಖೆಯ ಪರೋಕ್ಷ ಸಹಕಾರವಿಲ್ಲದೇ ಇದ್ದರೆ ಡ್ರಗ್ಸ್ ಗಾಂಜಾ ಜಾಲಗಳು ವಿಸ್ತರಿಸಲು ಸಾಧ್ಯವಿಲ್ಲ ಎನ್ನುವುದನ್ನು ಸ್ವತಃ ಪೊಲೀಸ್ ಇಲಾಖೆಯೇ ಒಪ್ಪಿಕೊಳ್ಳುತ್ತದೆ. ವಶಪಡಿಸಿಕೊಂಡ ದೊಡ್ಡ ಪ್ರಮಾಣದ ಗಾಂಜಾ, ಡ್ರಗ್ಸ್‌ಗಳನ್ನು ಕೆಲವು ಪೊಲೀಸ್ ಸಿಬ್ಬಂದಿಯ ಮೂಲಕವೇ ಮತ್ತೆ ಸಮಾಜಕ್ಕೆ ಪೂರೈಸಲಾಗುತ್ತದೆ ಎನ್ನುವ ಆರೋಪಗಳಿವೆ. ಪೊಲೀಸ್ ಇಲಾಖೆಯ ಗೋದಾಮುಗಳಲ್ಲಿರುವ ಭಾರೀ ಪ್ರಮಾಣದ ಮಾದಕವಸ್ತುಗಳು ನಾಪತ್ತೆಯಾಗುವುದು ಮತ್ತು ಅವುಗಳನ್ನು ಇಲಿಗಳು ತಿಂದಿವೆ' ಎಂದು ಪೊಲೀಸ್ ಅಧಿಕಾರಿಗಳು ನ್ಯಾಯಾಲಯಗಳಲ್ಲಿ ಹೇಳಿಕೆಗಳನ್ನು ನೀಡುವುದು ಆಗಾಗ ಮಾಧ್ಯಮಗಳಲ್ಲಿ ವರದಿಯಾಗುತ್ತಿರುತ್ತವೆ. ಹೀಗೆ ಕಾಣೆಯಾಗಿರುವ ಮಾದಕ ದ್ರವ್ಯಗಳ ಬಗ್ಗೆ ಗಂಭೀರ ತನಿಖೆ ನಡೆಸಿದರೆ, ಜವಾಬ್ದಾರಿ ಸ್ಥಾನದಲ್ಲಿರುವವರೇ ಹೇಗೆ ಮಾದಕ ವಸ್ತುಗಳ ಜಾಲಗಳ ಜೊತೆಗೆ ಪರೋಕ್ಷವಾಗಿ ಶಾಮೀಲಾಗಿದ್ದಾರೆ ಎನ್ನುವ ಕಟು ಸತ್ಯ ಬೆಳಕಿಗೆ ಬರಬಹುದಾಗಿದೆ. ಯಾವುದೇ ಅಪರಾಧದಲ್ಲಿ ಪೊಲೀಸರು ನೇರವಾಗಿ ಭಾಗಿಯಾಗುವುದಕ್ಕಿಂತಲೂ ಅಪಾಯಕಾರಿಯಾಗಿದೆ ಇದು ಹಲವು ಅಮಾಯಕರು ಖಾಕಿಗಳ ಒತ್ತಡಗಳಿಗೆ ಬಲಿಯಾಗಿ ಇಂತಹ ವ್ಯಾಪಾರಗಳಿಗೆ ಜೊತೆಯಾಗಬೇಕಾದ ಸ್ಥಿತಿ ನಿರ್ಮಾಣವಾಗುತ್ತದೆ ಎನ್ನುವ ಆರೋಪಗಳು ಇಂದು ನಿನ್ನೆಯದೇನೂ ಅಲ್ಲ ಅಮಾಯಕನೊಬ್ಬ ಮಾಡದ ತಪ್ಪಿಗೆ ಜೈಲು ಪಾಲಾದರೆ ಆದ ಮರಳಿ ಬರುವಾಗ ಅಪರಾಧಗಳ ಸಕಲ ಕಲೆ'ಗಳನ್ನು ಕಲಿತು ಬಂದಿರುತ್ತಾನೆ. ಜೈಲುಗಳು ಅಪರಾಧಿಗಳನ್ನು ತಿದ್ದಿ ಸಜ್ಜನನಾಗಿಸುವುದಕ್ಕಿಂತ, ಅಮಾಯಕರನ್ನು ಅಪರಾಧಿಗಳನ್ನಾಗಿಸುವುದರಲ್ಲೇ ಕುಖ್ಯಾತವಾಗಿವೆ. ಜೈಲುಗಳು ಕುಖ್ಯಾತ ಅಪರಾಧಿಗಳ ಜೊತೆಗೆ ಸಂಪರ್ಕವನ್ನು ಬೆಸೆಯುವ ಕೇಂದ್ರವಾಗಿದೆ.

> **ಇತ್ತೀಚೆಗೆ ಪುತ್ತೂರಿನಲ್ಲಿ ನಡೆದ ಘಟನೆಯನ್ನೇ ತೆಗೆದುಕೊಳ್ಳೋಣ. ಇಲ್ಲಿನ ಸುನೀಲ್ ಎಂಬವರು ಸ್ಥಳೀಯ ರೈತನಿಂದ ಒಂದು ಹಾಲು ಕರೆಯುವ ಹಸು, ಇನ್ನೊಂದು ಗಬ್ಬದ ಹಸು ಮತ್ತು ಐದು ದಿನಗಳ ಕರುವೊಂದನ್ನು ಖರೀದಿಸಿ ಸಾಗಾಟ ನಡೆಸಿದ್ದರು. ಸ್ಥಳೀಯ ಸಂಘಪರಿವಾರದ ವ್ಯಕ್ತಿಗಳು ಈತನನ್ನು ತಡೆದು ಕಿರುಕುಳ ನೀಡಿದ್ದಾರೆ.**

ಪೊಲೀಸ್ ಸಿಬ್ಬಂದಿ ಕೆಲವು ಅಪಾಯಕಾರಿ, ಸಂವಿಧಾನವಿರೋಧಿ ಸಿದ್ಧಾಂತಗಳ ಜೊತೆಗೆ ಕೈ ಜೋಡಿಸಿಕೊಂಡಿರುವುದು ಕಾನೂನು ಸುವ್ಯವಸ್ಥೆ ಹದಗೆಡಲು ಇನ್ನೊಂದು ಪ್ರಮುಖ ಕಾರಣವಾಗಿದೆ. ದೇಶಾದ್ಯಂತ ಹೆಚ್ಚಿರುವ ಗುಂಪು ಥಳಿತ, ಗುಂಪು ಹತ್ಯೆ ಅನೈತಿಕ ಪೊಲೀಸ್‌ಗಿರಿ, ಗೋರಕ್ಷಣೆಯ ಹೆಸರಿನಲ್ಲಿ ನಡೆಯುವ ದಾಂಧಲೆಗಳಿಗೆ ಪೊಲೀಸ್ ಇಲಾಖೆಯ ಮೌನವೇ ಕಾರಣ ಎನ್ನುವ ಆರೋಪಗಳಿವೆ. ಪೊಲೀಸ್ ಇಲಾಖೆಯೊಳಗಿರುವ ಕೆಲವು ಸಿಬ್ಬಂದಿಯ ಕಾರಣಗಳಿಂದಾಗಿ, ಸಂಘಪರಿವಾರ ಪರ್ಯಾಯ ಪೊಲೀಸ್ ಇಲಾಖೆಯಾಗಿ ಕೆಲಸ ಮಾಡುತ್ತಿದೆ. ದನಗಳನ್ನು ಸಾಕುವ ರೈತರು ಇಂದು ಗೋರಕ್ಷಕರ ವೇಷದಲ್ಲಿರುವ ರೌಡಿಗಳಿಗೆ, ಗೂಂಡಾಗಳಿಗೆ ಹೆದರಬೇಕಾಗಿದೆ. ಸಾಕುವುದಕ್ಕಾಗಿಯೂ ದನಗಳನ್ನು ಸಾಗಾಟ ಮಾಡಲು ಸಾಧ್ಯವಿಲ್ಲ ಎನ್ನುವ ವಾತಾವರಣವಿದೆ. ಪೊಲೀಸ್ ಇಲಾಖೆಯು ಈ ನಕಲಿ ಗೋರಕ್ಷಕರ ಪರವಾಗಿ ಕೆಲಸ ಮಾಡುತ್ತಿದೆ ಎನ್ನುವ ಆರೋಪವಿದೆ. ಬಳಿಕ ಪೊಲೀಸರು ಬಂದು ಸುನೀಲ್ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಪುತ್ತೂರಿನ ರೈತ ಸಂಘದ ಕಾರ್ಯಕರ್ತರು ಇದರ ವಿರುದ್ಧ ಈಗಾಗಲೇ ಪ್ರತಿಭಟನೆಯನ್ನು ಮಾಡಿದ್ದಾರೆ.ದನ ಸಾಗಾಟಕ್ಕೆ ಸಂಬಂಧಿಸಿದಂತೆ ನಕಲಿ ಗೋರಕ್ಷಕರು ವಾಹನಗಳನ್ನು ತಡೆದು ಹಲ್ಲೆ ನಡೆಸುವುದು, ದರೋಡೆ ನಡೆಸುವುದು ನಿರಂತರ ನಡೆಯುತ್ತದೆಯಾದರೂ ಇದರ ವಿರುದ್ಧ ಪೊಲೀಸರು ಕಠಿಣ ಕ್ರಮ ತೆಗೆದುಕೊಳ್ಳುತ್ತಿಲ್ಲ ಸಂತ್ರಸ್ತರ ಮೇಲೆಯೇ ಪೊಲೀಸರು ಪ್ರಕರಣ ದಾಖಲಿಸುತ್ತಾರೆ. ಇದಕ್ಕೆ ಮುಖ್ಯ ಕಾರಣ ಪೊಲೀಸ್ ಇಲಾಖೆಯ ಕೆಲವು ಸಿಬ್ಬಂದಿ ಈ ನಕಲಿ ಗೋರಕ್ಷಕರ ಜೊತೆಗೆ ಶಾಮೀಲಾಗಿರುವುದು. ಈ ಕಾರಣದಿಂದಲೇ ದೇಶದಲ್ಲಿ ಗುಂಪಹತ್ಯೆ, ಗುಂಪುಥಳಿತ ಪ್ರಕರಣ ಹೆಚ್ಚುತ್ತಿರುವುದು. ಮುಂದಿನ ದಿನಗಳಲ್ಲಿ ಇದು ಭಾರತದಲ್ಲಿ ಭಾರೀ ಹಿಂಸಾಚಾರಕ್ಕೆ ಕಾರಣವಾಗಬಹುದು ಎನ್ನುವ ಎಚ್ಚರಿಕೆಯನ್ನು ಅಂತರ್‌ರಾಷ್ಟ್ರೀಯ ಮಟ್ಟದ ಸಂಸ್ಥೆಯೊಂದು ತನ್ನ ವರದಿಯಲ್ಲಿ ಈಗಾಗಲೇ ನೀಡಿದೆ.



## ರಾಮಾಯಣ

ಶ್ರೀ ರಾಮನು ವಾಲಿಯ ಮೇಲೆ ಬಾಣವನ್ನು ಪ್ರಯೋಗಿಸಿದ್ದು

• ಹಿಂದಿನ ಸಂಚಿಕೆಯಿಂದ 120 ನೆಯ ಅಧ್ಯಾಯ

ನೀನು ನನ್ನ ಮೇಲಿನ ಸ್ನೇಹದಿಂದಲೂ ಭಕ್ತಿಯಿಂದಲೂ ಹಿತವನ್ನು ಮಾಡ ಬೇಕೆಂಬ ಬುದ್ಧಿಯಿಂದಲೂ ಹೀಗೆ ಗೇಳಿದ್ದೀಯೆ. ನಾನು ಸುಗ್ರೀವನೊಡನೆ ಯುದ್ಧವನ್ನು ಮಾಡಿ ಆತನ ಗರ್ವವನ್ನು ಪರಿಹರಿಸುವೆನು. ಆದರೆ ಆತನ ಪ್ರಾಣಾಪಹಾರವನ್ನು ಮಾಡೆನು. ನಾನು ಮುಷ್ಟಿ ಪ್ರಹಾರಗಳಿಂದಲೂ ದೊಡ್ಡ ಮರಗಳಿಂದಲೂ ಹೊಡೆದೆನಾದರೆ ಅವನು ಕಂಗೆಟ್ಟು ಓಡುವನು. ನನ್ನ ಬಲದ ಮುಂದೆ ದುರಾತ್ಮನಾದ ಸುಗ್ರೀವನು ನಿಲ್ಲಲಾರನು. ತಾರಾದೇವಿ ನೀನು ನನ್ನ ಮೇಲಿನ ಪ್ರೀತಿಯಿಂದ ಮಾತನಾಡಿದ್ದೀಯೆ. ಅಲ್ಲಿಗೆ ನೀನು ಬರಬೇಡ, ನನ್ನಾಣೆ : ನೀನು ಮನೆಗೆ ತಿರುಗಿ ಹೋಗು. ನಾನು ನನ್ನ ತಮ್ಮನಾದ ಸುಗ್ರೀವನನ್ನು ಸಮರದಲ್ಲಿ ಜಯಿಸಿ ತಿರುಗಿ ಬರುತ್ತೇನೆ ಎಂದು ನುಡಿದು ಆ ದೇವಿಯನ್ನು ಆಲಿಂಗಿಸಿಕೊಂಡನು.

ತಾರಾದೇವಿಯು ದುಃಖಾಕ್ರಾಂತೆಯಾಗಿ ಕಣ್ಣೀರುಬಿಡುತ್ತ ತನ್ನ ಪತಿಯಾದ ವಾಲಿಗೆ ಪ್ರದಕ್ಷಿಣೆಯನ್ನು ಮಾಡಿ ಆತನಿಗೆ ಸಮರಾಂಗಣದಲ್ಲಿ ಜಯವಾಗಬೇಕೆಂದು ದೇವತೆಗಳಿಗೆ ಕೈ ಮುಗಿದು ಬೇಡಿಕೊಂಡು ಚಿಂತಾಕ್ರಾಂತೆಯಾಗಿ ತನ್ನ ಸಂಗಡ ಬಂದ ದಾದಿಯರನ್ನು ಕೂಡಿಕೊಂಡು ತನ್ನ ಅರಮನೆಗೆ ಹಿಂದಿರುಗಿ ಹೋದಳು. ಆಮೇಲೆ ವಾಲಿಯು ಅತ್ಯಂತ ಕೋಪಾಟೋಪದಿಂದ ಸರ್ಪದಂತೆ ನಿಟ್ಟುಸಿರುಬಿಡುತ್ತ ವೇಗ ದಿಂದ ನಡೆದು ಸುಗ್ರೀವನನ್ನು ಕೊಲ್ಲಬೇಕೆಂದು ನಾನಾದಿಕ್ಕುಗಳನ್ನೂ ನೋಡಿದನು. ಒಂದು ದಿಕ್ಕಿನಲ್ಲಿ ಅಗ್ನಿಯಂತೆ ತನ್ನ ತನುಕಾಂತಿಯಿಂದ ದಿಕ್ಕುಗಳನ್ನು ಬೆಳಗಿಸುತ್ತ ದೇದೀಪ್ಯಮಾನನಾಗಿದ್ದ ಸುಗ್ರೀವನನ್ನು ಕಂಡು ಕೋಪ ಕೆರಳಿ ಕೈಯನ್ನು ಮೇಲಕ್ಕೆ ನೆಗಹಿಕೊಂಡು ಸುಗ್ರೀವನ ಕಡೆಗೆ ಧಾವಿಸಿದನು. ಆತನು ಎದುರಾಗಿ ಯುದ್ಧಕ್ಕೆ ಬರಲು ಆತನನ್ನು ಕರೆದು ಎಲೈ ಸುಗ್ರೀವ, ನಿನ್ನ ಪ್ರಾಣಾಪಹಾರವನ್ನು ಮಾಡುವ ನನ್ನ ಮುಷಿಯು ನಿನ್ನ ಶಿರಸ್ಸಿನ ಮೇಲೆ ಬೀಳುತ್ತಿದೆ, ನೋಡು ಎಂದು ಆರ್ಭಟಿಸಿ ಹೊಡೆದನು. ಸುಗ್ರೀವನು ಆ ಮುಷ್ಟಿಘಾತದಿಂದ ಗಾಯಪಡೆದು ಹಿಮ್ಮೆಟ್ಟಿ ವಜ್ರಾಯುಧದ ಪೆಟ್ಟಿಗೆ ಚೂರ್ಣೀಕೃತವಾದ ಪರ್ವತದಂತೆ ಶರೀರವೆಲ್ಲವೂ ರಕ್ತಮಸಗಿ ಅತ್ಯಂತ ಕೋಪದಿಂದ ಒಂದು ದೊಡ್ಡ ಮರವನ್ನು ಕಿತ್ತು ವಾಲಿಯ ಮೇಲೆ ಹಾಕಿದನು. ಆಗ ವಜ್ರಾಯುಧದ ಪೆಟ್ಟಿನಿಂದ ಪರ್ವತವು ಬೀಳುವಂತೆಯೂ ಭಾರದಿಂದ ಸಮುದ್ರದಲ್ಲಿ ಮುಳುಗುವ ಹಡಗಿನಂತೆಯೂ ವಾಲಿಯು ಕಂಗೆಟ್ಟು ಭೂಮಿಯಲ್ಲಿ ಬಿದ್ದನು. ಈ ರೀತಿಯಲ್ಲಿ ಗರುಡವೇಗವುಳ್ಳ ಮಹಾಬಲಪರಾಕ್ರಮಿಗಳಾದ ವಾಲಿಸುಗ್ರೀವರಿಬ್ಬರೂ ಅಂತರಿಕ್ಷಮಾರ್ಗದಲ್ಲಿ ಚಂದ್ರಸೂರ್ಯರಂತೆ ಒಪ್ಪುತ್ತ ಒಬ್ಬರನ್ನೊಬ್ಬರು ಜಯಿಸಬೇಕೆಂದು ರಣಭೂಮಿಯಲ್ಲಿ ಹೋರಾಡುತ್ತಿರುವ ಸಮಯದಲ್ಲಿ ಸೂರ್ಯಪುತ್ರನಾದ ಸುಗ್ರೀವನು ಬಲಹೀನನಾಗಿ ವಾಲಿಯಿಂದ ಮುರಿದು ಶ್ರೀರಾಮನಿಗೆ ವಾಲಿಯನ್ನು ಕಣ್ಣುಸನ್ನೆಯಿಂದ ತೋರಿಸುತ್ತಿದ್ದನು. ಈ ಪ್ರಕಾರದಲ್ಲಿ ಮರಗಳಿಂದಲೂ ಕೊಂಬೆಗಳಿಂದಲೂ ವಜ್ರಾಯುಧದ ಅಲಗಿನಂತೆ ಅತಿತೀಕ್ಷ್ಣವಾದ ಉಗುರುಗಳಿಂದಲೂ ಮುಷ್ಟಿಗಳಿಂದಲೂ ಘೋರವಾದ ಯುದ್ಧವನ್ನು

ಮುಂದುವರಿಯುವುದು...

# ಪಾಲಕ್ ಸೊಪ್ಪು

☛ ವಿಶ್ವಾಸ್.ಡಿ.ಗೌಡ



ಪಾಲಕ್ ಸೊಪ್ಪು ತರಕಾರಿಯಾಗಿ ಆಡುಗೆಯಲ್ಲಿ ಉಪಯೋಗಿಸಲ್ಪಡುತ್ತದೆ. ಪಾಲಕ್ ಸೊಪ್ಪಿನಲ್ಲಿ ಹೇರಳವಾಗಿ ನಾರಿನಂಶ, ಪ್ರೋಟಿನ್‌ಗಳು, ಎ ಜೀವಸತ್ವ ಇವೆ. ಮುಖ್ಯವಾಗಿ ಇದರಲ್ಲಿ ಕಬ್ಬಿಣಾಂಶ ಇದೆ. ಪಾಲಕ್ ಸೊಪ್ಪನ್ನು ವಾರಕ್ಕೆ 3 ಬಾರಿ ಸೇವಿಸಿದರೆ ಆರೋಗ್ಯಕ್ಕೆ



ಬಹಳ ಒಳ್ಳೆಯದು. ಹೇಗೆ ಇದು ಆರೋಗ್ಯಕ್ಕೆ ಒಳ್ಳೆಯದೋ ಹಾಗೆಯೇ ಇದು ತ್ವಚೆಗೆ ಕೂಡ ಒಳ್ಳೆಯದು. ಪಾಲಕ್ ಸೊಪ್ಪಿನಲ್ಲಿರುವ ಅಂಶಗಳು ಸೋರಿಯಾಸಿಸ್, ತುರಿಕೆ ಮತ್ತು ಒಣಚರ್ಮವನ್ನು ತಡೆಯುವುದಕ್ಕೆ ಉಪಯುಕ್ತವಾಗಿವೆ.

ಇದು ಕೂದಲ ಬೆಳವಣಿಗೆಗೂ ಬಹಳ ಒಳ್ಳೆಯದು. ಪಾಲಕ್ ಸೊಪ್ಪಿನಲ್ಲಿ ವಿಟಮಿನ್ ಬಿ,ಸಿ,ಇ ಪೊಟ್ಯಾಷಿಯಂ, ಕಬ್ಬಿಣ ಮತ್ತು ಒಮೆಗಾ 3 ಕೊಬ್ಬಿನ ಆಮ್ಲಗಳಿವೆ ಈ ಅಂಶಗಳು, ಕೂದಲ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಅದರಲ್ಲೂ, ಪಾಲಕ್ ಸೊಪ್ಪಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿರುವ ಕಬ್ಬಿಣದ ಅಂಶ ಕೆಂಪು ರಕ್ತಕಣಗಳನ್ನು ವೃದ್ಧಿಸುವ ಮೂಲಕ ಆಮ್ಲಜನಕವನ್ನು ಪ್ರತಿ ಕೂದಲ ಬುಡಕ್ಕೂ ತಲುಪಿಸಲು ಸಹಾಯಕಾರಿ ಆಗಿದೆ. ಪಾಲಕ್ ಸೊಪ್ಪಿನ ನಿಯಮಿತ ಸೇವನೆಯಿಂದ ಕೂದಲ ಉದುರುವಿಕೆಯನ್ನು ತಡೆಯಬಹುದು. ಕೂದಲು ಉದುರುವುದಕ್ಕೆ ಮುಖ್ಯ ಕಾರಣವೆಂದರೆ ಕೂದಲ ಬುಡದಲ್ಲಿ ಕಬ್ಬಿಣ ಅಂಶದ ಕೊರತೆಯಿಂದ ಪಾಲಕ್ ಸೊಪ್ಪು ಕಬ್ಬಿಣದ ಅಂಶವನ್ನು ಕೂದಲ ಬುಡಕ್ಕೆ ಒದಗಿಸುವುದರಿಂದ ಕೂದಲು ಉದುರುವುದು ಕ್ರಮೇಣ ಕಡಿಮೆ ಆಗುತ್ತದೆ. ಪಾಲಕ್ ಸೊಪ್ಪಿನಲ್ಲಿ ವಿಟಮಿನ್ ಸಿ ಮತ್ತು ಎ ಇರುವುದರಿಂದ ಇವುಗಳು ತ್ವಚೆಯ ಬಿಗಿತ ಮತ್ತು ಕಾಂತಿ ಹೆಚ್ಚಿಸಲು ನೆರವಾಗುತ್ತದೆ, ಹಾಗೆಯೇ ವಿಟಮಿನ್ ಸಿ ಹೊಸ ಜೀವಕೋಶಗಳ ಹುಟ್ಟಿಗೆ ನೆರವಾಗುತ್ತದೆ.

ಹಳೆಯ ಕಲೆಗಳಿಂದ ಕೂಡಿರುವ ತ್ವಚೆಯ ಭಾಗವನ್ನು ಇದು ತಿಳಿಯಾಗಿಸುತ್ತದೆ. ಪಾಲಕ್ ಸೊಪ್ಪಿನಲ್ಲಿ ವಿಟಮಿನ್ ಕೆ ಇದ್ದು, ಇದು ಬಿಸಿಲಿನಿಂದ ಕಪ್ಪಗಿರುವ ಚರ್ಮವನ್ನು ಸಹಜ ಬಣ್ಣಕ್ಕೆ ತರಲು ನೆರವಾಗುತ್ತದೆ. ಪಾಲಕ್ ಸೊಪ್ಪು ಸೂರ್ಯನ ಕಿರಣಗಳಿಂದ ರಕ್ಷಣೆ ನೀಡುತ್ತದೆ. ಪಾಲಕ್ ಸೊಪ್ಪಿನಲ್ಲಿರುವ ವಿಟಮಿನ್ ಬಿ ಸೂರ್ಯನ ಕಿರಣಗಳಿರುವ ಹಾನಿಕಾರಕ ಅತಿನೇರಳೆ ಕಿರಣಗಳ ಪ್ರಭಾವದಿಂದ ರಕ್ಷಣೆ ನೀಡುತ್ತದೆ. ಅತಿನೇರಳೆ ಕಿರಣಗಳು ತ್ವಚೆಯನ್ನು ಸುಟ್ಟಂತೆ ಮಾಡುವ ಕ್ಯಾನ್ಸರ್ ಮತ್ತು ವೃದ್ಧಾಪ್ಯದ ಕುರುಹುಗಳು ಬೇಗ ಬರುವಂತೆ ಮಾಡುತ್ತದೆ, ಆದರೆ ಪಾಲಕ್ ಸೊಪ್ಪು ಕ್ಯಾನ್ಸರ್ ಮತ್ತು ವೃದ್ಧಾಪ್ಯ ಬರದಂತೆ ತಡೆಯುತ್ತದೆ.

**ಬಳಸುವ ವಿಧಾನ:** ಪಾಲಕ್ ಸೊಪ್ಪಿನ ಪಲ್ಯ ಹಾಗೂ ಇತರ ವ್ಯಂಜನಗಳನ್ನು ಮಾಡಿ ತಿನ್ನುತ್ತಾರೆ ಅದರಿಂದ ಅದರಲ್ಲಿರುವ ಅನೇಕ ಪೋಷಕಾಂಶಗಳು ನಷ್ಟವಾಗುತ್ತವೆ ಪಾಲಕ ಸೊಪ್ಪಿನ ಗರಿಷ್ಠ ಲಾಭಗಳನ್ನು ಪಡೆಯಲು ಈ ಕೆಳಗಿನಂತೆ ಉಪಯೋಗಿಸಬೇಕು . ಪಾಲಕ್ ಸೊಪ್ಪಿನ 15–20 ಎಲೆಗಳನ್ನು ಅಡುಗೆ ಸೋಡಾ ಬೆರೆಸಿದ ನೀರಿನಲ್ಲಿ 20–30 ನಿಮಿಷಗಳವರೆಗೆ ನೆನೆಸಿ ಇಟ್ಟು ನಂತರ 2–3 ಬಾರಿ ಚೆನ್ನಾಗಿ ತೊಳೆದು ಹಸಿ ಎಲೆಗಳನ್ನು ಅಗಿದು ತಿನ್ನಬೇಕು ಅಥವಾ ಮಿಕ್ಸಿಯಲ್ಲಿ ನಿಧಾನವಾಗಿ ಬಿಸಿಯಾಗದಂತೆ ತಿರುಗಿಸಿ ಇದರ ಸ್ಮೂದಿ ಮಾಡಿ ಸೋಸಿಕೊಳ್ಳದೆ ಇಡಿಯಾಗಿ ಕುಡಿಯಬೇಕು.

# ಪಕ್ಕಾ ಕೋಲ್ಕತ್ತಾ ಸ್ಟೈಲ್ ಎಗ್ ರೋಲ್!



ಪಕ್ಕಾ ಕೋಲ್ಕತ್ತಾ ಸ್ಟೈಲ್ ಎಗ್ ರೋಲ್! ರಸ್ತೆಯ ಬದಿಯಲ್ಲಿ ಸಿಗುವ ಅದೇ ರುಚಿ ಈಗ ನಿಮ್ಮ ಮನೆಯಲ್ಲಿ.. ಹೋಟೆಲ್ ಶೈಲಿಯ ಪರ್ಫೆಕ್ಟ್ ಎಗ್ ರೋಲ್ ಮಾಡುವ ರಹಸ್ಯ ಇಲ್ಲಿದೆ. ಹೌದು, ಭಾರತದ ಬೀದಿಬದಿ ಆಹಾರ ಸಂಸ್ಕೃತಿಯಲ್ಲಿ ಕೋಲ್ಕತ್ತಾ ಶೈಲಿಯ ಎಗ್ ರೋಲ್ ಅತ್ಯಂತ ಜನಪ್ರಿಯತೆ ಗಳಿಸಿದೆ. ಗರಿಗರಿ ಪರೋಟದೊಳಗೆ ಕೋಮಲ ಮೊಟ್ಟೆ, ಮಸಾಲೆಯುಕ್ತ ಈರುಳ್ಳಿ ಮತ್ತು ವಿವಿಧ ಸಾಸ್‌ಗಳ ಸಂಯೋಜನೆಯು ಬಾಯಿ ನೀರೂರಿಸುತ್ತದೆ. ಸಾಮಾನ್ಯವಾಗಿ ರಸ್ತೆ ಬದಿಯ ಗಾಡಿಗಳಲ್ಲಿ ಸಿಗುವ ಈ ಖಾದ್ಯವನ್ನು ಇನ್ನು ಶುಚಿಯಾಗಿ, ಕಡಿಮೆ ಸಮಯದಲ್ಲಿ ಮನೆಯಲ್ಲೇ ಸುಲಭವಾಗಿ ತಯಾರಿಸಬಹುದು. ಗೋಧಿ ಅಥವಾ ಮೈದಾ ಹಿಟ್ಟನ್ನು ಬಳಸಿ, ಹೋಟೆಲ್ ಶೈಲಿಯ ಮೃದು ಪರೋಟ ಮತ್ತು ಚಟ್‌ಪಟಾ ಮಸಾಲೆ ತುಂಬಿದ ಈ ರುಚಿಕರ ಎಗ್ ರೋಲ್ ತಯಾರಿಸುವ ಸಂಪೂರ್ಣ, ಹಂತ ಹಂತದ ಸರಳ ವಿಧಾನ ಇಲ್ಲಿ ವಿವರಿಸಲಾಗಿದೆ.

**ಕೋಲ್ಕತ್ತಾ ಎಗ್ ರೋಲ್‌ಗೆ ಬೇಕಾಗುವ ಸಾಮಗ್ರಿಗಳು**

- ಮೈದಾ ಅಥವಾ ಗೋಧಿ ಹಿಟ್ಟು – 1 ಕಪ್
- ಉಪ್ಪು – ರುಚಿಗೆ ತಕ್ಕಷ್ಟು
- ಸಕ್ಕರೆ – ಅರ್ಧ ಚಮಚ
- ಎಣ್ಣೆ – ಸ್ವಲ್ಪ ರೋಲ್ ತಯಾರಿಕೆಗೆ
- ಮೊಟ್ಟೆಗಳು (ಪ್ರತಿ ರೋಲ್‌ಗೆ ಒಂದು)
- ಎಣ್ಣೆ / ಬೆಣ್ಣೆ
- ಉದ್ದಕ್ಕೆ ಹೆಚ್ಚಿದ ಈರುಳ್ಳಿ
- ಸಣ್ಣಗೆ ಹೆಚ್ಚಿದ ಹಸಿ ಮೆಣಸಿನಕಾಯಿ
- ಚಾಟ್ ಮಸಾಲಾ
- ಕರಿಮೆಣಸಿನ ಪುಡಿ
- ನಿಂಬೆ ರಸ ಸಾಸ್‌ಗೆ
- ಟೊಮ್ಯಾಟೋ ಕೆಚಪ್

**ಗ್ರೀನ್ ಚಿಲ್ಲಿ ಸಾಸ್ ಕೋಲ್ಕತ್ತಾ ಎಗ್ ರೋಲ್ ತಯಾರಿಸುವ ವಿಧಾನ :** ಮೊದಲು ಒಂದು ಪಾತ್ರೆಯಲ್ಲಿ ಮೈದಾ ಅಥವಾ ಗೋಧಿ ಹಿಟ್ಟು, ಉಪ್ಪು, ಸಕ್ಕರೆ ಹಾಗೂ ಒಂದು ಚಮಚ ಎಣ್ಣೆ ಹಾಕಿ ಮಿಕ್ಸ್ ಮಾಡಿ. – ನಂತರ ಸ್ವಲ್ಪ ಸ್ವಲ್ಪವೇ ನೀರು ಸೇರಿಸುತ್ತಾ ಚಪಾತಿ ಹಿಟ್ಟಿನಂತೆ ಮೃದುವಾಗಿ ಕಲಸಿ. ಈ ಹಿಟ್ಟಿನ ಮೇಲೆ ಎಣ್ಣೆ ಹಚ್ಚಿ, ಸುಮಾರು 15–20 ನಿಮಿಷಗಳ ಕಾಲ ನೆನೆಯಲು ಬಿಡಿ. ಇದು ರೋಲ್‌ಗಳಿಗೆ ಉತ್ತಮ ಮೃದುತ್ವ ನೀಡುತ್ತದೆ. – ನೆನೆದ ಹಿಟ್ಟಿನಿಂದ ದೊಡ್ಡ ಗಾತ್ರದ ಉಂಡೆಗಳನ್ನು (ಲೋಯ್) ಮಾಡಿ. ಅವುಗಳನ್ನು ಚಪಾತಿಗಿಂತ ಸ್ವಲ್ಪ ದಪ್ಪವಾಗಿ ಲಟ್ಟಿಸಿಕೊಳ್ಳಿ. – ಈಗ ಬಿಸಿಯಾದ ತವಾ ಮೇಲೆ ಪರೋಟವನ್ನು ಹಾಕಿ, ಎರಡೂ ಕಡೆ ಸ್ವಲ್ಪ ಎಣ್ಣೆ ಹಚ್ಚಿ ಅರ್ಧದಷ್ಟು ಬೇಯಿಸಿ ಇಟ್ಟುಕೊಳ್ಳಿ. – ಬಳಿಕ ಪರೋಟ ಒಂದು ಬದಿಯಲ್ಲಿ ಬೇಯುತ್ತಿರುವಾಗಲೇ, ಒಂದು ಬೌಲ್‌ನಲ್ಲಿ ಒಂದು ಮೊಟ್ಟೆಗೆ ಸ್ವಲ್ಪ ಉಪ್ಪು ಮತ್ತು ಕರಿಮೆಣಸಿನ ಪುಡಿ ಹಾಕಿ ಚೆನ್ನಾಗಿ ಬೀಟ್ ಮಾಡಿ. – ತವಾ ಮೇಲಿರುವ ಪರೋಟದ ಮೇಲೆ ಈ ಮೊಟ್ಟೆಯ ಮಿಶ್ರಣವನ್ನು ಸಮವಾಗಿ ಹರಡಿ. ತಕ್ಷಣ ಪರೋಟವನ್ನು ತಿರುಗಿಸಿ (ಮೊಟ್ಟೆ ಇರುವ ಭಾಗ ತವಕ್ಕೆ ತಾಕುವಂತೆ), ಮೊಟ್ಟೆ ಚೆನ್ನಾಗಿ ಅಂಟಿಕೊಳ್ಳುವವರೆಗೆ ಬೇಯಿಸಿ. – ಬೇಯಿಸಿದ ಎಗ್ ಪರೋಟವನ್ನು ಒಂದು ಪ್ಲೇಟ್‌ಗೆ ಹಾಕಿ. ಮೊಟ್ಟೆ ಇರುವ ಭಾಗದ ಮೇಲೆ ಉದ್ದಕ್ಕೆ ಹೆಚ್ಚಿದ ಈರುಳ್ಳಿ, ಸಣ್ಣಗೆ ಹೆಚ್ಚಿದ ಹಸಿಮೆಣಸಿನಕಾಯಿಗಳನ್ನು ಹರಡಿ. – ಇದರ ಮೇಲೆ ಚಾಟ್ ಮಸಾಲಾ, ಕರಿಮೆಣಸಿನ ಪುಡಿ, ಮತ್ತು ಸ್ವಲ್ಪ ನಿಂಬೆ ರಸ ಚಿಮುಕಿಸಿ. ರುಚಿಗೆ ತಕ್ಕಂತೆ ಟೊಮ್ಯಾಟೋ ಕೆಚಪ್ ಮತ್ತು ಗ್ರೀನ್ ಚಿಲ್ಲಿ ಸಾಸ್ ಸೇರಿಸಿ. ಅಂತಿಮವಾಗಿ, ಪರೋಟವನ್ನು ನಿಧಾನವಾಗಿ ಸುರುಳಿಯಂತೆ ಸುತ್ತಿ. ರೋಲ್ ಬಿಚ್ಚಿಕೊಳ್ಳದಂತೆ ಭದ್ರಪಡಿಸಲು, ಅರ್ಧ ಭಾಗಕ್ಕೆ ಟಿಶ್ಯು ಪೇಪರ್ ಅಥವಾ ಫಾಯಿಲ್ ಪೇಪರ್ ಸುತ್ತಿ ಕೆಳಭಾಗವನ್ನು ಮಡಚಬಹುದು. – ಈ ಎಗ್ ರೋಲ್‌ಗೆ ಇಷ್ಟಪಟ್ಟರೆ, ತುರಿದ ಕ್ಯಾರೆಟ್ ಅಥವಾ ಕ್ಯಾಪ್ಸಿಕಂ ಅನ್ನು ಸಹ ಸೇರಿಸಿಕೊಳ್ಳಬಹುದು. ಇಷ್ಟು ಮಾಡಿದರೆ ಸಾಕು, ಬಿಸಿಬಿಸಿಯಾದ ಈ ಕೋಲ್ಕತ್ತಾ ಶೈಲಿಯ ಎಗ್ ರೋಲ್ ಈಗ ಸಿದ್ಧ. ಸಂಜೆ ಟೈಮ್‌ನಲ್ಲಂತೂ ಒಂದು ಕಪ್ ಚಹಾದ ಜೊತೆ ಇದರ ಸಂಯೋಜನೆ ಅದ್ಭುತವಾಗಿರುತ್ತದೆ. ಮನೆಯಲ್ಲಿ ಇದನ್ನು ಪ್ರಯತ್ನಿಸಿ ನಿಮ್ಮ ಕುಟುಂಬದ ಸದಸ್ಯರ ಮೆಚ್ಚುಗೆ ಪಡೆಯಿರಿ.

# ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ಗೌರವಾಧ್ಯಕ್ಷರಾಗಿ ಬಿ.ವೆಂಕಟ್ ರಾಮ್, ಉಪಾಧ್ಯಕ್ಷರಾಗಿ ಶ್ರೀಮತಿ ಎಸ್.ಭಾರತಿ ನೇಮಕ

• ಉದಯವಾಹಿನಿ, ಬೆಂಗಳೂರು





ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ಗೌರವಾಧ್ಯಕ್ಷರಾಗಿ ಬಿ.ವೆಂಕಟರಾಮ್ ರವರು ಮತ್ತು ಉಪಾಧ್ಯಕ್ಷರಾಗಿ ಶ್ರೀಮತಿ ಭಾರತಿರವರು ನೇಮಕಾತಿ ಮಾಡಿ ಅಧ್ಯಕ್ಷರಾದ ಎ.ಅಮೃತ್ ರಾಜ್ ಘೋಷಣೆ ಮಾಡಿದರು.

ಬಿ.ವೆಂಕಟರಾಮ್ ಮತ್ತು ಶ್ರೀಮತಿ ಎಸ್. ಭಾರತಿ ರವರು ರಾಜ್ಯ ಮಹಾನಗರ ಪಾಲಿಕೆ ನೌಕರರ ಹಿತಾಸಕ್ತಿ ಮತ್ತು ಹೋರಾಟ, ಸಂಘಟನೆಯಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ರಾಜ್ಯ ಎಲ್ಲ ಮಹಾನಗರ ಪಾಲಿಕೆ ಸಮಸ್ಯೆಗಳ ನಿವಾರಣೆಗಾಗಿ ಸಕ್ರಿಯವಾಗಿ ಕೆಲಸದಲ್ಲಿ ತೊಡಗಿಸಿಕೊಳ್ಳಬೇಕು ಈ ನಿಟ್ಟಿನಲ್ಲಿ ಇಬ್ಬರನ್ನು ನೇಮಕಾತಿ ಮಾಡಲಾಗಿದೆ. ಮೈಸೂರು ಮಹಾನಗರ ಪಾಲಿಕೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಬಿ.ವೆಂಕಟರಾಮ್ ರವರು ಈ. ಸಂಘದ ಸಂಸ್ಥಾಪಕರು ಅನುಭವಿರವರು ಸಂಘದ ಏಳಿಗೆಗಾಗಿ ಮತ್ತು ಸಂಘದ ಸಂಘಟನೆಗಾಗಿ ಗೌರವಾಧ್ಯಕ್ಷರಾಗಿ ನೇಮಿಸಲಾಗಿದೆ. ಮಹಿಳೆ ಪಾಲಿಕೆ ನೌಕರರ ಸಮಸ್ಯೆಗಳು, ಸಂಕಷ್ಟಗಳಿಗೆ ಸದಾ ಸ್ಪಂದಿಸುವ ಶ್ರೀಮತಿ ಭಾರತಿ ಎಸ್.ರವರು ಉಪಾಧ್ಯಕ್ಷರಾಗಿ ನೇಮಿಸಲಾಗಿದೆ. ರಾಜ್ಯ ಮಹಾನಗರ ಪಾಲಿಕೆ ನೌಕರರ ಹೋರಾಟ, ಸಂಘಟನೆ ಮತ್ತು ಸಮಸ್ಯೆಗಳ ನಿವಾರಣೆಗಾಗಿ ಎಲ್ಲರು ಜೊತೆಗೂಡಿ ಹೋರಾಟ ಮಾಡಬೇಕು ಎಂದು ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾಹಿತಿ ನೀಡಿದರು.

# ನಿಮ್ಮ ಚರ್ಮ ಕಾಂತಿಯುತವಾಗಬೇಕೆ?



ಚರ್ಮವು ಕಾಂತಿಯುತವಾಗಬೇಕಾದರೆ ಬರೀ ಹೊರಗಿನಿಂದ ಕ್ರೀಮ್ ಹಚ್ಚಿಕೊಂಡರೆ ಸಾಲದು, ದೇಹದ ಒಳಗಿನಿಂದಲೂ ನಿರ್ವಿಷಗೊಳಿಸುವುದು ಮುಖ್ಯ. ಅದಕ್ಕಾಗಿ ಉತ್ತಮ ಪಾನೀಯವನ್ನು ತಿಳಿಸಿದ್ದಾರೆ ಪೌಷ್ಟಿಕತಜ್ಞೆ.

**ದೇಹವನ್ನು ಒಳಗಿನಿಂದ ನಿರ್ವಿಷಗೊಳಿಸುವುದು ಮುಖ್ಯ :** ಸುಂದರವಾದ ಮತ್ತು ದೋಷರಹಿತ ಮುಖಕ್ಕೆ ಸರಿಯಾದ ಚರ್ಮದ ಆರೈಕೆಯ ಅಗತ್ಯವಿರುತ್ತದೆ. ಅದಕ್ಕಾಗಿ ದೇಹವನ್ನು ಒಳಗಿನಿಂದ ನಿರ್ವಿಷಗೊಳಿಸುವುದು ಬಹಳ ಮುಖ್ಯ. ದೇಹದಲ್ಲಿ ವಿಷಗಳು ಸಂಗ್ರಹವಾದಾಗ, ಅವುಗಳ ಪರಿಣಾಮಗಳು ನಮ್ಮ ಚರ್ಮದ ಮೇಲೆ ಗೋಚರಿಸುತ್ತವೆ. ನೀವು ದೋಷರಹಿತ ಹೊಳೆಯುವ ಮುಖವನ್ನು ಬಯಸಿದರೆ, ನೀವು ಈ ಭಾರತೀಯ ಪಾನೀಯವನ್ನು ಪ್ರಯತ್ನಿಸಬೇಕು. ಒಂದು ಅಡುಗೆಮನೆಯ ಪದಾರ್ಥವನ್ನು ನೀರಿನೊಂದಿಗೆ ಬೆರೆಸಿ ಕುಡಿಯುವುದರಿಂದ ಕೆಲವು ವಾರಗಳಲ್ಲಿ ನಿಮ್ಮ ಚರ್ಮದಲ್ಲಿ ವ್ಯತ್ಯಾಸವನ್ನು ಕಾಣಬಹುದು. ಎನ್ನುತ್ತಾರೆ ಆಹಾರ ತಜ್ಞೆ ಮತ್ತು ಪೌಷ್ಟಿಕತಜ್ಞೆ ರಾಧಿಕಾ ಗೋಯಲ್.

**ಲವಂಗ ನೀರಿನ ಸೇವನೆ:** ಕೆಲವು ವಾರಗಳ ಕಾಲ ಲವಂಗ ನೀರನ್ನು ಕುಡಿಯುವುದರಿಂದ ನಿಮ್ಮ ಚರ್ಮವು ಸುಧಾರಿಸುತ್ತದೆ ಎಂದು ತಜ್ಞರು ಹೇಳುತ್ತಾರೆ. ಲವಂಗ ನೀರು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ ಮತ್ತು ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡುತ್ತದೆ. ಲವಂಗ ನೀರು ದೇಹದಿಂದ ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ. ಇದು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಮತ್ತು ಮೊಡವೆಗಳನ್ನು ತಡೆಯುತ್ತದೆ.

**ಇದನ್ನು ತಯಾರಿಸುವುದು ಹೇಗೆ?**
**ಮೊದಲು, 1 ಕಪ್ ನೀರನ್ನು ಕುದಿಸಿ.**
**ಅದಕ್ಕೆ 2 ರಿಂದ 3 ಲವಂಗ ಸೇರಿಸಿ.**
**ಈಗ ಮುಚ್ಚಿ 5 ನಿಮಿಷಗಳ ಕಾಲ ನೆನೆಸಲು ಬಿಡಿ. ಮಲಗುವ ಮುನ್ನ ಅದನ್ನು ಕುಡಿಯಿರಿ. ನೀವು ಕೆಲವು ವಾರಗಳಲ್ಲಿ ಫಲಿತಾಂಶಗಳನ್ನು ನೋಡಬಹುದು. ಪ್ರತಿದಿನ ಲವಂಗ ನೀರನ್ನು ಕುಡಿಯುವುದರಿಂದ ಗ್ಲಾಸ್ ಸ್ಕಿನ್ ಜೊತೆಗೆ ಅನೇಕ ಪ್ರಯೋಜನಗಳನ್ನು ಪಡೆಯಬಹುದು.**

ನಮ್ಮ ಜೀರ್ಣಕ್ರಿಯೆ ಕಳಪೆಯಾಗಿದ್ದಾಗ ಮತ್ತು ನಮ್ಮ ಕರುಳಿನ ಆರೋಗ್ಯವು ಅಪಾಯದಲ್ಲಿದ್ದಾಗ, ಅದು ನಮ್ಮ ಮುಖದ ಮೇಲೆ ನೇರವಾಗಿ ಕಾಣಿಸುತ್ತದೆ. ಅಂತಹ ಸಂದರ್ಭಗಳಲ್ಲಿ, ಲವಂಗ ನೀರು ಸಹಾಯ ಮಾಡುತ್ತದೆ. ಲವಂಗವು ಉರಿಯೂತ ನಿವಾರಕ ಗುಣಗಳನ್ನು ಹೊಂದಿದೆ. ಅವು ಹಾರ್ಮೋನುಗಳ ಬಿರುಕುಗಳು ಮತ್ತು ಕೆಂಪು ಬಣ್ಣವನ್ನು ಕಡಿಮೆ ಮಾಡುತ್ತದೆ.


**ತಜ್ಞರ ಸಲಹೆ**

**ಲವಂಗ ನೀರು ಕುಡಿಯುವುದರ ಪ್ರಯೋಜನಗಳು:** ಲವಂಗ ನೀರು ರಕ್ತವನ್ನು ಶುದ್ಧೀಕರಿಸುತ್ತದೆ ಮತ್ತು ಅದನ್ನು ಸೇವಿಸುವುದರಿಂದ ಮುಖದ ಚರ್ಮವನ್ನು ಸುಧಾರಿಸುತ್ತದೆ ಅಕಾಲಿಕ ವಯಸ್ಸಾಗುವುದನ್ನು ತಡೆಯುತ್ತದೆ. ಲವಂಗದ ಬ್ಯಾಕ್ಟೀರಿಯಾ ವಿರೋಧಿ ಉರಿಯೂತ ನಿವಾರಕ ಗುಣಲಕ್ಷಣಗಳು ಮೊಡವೆ ಉಂಟುಮಾಡುವ ಬ್ಯಾಕ್ಟೀರಿಯಾವನ್ನು ಕಡಿಮೆ ಮಾಡುತ್ತದೆ ಮತ್ತು ಕಲೆಗಳನ್ನು ಹಗುರಗೊಳಿಸುತ್ತದೆ. ಲವಂಗದಲ್ಲಿರುವ ಉತ್ಕರ್ಷಣ ನಿರೋಧಕಗಳು ಫ್ರೀ ರಾಡಿಕಲ್‌ಗಳ ವಿರುದ್ಧ ಹೋರಾಡಲು ಮತ್ತು ಕಿರಿಕಿರಿಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.



# ಎಸ್‌ಎಸ್‌ಎಲ್‌ಸಿಯಲ್ಲಿ ಪ್ರಶ್ನೆ ಪತ್ರಿಕೆಗೆಸಿಗುತ್ತಾ ಆಯ್ಕೆ?

• ಉದಯವಾಹಿನಿ, ಬೆಂಗಳೂರು



ಎಸ್‌ಎಸ್‌ಎಲ್‌ಸಿ ಪಬ್ಲಿಕ್ ಪರೀಕ್ಷೆಯಲ್ಲಿ ಗಣಿತ ಪ್ರಶ್ನೆ ಪತ್ರಿಕೆ ಆಯ್ಕೆ ಮಾಡಿಕೊಳ್ಳುವ ಅವಕಾಶ ವಿದ್ಯಾರ್ಥಿಗಳಿಗೆ ಕೊಡಿ ಅಂತ ಶಿಕ್ಷಣ ಸಚಿವ ಮಧು ಬಂಗಾರಪ್ಪಗೆ ಖಾಸಗಿ ಶಿಕ್ಷಣ ಸಂಸ್ಥೆಗಳು ಮನವಿ ಮಾಡಿವೆ. ಎಲ್ಲಾ ವಿದ್ಯಾರ್ಥಿಗಳಿಗೆ ಉತ್ಕೃಷ್ಟವಾಗಿ ಗಣಿತ ಕಲಿಯಲು ಸಾಧ್ಯವಿಲ್ಲ. ಹೀಗಾಗಿ ಸಿಬಿಎಸ್‌ಇ ಮಾದರಿಯಲ್ಲಿ ಪ್ರಶ್ನೆ ಪತ್ರಿಕೆ ಆಯ್ಕೆ ಮಾಡಿಕೊಳ್ಳುವ ಅವಕಾಶ ವಿದ್ಯಾರ್ಥಿಗಳಿಗೆ ಕೊಡಬೇಕು ಎಂದು ಹೇಳಿವೆ.


**ಖಾಸಗಿ ಶಾಲೆಗಳ ಮನವಿ ಏನು?:** ಸಿಬಿಎಸ್‌ಇ ಮಾದರಿಯಲ್ಲಿ 2 ಹಂತದಲ್ಲಿ ಗಣಿತ ಪ್ರಶ್ನೆ ಪತ್ರಿಕೆ ಸಿದ್ದವಾಗಬೇಕು. ಉತ್ಕೃಷ್ಟ ಪ್ರಶ್ನೆ ಪತ್ರಿಕೆ ಮತ್ತು ಸಾಧಾರಣ ಪ್ರಶ್ನೆ ಪತ್ರಿಕೆ ಎರಡನ್ನು ಶಿಕ್ಷಣ ಇಲಾಖೆ ಸಿದ್ಧಪಡಿಸಬೇಕು. ಈ ಪ್ರಶ್ನೆ ಪತ್ರಿಕೆಯಲ್ಲಿ ಯಾವ ಪ್ರಶ್ನೆ ಪತ್ರಿಕೆ ಬೇಕು ಅಂತ ವಿದ್ಯಾರ್ಥಿಗಳೇ ಆಯ್ಕೆ ಮಾಡಿಕೊಳ್ಳಬೇಕು. ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡ ಪ್ರಶ್ನೆ ಪತ್ರಿಕೆಯನ್ನು ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಿಗೆ ಕೊಡಬೇಕು. ಇದರಿಂದ ಗಣಿತ ವಿಷಯದಲ್ಲಿ ಹಿಂದುಳಿಯುವ ವಿದ್ಯಾರ್ಥಿಗಳಿಗೂ ಅನುಕೂಲವಾಗುತ್ತದೆ.

# ಉಗುರುಗಳ ಮೇಲೆ ಕಪ್ಪು ಬಣ್ಣ ವಿದ್ದರೆ ಕ್ಯಾನ್ಸರ್ ಲಕ್ಷಣವೇ?

ಉಗುರುಗಳ ಮೇಲೆ ಇದಕ್ಕಿದಂತೆ ಗೆರೆ ಗುರುತುಗಳು ಅಥವಾ ಬಣ್ಣದಲ್ಲಿ ಬದಲಾವಣೆಗಳನ್ನು ಗಮನಿಸಿದರೆ, ಅವುಗಳನ್ನು ಹಗುರವಾಗಿ ಪರಿಗಣಿಸ ಬೇಡಿ ಅಥವಾ ನಿರ್ಲಕ್ಷ್ಯ ಮಾಡಲು ಹೋಗಬೇಡಿ. ಯಾಕೆಂದ್ರೆ ಉಗುರುಗಳ ಬಣ್ಣದಲ್ಲಿ ಬದಲಾವಣೆ ಕಾಣಿಸಿಕೊಂಡರೆ, ಆರೋಗ್ಯದಲ್ಲಿ ಏನೋ ಸಮಸ್ಯೆ ಆಗಿದೆ ಎಂಬುದನ್ನು ಮೊದಲಿಗೆ ಅರ್ಥ ಮಾಡಿಕೊಳ್ಳಬೇಕು. ನಮ್ಮಲ್ಲಿ ಬಹುತೇಕ ಜನರು ದೇಹದಲ್ಲಿ ಉಂಟಾಗುವ ಸಣ್ಣ ಪುಟ್ಟ ಬದಲಾವಣೆಗಳನ್ನು ಅಷ್ಟೊಂದು ಸೀರಿಯಸ್ ಆಗಿ ತೆಗೆದುಕೊಳ್ಳುವುದಕ್ಕೆ ಹೋಗುವುದಿಲ್ಲ. ಇವೆಲ್ಲಾ ಸಾಮಾನ್ಯ ಆರೋಗ್ಯ ಸಮಸ್ಯೆಗಳು ಎಂದು ನಿರ್ಲಕ್ಷಿಸುತ್ತಾರೆ! ಇದರಲ್ಲಿ ಉಗುರುಗಳ ಮೇಲಿನ ತೆಳುವಾದ ಕಪ್ಪು ಅಥವಾ ಕಂದು ರೇಖೆಗಳು ಅಂತಹ ಒಂದು ಲಕ್ಷಣವಾಗಿದೆ. ಹೌದು, ದೇಹದಲ್ಲಿ ಕಾಣಿಸಿಕೊಳ್ಳುವ ಕೆಲವೊಂದು ಬಗೆಯ ಸೂಕ್ಷ್ಮ ಲಕ್ಷಣಗಳು ಸ್ಪಷ್ಟವಾಗಿ ಕಣ್ಣಿಗೆ ಕಾಣಿಸಿದರೂ ಕೂಡ, ಅಥವಾ ಅನುಭವಕ್ಕೆ ಬಂದರೂ ಕೂಡ ಕೆಲವೊಬ್ಬರು ಈ ವಿಚಾರ ದಲ್ಲಿ ಮಾಡುವ ನಿರ್ಲಕ್ಷ್ಯತನ ಮುಂದೆ ಗಂಭೀರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುವ ಸಾಧ್ಯತೆ ಇರುತ್ತದೆ ಎನ್ನುವುದು ತಜ್ಞರ ಮಾತು.

**ಉಗುರುಗಳಲ್ಲಿ ಏನಾದರೂ ಬದಲಾವಣೆಗಳು ಕಾಣಿಸಿಕೊಂಡರೆ:** ಉಗುರುಗಳಲ್ಲಿ ಏನಾದರೂ ಬದಲಾವಣೆಗಳು ಕಾಣಿಸಿಕೊಂಡರೆ ಏನೋ ಗಂಭೀರ ಆರೋಗ್ಯ ಸಮಸ್ಯೆ ಆಗಿರಬಹುದು ಎನ್ನುವುದನ್ನು ಸೂಚಿಸುತ್ತದೆ, ಇಂತಹ ಸಂದರ್ಭದಲ್ಲಿ ಉಗುರಿನ ಬಣ್ಣದಲ್ಲಿ ಆಗುವ ಬದಲಾವಣೆಗಳನ್ನು ತಪ್ಪಿಯೂ ಕೂಡ ನಿರ್ಲಕ್ಷ್ಯ ಮಾಡಲು ಹೋಗಬಾರದು ಎನ್ನುತ್ತಾರೆ ಡಾ. ಸಾರಿಕಾ ಎನ್ ಹೊಳ್ಳ, ಕನ್ಸಲ್ಟೆಂಟ್ ಜನರಲ್ ಫಿಜಿಶಿಯನ್, ಕಿಂಡರ್ ಆಸ್ಪತ್ರೆ ಬೆಂಗಳೂರು. ಯಾಕೆ ಈ ವಿಚಾರ ಹೇಳುತ್ತಿದ್ದೇವೆ ಎಂದರೆ, ಇತ್ತೀಚೆಗೆ, ಒಬ್ಬ ಮಹಿಳೆ ಸಾಮಾಜಿಕ ಮಾಧ್ಯಮ ವೇದಿಕೆ ರೆಡ್ಡಿಟ್‌ನಲ್ಲಿ ತನ್ನ ಉಗುರುಗಳ ಫೋಟೋವನ್ನು ಹಂಚಿ ಕೊಂಡರು, ಜನರು ವೈದ್ಯರನ್ನು ಭೇಟಿ ಮಾಡಲು ಸಲಹೆ ನೀಡುವಂತೆ ಪ್ರೇರೇಪಿಸಿ ದರು. ಈ ಘಟನೆಯು ಉಗುರುಗಳ ಮೇಲೆ ಕಪ್ಪು ರೇಖೆಗಳು ಕಾಣಿಸಿಕೊಳ್ಳುವ ಬಗ್ಗೆ ಜಾಗೃತಿ ಮೂಡಿಸಿದೆ.

**ಉಗುರಿನಲ್ಲಿ ಕಾಣಿಸಿಕೊಳ್ಳುವ ಕಪ್ಪು ಅಥವಾ ಕಂದು ಬಣ್ಣದ ರೇಖೆಗಳು :** ಉಗುರಿನ ಪದರದ ಮೇಲೆ ಕಾಣಿಸಿಕೊಳ್ಳುವ ಕಪ್ಪು ಅಥವಾ ಕಂದು ಬಣ್ಣದ ನೇರ ರೇಖೆಗಳನ್ನು ವೈದ್ಯಕೀಯವಾಗಿ ಮೆಲನೋಮಗಳು ಎಂದು ಕರೆಯಲಾಗುತ್ತದೆ. ಈ ರೇಖೆಗಳು ತಿಳಿ ಬಣ್ಣದಿಂದ ಗಾಢವಾದ ಬಣ್ಣದ್ದಾಗಿರಬಹುದು ಮತ್ತು ಯಾವುದೇ ಉಗುರಿನ ಮೇಲೆ ಕಾಣಿಸಿಕೊಳ್ಳಬಹುದು, ಅದು ಕೈಗಳು ಅಥವಾ ಪಾದಗಳ ಮೇಲಾಗಿರಬಹುದು. ಕೆಲವೊಮ್ಮೆ ಅವು ಹುಟ್ಟಿನಿಂದಲೇ ಇರುತ್ತವೆ ಮತ್ತು ಕೆಲವೊಮ್ಮೆ ಅವು ವಯಸ್ಸಿನೊಂದಿಗೆ ಕಾಣಿಸಿಕೊಳ್ಳುತ್ತವೆ.



**ಚರ್ಮದ ಕ್ಯಾನ್ಸರ್‌ನ ಸಂಕೇತವಾಗಿರಬಹುದು**

ಕಪ್ಪು ರೇಖೆ ಇದ್ದಕ್ಕಿದ್ದಂತೆ ಕಾಣಿಸಿಕೊಂಡರೆ, ಕೇವಲ ಒಂದು ಉಗುರಿನ ಮೇಲೆ ಇದ್ದರೆ, ಅಥವಾ ಕ್ರಮೇಣ ಆಳವಾಗಿ ಮತ್ತು ಅಗಲವಾಗಿದ್ದರೆ, ಅದು ಕಳವಳಕ್ಕೆ ಕಾರಣವಾಗಬಹುದು. ಕೆಲವು ಸಂದರ್ಭಗಳಲ್ಲಿ, ಇದು ಉಗುರಿನ ಕೆಳಗೆ ಸಂಭವಿ ಸುವ ಮತ್ತು ಸಾಕಷ್ಟು ಅಪಾಯಕಾರಿ ಎಂದು ಪರಿಗಣಿಸಲಾದ ಸಬ್‌ಗುವಲ್ ಮೆಲನೋಮ ಎಂಬ ಚರ್ಮದ ಕ್ಯಾನ್ಸರ್‌ನ ಸಂಕೇತವಾಗಿರಬಹುದು.

**ಉಗುರುಗಳ ಮೇಲಿನ ಕಪ್ಪು ರೇಖೆಗಳು**

**ಸಾಮಾನ್ಯವಾಗಿ, ಉಗುರುಗಳ ಮೇಲಿನ ಕಪ್ಪು ರೇಖೆಗಳು ಗಂಭೀರ ಅನಾರೋಗ್ಯ ದಿಂದ ಉಂಟಾಗುವುದಿಲ್ಲ; ಅವು ಉಗುರಿನ ಗಾಯ, ಪೌಷ್ಟಿಕಾಂಶದ ಕೊರತೆ, ಕೆಲವು ಔಷಧಿಗಳ ಪರಿಣಾಮಗಳು ಮತ್ತು ಹಾರ್ಮೋನುಗಳ ಬದಲಾವಣೆಗಳಂತಹ ಹಲವಾರು ಸಾಮಾನ್ಯ ಕಾರಣಗಳಿಂದ ಉಂಟಾಗಬಹುದು. ಕಪ್ಪು ಚರ್ಮ ಹೊಂದಿರುವ ಜನರಲ್ಲಿ ಇದು ಹೆಚ್ಚಾಗಿ ಕಂಡುಬರುತ್ತದೆ. ಆದ್ದರಿಂದ, ಅನೇಕ ಜನರು ಇದನ್ನು ಗಂಭೀರವಾಗಿ ಪರಿಗಣಿಸುವುದಿಲ್ಲ.**

**ಈ ಲಕ್ಷಣಗಳನ್ನು ಕೂಡ ನೆಗ್ಲೆಕ್ಟ್ ಮಾಡಬೇಡಿ**

ಕಪ್ಪು ರೇಖೆ ಮಾತ್ರವಲ್ಲ, ಈ ಲಕ್ಷಣಗಳು ಗಂಭೀರ ಅನಾರೋಗ್ಯವನ್ನು ಸಹ ಸೂಚಿಸಬಹುದು: ಮುರಿದ ಅಥವಾ ಅಸಾಮಾನ್ಯ ಆಕಾರದ ಉಗುರು, ಉಗುರಿನ ಸುತ್ತಲೂ ಊತ ಅಥವಾ ನೋವು, ಬೇರಿನಿಂದ ತೆಗೆದ ಉಗುರು, ಗಡ್ಡೆ, ಗಾಯ ಅಥವಾ ಉಗುರಿನ ಕೆಳಗೆ ರಕ್ತಸ್ರಾವ, ಈ ಕೆಳಗಿನ ಯಾವುದೇ ಲಕ್ಷಣಗಳನ್ನು ನೀವು ಗಮನಿಸಿದರೆ ನೀವು ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು.

**ಈ ಬಗ್ಗೆ ತಜ್ಞರು ಹೇಳುವುದೇನು? :** ವೈದ್ಯರು ಸಾಮಾನ್ಯವಾಗಿ ಇಂತಹ ಸಂದರ್ಭಗಳಲ್ಲಿ ಬಯಾಪ್ಸಿಯನ್ನು ಶಿಫಾರಸು ಮಾಡುತ್ತಾರೆ. ಏಕೆಂದರೆ ಕೇವಲ ಸರಳ ನೋಟದಿಂದ ಇದು ಸೌಮ್ಯ ಸ್ಥಿತಿಯೋ ಅಥವಾ ಕ್ಯಾನ್ಸರ್‌ನೋ ಎಂದು ನಿರ್ಧರಿಸಲು ಸಾಧ್ಯವಿಲ್ಲ. ಎರಡು ಉಗುರುಗಳಲ್ಲಿ ಏಕಕಾಲದಲ್ಲಿ ಕ್ಯಾನ್ಸರ್ ಬರುವುದು ಅಪರೂಪ ವಾದರೂ, ಪರೀಕ್ಷೆಗೆ ಒಳಗಾಗುವುದು ಇನ್ನೂ ಸುರಕ್ಷಿತ ಎಂದು ಅನೇಕ ತಜ್ಞರು ಹೇಳುತ್ತಾರೆ. ಆರಂಭಿಕ ಪತ್ತೆ ಜೀವಗಳನ್ನು ಉಳಿಸಬಹುದು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಪ್ರೀತಿಯ ಅನುಪಸ್ಥಿತಿಯ ಭಾವನೆ ಬರಬಹುದು. ಜಂಟಿ ಯೋಜನೆಗಳು ಮತ್ತು ಪಾಲುದಾರಿಕೆಗಳಿಂದ ದೂರವಿರಿ.

**ವೃಷಭ** ಈಗ ತಾನೇ ಪರಿಚಯವಾದವರ ಜೊತೆ ವೈಯಕ್ತಿಕ ವಿಷಯಗಳನ್ನು ಹಂಚಿಕೊಳ್ಳಬೇಡಿ. ಸಂಗಾತಿಯ ಅನುಪಸ್ಥಿತಿ ಕಾಡುವ ಸಾಧ್ಯತೆಯಿದೆ. ಪ್ರಮುಖ ಜನರೊಡನೆ ಮಾತನಾಡುವಾಗ ಕಣ್ಣುಗಳನ್ನು ತೆರೆದಿಡಿ.

**ಮಿಥುನ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಕರ್ಕಾಟಕ** ನಿಮ್ಮ ನಿರ್ಲಕ್ಷ್ಯತನದ ಮತ್ತು ಊಹಿಸಲಾಗದ ವರ್ತನೆಯಿಂದ ನಿಮ್ಮ ಜೊತೆಗಿರುವ ಯಾರಾದರೂ ಬೇಸರಗೊಳ್ಳಬಹುದು. ಪ್ರೇಮ ವೈಫಲ್ಯದ ನೋವಿಗೆ ಇವತ್ತು ನಿದ್ರಿಸಲು ಸಾಧ್ಯವಾಗುವುದಿಲ್ಲ.

**ಸಿಂಹ** ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ.

**ಕನ್ಯಾ** ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ.

**ತುಲಾ** ಧೂಮಪಾನ ತ್ಯಜಿಸುವುದು ನೀವು ದೈಹಿಕವಾಗಿ ಆರೋಗ್ಯವಾಗಿ ಉಳಿಯಲು ಸಹಾಯ ಮಾಡುತ್ತದೆ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ.

**ವೃಶ್ಚಿಕ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ತಾತ್ಕಾಲಿಕ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ.

**ಧನಸ್ಸು** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಮಕರ** ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಪ್ರೀತಿ ಮಿತಿಯಿಲ್ಲದ್ದಾಗಿದೆ, ಅಪಾರವಾಗಿದೆ; ನೀವು ಈ ಮುಂಚೆ ಈ ವಿಷಯಗಳನ್ನು ಕೇಳಿರಬೇಕು.

**ಕುಂಭ** ಕಣ್ಣುಗಳು ಎಂದಿಗೂ ಸುಳ್ಳು ಹೇಳುವುದಿಲ್ಲ, ಮತ್ತು ನಿಮ್ಮ ಸಂಗಾತಿಯ ಕಣ್ಣುಗಳು ಇಂದು ನಿಮಗೆ ಏನೋ ವಿಶೇಷವಾದದ್ದನ್ನು ಹೇಳುತ್ತವೆ. ಹೊಸ ಉದ್ಯಮಗಳು ಆಕರ್ಷಕವಾಗಿರುತ್ತವೆ.

**ಮೀನ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ.

---

● ವೇಮನರು ವಿದೇಶಿ ಸಂಶೋಧಕರಿಂದ ಅತೀ ಹೆಚ್ಚು ಸಂಶೋಧನೆಗೆ ಒಳಪಟ್ಟ ವ್ಯಕ್ತಿ

# ಅನ್ಯಾಯ ಖಂಡಿಸಲು ನಿಷ್ಠುರವಾದಿಯಾದ ವೇಮನ: ಎಸ್.ಬಿ.ಭೀಮಾರೆಡ್ಡಿ

• ಉದಯವಾಹಿನಿ ಚಿತ್ರದುರ್ಗ

ಸಮಾಜದಲ್ಲಿನ ಲೋಪದೋಷ, ಅನ್ಯಾಯ, ಅನೀತಿಯನ್ನು ಯಾವುದೇ ಮುಲಾಜಿಲ್ಲದೇ ನೇರವಾಗಿ ಖಂಡಿಸಿದ ನಿಷ್ಠುರವಾದಿ ಕವಿ ವೇಮನ ಎಂದು ಚಳ್ಳಕೆರೆ ತಾಲ್ಲೂಕು ಬೇಡರೆಡ್ಡಿಹಳ್ಳಿಯ ಸಾಹಿತಿ ಎಸ್.ಬಿ.ಭೀಮಾರೆಡ್ಡಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಮಹಾಯೋಗಿ ವೇಮನ ಜಯಂತಿ ಆಚರಣೆ ಸಮಾರಂಭದಲ್ಲಿ ವೇಮನರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಸಾಮಾಜಿಕ ಸಮಾನತೆ, ನೈತಿಕ ಮೌಲ್ಯಗಳ ಬಗ್ಗೆ ಜನಸಾಮಾನ್ಯರ ಭಾಷೆಯಲ್ಲಿ ಸರಳ ಮತ್ತು ಶಕ್ತಿಯುತವಾದ ವಚನಗಳ ಮೂಲಕ ಜಾತಿ ಪದ್ಧತಿ, ಮೂಢನಂಬಿಕೆಗಳನ್ನು ತಮ್ಮ ಪದ್ಯಗಳ ಮೂಲಕ ತೀವ್ರವಾಗಿ ಖಂಡಿಸಿದ್ದಾರೆ ಎಂದು ತಿಳಿಸಿದರು.

ದಾರ್ಶನಿಕರಲ್ಲಿ ವಿಶೇಷವಾಗಿ ವೇಮನರು ವಿದೇಶಿ ಸಂಶೋಧಕರಿಂದ ಅತೀ ಹೆಚ್ಚು ಸಂಶೋಧನೆಗೆ ಒಳಪಟ್ಟ ವ್ಯಕ್ತಿ. ವಿದೇಶ ಸಂಶೋಧಕ ಸಿ.ಪಿ.ಬ್ರೌನ್ ಅವರು ವೇಮನರ ವಚನಗಳನ್ನು ಸಂಗ್ರಹ ಮಾಡಿದ ಮೇಲೆ, ಅದರಲ್ಲಿರುವ ವಿಷಯ, ತಿರುಳನ್ನು ಬೇರೆಯವರಿಂದ ಕೇಳಿ ತಿಳಿದು, ಆಶ್ಚರ್ಯಚಕಿತರಾಗುತ್ತಾರೆ. ಜನಸಾಮಾನ್ಯರ ಭಾಷೆಯಲ್ಲಿ ಹೆಚ್ಚಿನ ವ್ಯಾಕರಣ ಬಳಸದೇ, ಸರಳ ಭಾಷೆಯಲ್ಲಿಯೇ ವಿಶೇಷ


ಉದಯವಾಹಿನಿ ಚಿತ್ರ

ಜ್ಞಾನ, ವಿಶೇಷ ತತ್ವದ ಮಾತುಗಳನ್ನು ಹೇಳಿದ ವ್ಯಕ್ತಿಯನ್ನು ಸಂಪೂರ್ಣವಾಗಿ ಅರಿತರೆ ಸಂಶೋಧನೆಗೆ ಮೌಲ್ಯ ಬರಲಿದೆ ಎಂಬ ಕಾರಣದಿಂದ ವೇಮನ ತಿಳಿಯುವ ಉದ್ದೇಶದಿಂದ ತೆಲುಗು ಭಾಷೆಯನ್ನೂ ಕಲಿತು ಸುಮಾರು 1167 ವಚನಗನ್ನು ಸಂಗ್ರಹ ಮಾಡಿದ್ದಾರೆ ಎಂದು ಹೇಳಿದರು.

ಹರಿಹರ ತಾಲ್ಲೂಕು ಹೊಸಹಳ್ಳಿಯ ರೆಡ್ಡಿ ಗುರುಪೀಠದ ವೇಮನಾನಂದ ಸ್ವಾಮಿಗಳು ಮಾತನಾಡಿ, ವೇಮನ ಚರಿತ್ರೆ ನಮಗೆ ನೆಪಮಾತ್ರ. ಅವರ ಸಾಹಿತ್ಯ ಬೋಧನೆಗಳು ನಮ್ಮ ದಾರಿಗೆ ಬೆಳಕು ಚೆಲ್ಲಲಿವೆ. ಪ್ರಜಾಕವಿ ವೇಮನರ ಸಾಹಿತ್ಯ ಮುಂದಿಟ್ಟುಕೊಂಡು ನಾವು ನಮ್ಮ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ನಾವೆಲ್ಲರೂ ಸಂತೃಪ್ತಿಯಿಂದ ಬದುಕುಬೇಕು ಎಂಬುದೇ ಮಹನೀಯರ ಜಯಂತಿಗಳ ಆಶಯ. ವೇಮನರು ತಮ್ಮ ಬೋಧನೆಗಳನ್ನು ಜನರಾಡುವ ಭಾಷೆಯಲ್ಲಿ ಸರಳವಾಗಿ ಬರೆದಿರುವುದು ಅವರ ವಿಶೇಷ. ಜನರಿಗೆ ಗೊತ್ತಿರುವ ಉಪಮೆ, ಪ್ರತಿಮೆಗಳ ಮೂಲಕ ತಿಳಿಸಿದ್ದಾರೆ. ಇದು ಹೆಚ್ಚಿನ ಜನರಿಗೆ ತಲುಪಲು ಸಾಧ್ಯವಾಯಿತು ಅಭಿಪ್ರಾಯಪಟ್ಟರು.

ಎಸ್.ಆರ್.ಪಾಟೀಲರು ವೇಮನ ಸುಮಾರು 5000 ವಚನಗಳನ್ನು ಸಂಗ್ರಹಿಸಿ, ತೆಲುಗಿನಿಂದ ಕನ್ನಡಕ್ಕೆ ಭಾಷಾಂತರಿಸಿ, ಅವುಗಳಿಗೆ ಟಿಪ್ಪಣಿ, ವಿಮರ್ಶೆ ನೀಡಿ, ವೇಮನ ಸಾಹಿತ್ಯ ಕನ್ನಡಿಗರಿಗೆ ದೊರೆಯುವಲ್ಲಿ ಅಪಾರವಾದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದ ಅವರು, ವೇಮನ ಸಾಹಿತ್ಯವನ್ನು ಜನಪ್ರಿಯಗೊಳಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಬಿ.ಎಂ.ಗೋವಿಂದರಾಜ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ ಗುರುನಾಥ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಜಿಲ್ಲಾ ಪಂಚಾಯಿತಿ ಲೆಕ್ಕಪತ್ರ ಶಾಖೆಯ ಸಹಾಯಕ ನಿರ್ದೇಶಕ ದಾದಾಪೀರ್ ಸೇರಿದಂತೆ ರೆಡ್ಡಿ ಸಮಾಜದ ಮುಖಂಡರು ಇದ್ದರು. ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ನಿರೂಪಿಸಿದರು. ಚಿತ್ರದುರ್ಗದ ಉಮೇಶ್ ಪತ್ತಾರ ತಂಡದವರು ಗೀತಗಾಯನ ನಡೆಸಿಕೊಟ್ಟರು.

**ವೇಮನ ಜಯಂತಿ ಆಚರಣೆ**

**ವೇಮನರು ತಮ್ಮ ಎಲ್ಲಾ ವಚನಗಳಲ್ಲಿ ಆತ್ಮಚಿಂತನೆ ಕುರಿತು ಹೆಚ್ಚು ತಿಳಿಸಿದ್ದಾರೆ. ಆತ್ಮಚಿಂತನೆಯಿಂದ ವ್ಯಕ್ತಿಯಲ್ಲಿ ನೈತಿಕತೆ ಬರಲಿದೆ. ಈ ನೈತಿಕತೆ ಬಳಸಿಕೊಂಡು ನಾವು ಮುಕ್ತಿ ಮಾರ್ಗದ ಕಡೆ ಸಾಗಬೇಕು. ಅಲ್ಲಿ ಆತ್ಮ ಚಿಂತನೆ, ನೈತಿಕತೆ, ಮುಕ್ತಿ ಮಾರ್ಗಕ್ಕೆ ಸಂಬಂಧಪಟ್ಟ ಬೇರೆ ಬೇರೆ ರೀತಿಯಾದ ವಚನಗಳನ್ನು ರಚಿಸಿರುವುದನ್ನು ನಾವು ಕಾಣಬಹುದಾಗಿದೆ. ವೇಮನರ ಪದ್ಯಗಳು ಕನ್ನಡದ ಕಂದಪ್ಯದ ಛಂದಸ್ಸಿನ ಪ್ರಕಾರಕ್ಕೆ ಸೇರಿದ್ದು, ಮೊದಲ ಸಾಲಿನಲ್ಲಿ ಸತ್ಯ, ಎರಡನೇ ಸಾಲಿನಲ್ಲಿ ವಾಸ್ತವ ಸ್ಥಿತಿ ಹಾಗೂ ಮೂರನೇ ಸಾಲಿನಲ್ಲಿ ವಾಸ್ತವ ಸ್ಥಿತಿಯ ಕ್ರೂರತೆ ಖಂಡಿಸುತ್ತದೆ ಎಂದು ತಿಳಿಸಿದ ಅವರು, ಸಮುದಾಯವು ಸಂಕುಚಿತ ಮನೋಭಾವ ಬಿಡಬೇಕು. ಜಗತ್ತು ಸಂಕೀರ್ಣವಾಗಿದ್ದು, ಈ ಸಂಕೀರ್ಣವಾದ ಜಗತ್ತಿನಲ್ಲಿ ನಾವುಗಳು ವಿಶೇಷ ಜ್ಞಾನ ಪಡೆದು ನಮ್ಮ ಸಮಾಜಕ್ಕೆ ಕೊಡುಗೆ ನೀಡಬೇಕು. -ಎಸ್.ಬಿ.ಭೀಮಾರೆಡ್ಡಿ, ಸಾಹಿತಿ**

---

# ಒಡ್ಡು ನಿರ್ಮಾಣ ವಿಳಂಬ: ಜಲಕ್ಷಾಮ ಭೀತಿ

• ಉದಯವಾಹಿನಿ ಶಿರಸಿ

ನಗರವು ಮಾರಿಕಾಂಬಾ ದೇವಿಯ ಜಾತ್ರಾ ಮಹೋತ್ಸವಕ್ಕೆ ಸಜ್ಜಾಗುತ್ತಿರುವ ಬೆನ್ನಲ್ಲೇ, ನಗರಸಭೆಯ ಆಮೆಗತಿಯ ಸಿದ್ಧತೆಗಳು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿವೆ.

ವಿಶೇಷವಾಗಿ ಜಾತ್ರೆಯ ಸಮಯದಲ್ಲಿ ಲಕ್ಷಾಂತರ ಭಕ್ತರಿಗೆ ನೀರುಣಿಸುವಲ್ಲಿ ಪ್ರಮುಖ ಪಾತ್ರವಹಿಸುವ ಕೆಂಗ್ರೆ ಹಾಗೂ ಮಾರಿಗದ್ದೆ ನದಿಗಳಲ್ಲಿ ತಾತ್ಕಾಲಿಕ ಒಡ್ಡುಗಳ ನಿರ್ಮಾಣ ಆಗದಿರುವುದು ಆತಂಕಕ್ಕೆ ಕಾರಣವಾಗಿದೆ.

ನಗರದ ಜೀವನಾಡಿಯಾದ ಕೆಂಗ್ರೆ ಹಳ್ಳ ಮತ್ತು ಮಾರಿಗದ್ದೆ ಜಾಕ್‌ವೆಲ್‌ಗಳ ಬಳಿ ಪ್ರತಿ ವರ್ಷ ಈ ವೇಳೆಗೆ ತಾತ್ಕಾಲಿಕ ಒಡ್ಡುಗಳನ್ನು ನಿರ್ಮಿಸಿ ನೀರು ಸಂಗ್ರಹಿಸಲಾಗುತ್ತಿತ್ತು. ಆದರೆ, ಈ ಬಾರಿ ಫೆ.24 ರಿಂದ ಜಾತ್ರೆ ಆರಂಭವಾಗುತ್ತಿದ್ದರೂ, ನಗರಸಭೆಯು ಅತ್ತ ಗಮನಹರಿಸಿಲ್ಲ. ಜಾತ್ರೆ ಸಮಯದಲ್ಲಿ ನೀರಿನ ಬೇಡಿಕೆ ಹೆಚ್ಚಿರುತ್ತದೆ ಎಂಬುದು ಗೊತ್ತಿದ್ದೂ ಯಾವುದೇ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುತ್ತಿಲ್ಲ ಎಂಬುದು ಜನರ ಆರೋಪ.

ಒಡ್ಡು ನಿರ್ಮಾಣ ಕಾಮಗಾರಿ ಇನ್ನೂ ಆರಂಭವಾಗದಿರುವುದು ಮುಂಬರುವ ದಿನಗಳಲ್ಲಿ ತೀವ್ರ ಜಲಕ್ಷಾಮದ ಮುನ್ಸೂಚನೆ ನೀಡುತ್ತಿದೆ. ನೀರಿನ ಸಮಸ್ಯೆಯು ಕೇವಲ ಕುಡಿಯುವ ನೀರಿಗೆ ಸೀಮಿತವಾಗಿಲ್ಲ, ಇದು ಜಾತ್ರೆಯ ನೈರ್ಮಲ್ಯ ಮತ್ತು ಆರೋಗ್ಯದ ಮೇಲೂ ಗಂಭೀರ ಪರಿಣಾಮ ಬೀರಲಿದೆ. ಹನಿ ನೀರಿಗೂ ಪರದಾಡುವ ಸ್ಥಿತಿ ನಿರ್ಮಾಣವಾದರೆ, ಹೋಟೆಲ್‌ಗಳು, ವಸತಿ ನಿಲಯಗಳು ಮತ್ತು ಸಾರ್ವಜನಿಕ ಶೌಚಾಲಯಗಳ ನಿರ್ವಹಣೆ ಅಸಾಧ್ಯವಾಗಲಿದೆ. ಹೀಗಾಗಿ


ಉದಯವಾಹಿನಿ ಚಿತ್ರ

ತಕ್ಷಣ ಒಡ್ಡು ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡು, ಲಭ್ಯವಿರುವ ನೀರನ್ನು ಪೋಲಾಗದಂತೆ ಸಂಗ್ರಹಿಸಬೇಕಿದೆ' ಎನ್ನುತ್ತಾರೆ ನಗರ ನಿವಾಸಿ ದಿನಕರ ಗೌಡ.

ಕಳೆದ ವರ್ಷಗಳ ಅನುಭವವನ್ನು ಗಮನಿಸಿದರೆ, ಒಡ್ಡು ನಿರ್ಮಿಸಿದ ನಂತರವೂ ನಗರದಲ್ಲಿ ನೀರಿನ ಹಂಚಿಕೆಯ ವಿತರಣೆಯಲ್ಲಿ ಭಾರಿ ವ್ಯತ್ಯಯವಾಗುತ್ತಿತ್ತು. ಜನರಿಗೆ ದಿನದ 24 ಗಂಟೆ ನೀರು ಬಿಡಿ, ವಾರಕ್ಕೆ ಕೇವಲ ಮೂರು ದಿನ ಮಾತ್ರ ನೀರು ಪೂರೈಸುವ ಅನಿವಾರ್ಯತೆ ಎದುರಾಗಿತ್ತು. ಒಂದೆಡೆ ನೈಸರ್ಗಿಕವಾಗಿ ನೀರಿನ ಹರಿವು ಕುಂಠಿತವಾಗುತ್ತಿದ್ದರೆ, ಇನ್ನೊಂದೆಡೆ ಒಡ್ಡು ನಿರ್ಮಾಣ ಆಗದ ಕಾರಣ ನೀರು ಸಂಗ್ರಹಣಾ ವ್ಯವಸ್ಥೆಯೂ ಕುಸಿದುಬಿದ್ದಿದೆ. 70 ಸಾವಿರ ಸ್ಥಳೀಯರ ಜತೆಗೆ ಜಾತ್ರೆಯ ಸಂದರ್ಭದಲ್ಲಿ ಸೇರುವ ಲಕ್ಷಾಂತರ ಭಕ್ತಾದಿಗಳ ನೀರಿನ ಬೇಡಿಕೆಯನ್ನು ನಗರಸಭೆ ಹೇಗೆ ನಿಭಾಯಿಸಲಿದೆ ಎಂಬುದು ಪ್ರಶ್ನೆಯಾಗಿದೆ' ಎನ್ನುತ್ತಾರೆ ಶಂಕರ ನಾಯ್ಕ.

---

# ಕಳೆದ ವರ್ಷಕ್ಕಿಂತ ಸಾವಿರ ಹೆಕ್ಟೇರ್‌ನಲ್ಲಿ ಹಿಂಗಾರು ಬೆಳೆ ಕುಸಿತ

• ಉದಯವಾಹಿನಿ ಚಿಕ್ಕಮಗಳೂರು

ಜಿಲ್ಲೆಯಲ್ಲಿ ಹಿಂಗಾರು ಬೆಳೆಗಳ ಬಿತ್ತನೆ ಪೂರ್ಣಗೊಂಡಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಒಂದು ಸಾವಿರ ಹೆಕ್ಟೇರ್‌ನಲ್ಲಿ ಬತ್ತನೆ ಕಡಿಮೆಯಾಗಿದ್ದು, ಮೆಕ್ಕೆ ಜೋಳ ಬಿತ್ತನೆಯೇ ಆಗಿಲ್ಲ.

ಚಿಕ್ಕಮಗಳೂರು, ಕಡೂರು, ತರೀಕೆರೆ ಮತ್ತು ಅಜ್ಜಂಪುರದಲ್ಲಿ ಮುಂಗಾರು ಮತ್ತು ಹಿಂಗಾರು ಬಿತ್ತನೆಯಾಗುತ್ತದೆ. ಉಳಿದ ಮಲೆನಾಡಿನ ತಾಲ್ಲೂಕುಗಳಲ್ಲಿ ಪ್ಲಾಂಟೇಷನ್ ಬೆಳೆಗಳು ಪ್ರಮುಖವಾಗಿವೆ. ಮುಂಗಾರಿನಲ್ಲಿ ಉತ್ತಮವಾಗಿ ಮಳೆಯಾಗಿದ್ದರಿಂದ ಬಿತ್ತನೆ ಕಾರ್ಯ ಕೂಡ ಚುರುಕಾಗಿತ್ತು. ಹಿಂಗಾರಿನಲ್ಲೂ ಉತ್ತಮ ಮಳೆಯಾಗಿದೆ. ಆದರೆ, ಬಿತ್ತನೆ ಪ್ರಮಾಣ ಕಡಿಮೆಯಾಗಿದೆ. ನಿರಂತರವಾಗಿ ಮಳೆ ಸುರಿದಿದ್ದರಿಂದ ಬಿತ್ತನೆ ಕಡಿಮೆಯಾಗಿರಬಹುದು ಎಂದು ಅಂದಾಜಿಸಲಾಗಿದೆ.

ಹಿಂಗಾರಿನಲ್ಲಿ ಹಿಂಗಾರಿ ಜೋಳ, ಮುಸುಕಿನ ಜೋಳ (ಮೆಕ್ಕೆಜೋಳ), ಹುರುಳಿ, ಕಡಲೆ, ಅಲಸಂದೆ ಬಿತ್ತನೆ ಮಾಡಲಾಗುತ್ತದೆ. ಅದರಲ್ಲೂ ಪ್ರಮುಖವಾಗಿ ಕಡಲೆ ಬೆಳೆಯನ್ನು ಹೆಚ್ಚಿನದಾಗಿ ಬೆಳೆಯಲಾಗುತ್ತಿದೆ. ಹಿಂಗಾರಿ ಜೋಳ ವಾರ್ಷಿಕ ಗುರಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಬಿತ್ತನೆಯಾಗಿದೆ. 4,100 ಹೆಕ್ಟೇರ್‌ನಲ್ಲಿ ಬಿತ್ತನೆಯಾಗುವ ಗುರಿ ಹೊಂದಲಾಗಿತ್ತು. 4,622 ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದೆ. ಉಳಿದ ಬೆಳೆಗಳು ವಾರ್ಷಿಕ ಗುರಿಯನ್ನು ಮುಟ್ಟಿಲ್ಲ. ಮೆಕ್ಕೆಜೋಳ 250 ಹೆಕ್ಟೇರ್‌ನಲ್ಲಿ ಬಿತ್ತನೆಯಾಗುವ ಗುರಿ ಹೊಂದಲಾಗಿತ್ತು. ಆದರೆ ಒಂದೇ ಒಂದು ಹೆಕ್ಟೇರ್‌ನಲ್ಲೂ ಬಿತ್ತನೆಯಾಗಿಲ್ಲ ಎಂದು ಕೃಷಿ ಇಲಾಖೆ ಅಂಕಿ ಅಂಶಗಳು ಹೇಳುತ್ತವೆ. ಮೆಕ್ಕೆಜೋಳ ಮುಂಗಾರಿನಲ್ಲಿ ಬೆಳೆದ ರೈತರು ಬೆಲೆ ಕುಸಿತದಿಂದ ತೊಂದರೆ ಅನುಭವಿಸಿದರು.


ಉದಯವಾಹಿನಿ ಚಿತ್ರ

ಹಾಸನದ ಖರೀದಿ ಕೇಂದ್ರಕ್ಕೆ ಒಯ್ದು ವಾಪಸ್ ತಂದು ಕಡಿಮೆ ಬೆಲೆಗೆ ಮಾರಾಟ ಮಾಡಬೇಕಾಯಿತು. ಇದು ಕೂಡ ರೈತರಲ್ಲಿ ಬೇಸರ ತರಿಸಿದೆ. ಇದರಿಂದ ಹಿಂಗಾರಿನಲ್ಲಿ ಬಿತ್ತನೆಯನ್ನೇ ಮಾಡಿಲ್ಲ ಎಂದು ರೈತರು ಹೇಳುತ್ತಾರೆ. ತಾಲ್ಲೂಕಿನಲ್ಲಿ ಜೋಳ ಕಡಲೆ ರಾಗಿ ಪ್ರಮುಖ ಹಿಂಗಾರು ಬೆಳೆಯಾಗಿ ಬಿತ್ತನೆಯಾಗಿವೆ. ಸುಮಾರು 3 ಸಾವಿರ ಹೆಕ್ಟೇರ್‌ನಲ್ಲಿ ಕಡಲೆ ಬಿತ್ತನೆಯಾಗಿದೆ. ಬೆಳೆಯಲ್ಲಿ ಸೊರಗು ಮತ್ತು ಕಾಯಿ ಕೊರಕ ರೋಗ ಬಾಧೆ ಕಾಣಿಸಿಕೊಂಡಿದೆ. ಅಲ್ಲಲ್ಲಿ ಗಿಡಗಳು ಒಣಗಿ ಸಾಯುತ್ತಿವೆ. ಇದರಿಂದಾಗಿ ಇಳುವರಿ ಪ್ರಮಾಣ ತಗ್ಗುವ ಆತಂಕ ಎದುರಾಗಿದೆ. ಎಕರೆಗೆ 10ರಿಂದ 12 ಕ್ವಿಂಟಲ್ ಬದಲಿಗೆ 5ರಿಂದ 6 ಕ್ವಿಂಟಲ್‌ಗೆ ಇಳುವರಿ ಬರುವ ನಿರೀಕ್ಷೆ ಇದೆ. ಜೋಳ ಸುಮಾರು 2500 ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದೆ.

ಕಳೆದ ವಾರ ಸುರಿದ ಮಳೆಗೆ ಹೆಟ್ಟೂರು ಕಾಟಿಗನರೆ ನಾರಣಾಪುರ ಹರಿಯನಹಳ್ಳಿ ಭಾಗದಲ್ಲಿ ಜೋಳ ನೆಲಕ್ಕುರುಳಿದೆ. ಹಿಂಗಾರಿನಲ್ಲಿ ಈಗ ರಾಗಿ ಬೆಳೆಯತ್ತ ರೈತರು ಹೆಚ್ಚಿನ ಪ್ರಮಾಣದಲ್ಲಿ ಮುಖ ಮಾಡಿದ್ದಾರೆ. ಬೆಂಬಲ ಬೆಲೆ ರೂ.4886 ಇರುವುದರಿಂದ ಮತ್ತು ಮೇವಿಗೆ ಹೆಚ್ಚಿನ ಬೇಡಿಕೆ ಇರುವುದರಿಂದ ರೈತರು ಆಸಕ್ತಿ ವಹಿಸಿದ್ದಾರೆ.

---

# ನುಡಿದಂತೆ ನಡೆದವರು ದಾರ್ಶನಿಕರಾಗಲು ಸಾಧ್ಯ: ಎಚ್. ಎಸ್ ಗುರಡ್ಡಿ

• ಉದಯವಾಹಿನಿ ಬಸವನಬಾಗೇವಾಡಿ

ನುಡಿದಂತೆ ನಡೆದವರು ದಾರ್ಶನಿಕರಾಗಲು ಸಾಧ್ಯ ಎಂದು ತಾಲ್ಲೂಕಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ನ್ಯಾ. ಎಚ್. ಎಸ್. ಗುರಡ್ಡಿ ಹೇಳಿದರು. ಅವರು ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಸೋಮವಾರ ಮಹಾಯೋಗಿ ವೇಮನ ಜಯಂತಿ ಆಚರಣೆಯಲ್ಲಿ ಭಾಗವಹಿಸಿ ಮಾತನಾಡಿ, ಲೌಕಿಕದಲ್ಲಿ ಇದ್ದುಕೊಂಡು ಆಧ್ಯಾತ್ಮಿಕ ಲೋಕದಲ್ಲಿ ಆಗಿ ಹೋದ ಶರಣರು ಅನೇಕರಿದ್ದಾರೆ. ಜಿಲ್ಲೆಯಲ್ಲಿಯೇ ಮರೆಯಾದರೂ ನಮ್ಮ ಮಧ್ಯ ಅಜರಾಮರಾಗಿ ಉಳಿದವರು ನಡೆದಾಡುವ ದೇವರು ಸಿದ್ದೇಶ್ವರ ಪೂಜ್ಯರು ಎಂದು ಶ್ರೀಗಳನ್ನು ಸ್ಮರಿಸಿಕೊಂಡರು.

ತಹಶೀಲ್ದಾರ್ ವೈ. ಎಸ್. ಸೋಮನಕಟ್ಟಿ ಮಾತನಾಡಿ, ಮಹಾಯೋಗಿ ವೇಮನರು ಕನ್ನಡದ ಸರ್ವಜ್ಞ ಹಾಗೂ ತಮಿಳಿನ ತಿರುವಳ್ಳುವರ್ ಅವರಂತೆ ವಚನಗಳನ್ನು ರಚಿಸಿ, ಸಮಾಜದಲ್ಲಿ ಮನೆಮಾಡಿದ್ದ ಮೌಢ್ಯದ ವಿರುದ್ಧ ಹೋರಾಡಿದ ಮಹಾನ್ ಚೇತನ ಎಂದರು.


ಉದಯವಾಹಿನಿ ಚಿತ್ರ

ರಾಷ್ಟ್ರೀಯ ಬಸವ ಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಮಾತನಾಡಿ, ವೇಮನ ಅವರು ತಮ್ಮ ಸರಳ ವಚನಗಳ ಮೂಲಕ ಸಮಾಜದಲ್ಲಿದ್ದ ಅನಿಷ್ಟ ಪದ್ಧತಿಗಳನ್ನು ಹೋಗಲಾಡಿಸಲು ಶ್ರಮಿಸಿದವರು. ಅವರ ಜೀವನದ ಮೌಲ್ಯಗಳು ಮತ್ತು ಸಂದೇಶಗಳು ಇಂದಿನ ಸಮಾಜಕ್ಕೆ ಅತ್ಯಂತ ಅವಶ್ಯಕವಾಗಿವೆ ಎಂದರು.

ನಿ. ಪ್ರೊ ಎಚ್. ಎಸ್ ಬಿರಾದಾರ, ಸಮಾಜ ಸೇವಕರಾದ ರವಿಗೌಡ ಚಿಕ್ಕೊಂಡ, ವಿನೂತ ಕಲ್ಲೂರ ಮಾತನಾಡಿದರು. ಸ್ವರೂಪರಾಣಿ ಬಿಂಜಲಬಾವಿ, ತಾಲ್ಲೂಕಾ ನೌಕರರ ಸಂಘದ ತಾಲ್ಲೂಕಾ ಅಧ್ಯಕ್ಷ ಶಿವಾನಂದ ಮಂಗಾನವರ ಸೇರಿದಂತೆ ಕಚೇರಿಯ ಸಿಬ್ಬಂದಿ ವರ್ಗ ಹಾಗೂ ಸಮಾಜದ ಪ್ರಮುಖರು ಉಪಸ್ಥಿತರಿದ್ದರು.

---

# ಹಿಂದೂ ಸಂಸ್ಕೃತಿ ತಿಳಿದು ಬಾಳಿದವನೆ ನಿಜ ದೇಶಭಕ್ತ

• ಉದಯವಾಹಿನಿ ಔರಾದ್

ಭಾಷಣಕಾರರಾಗಿ ಸೇಡಂ ಸಾಮಾಜಿಕ ಕಾರ್ಯಕರ್ತ ಡಾ. ನಾಗರಾಜ ಮಾತನಾಡಿ, ಹಿಂದು ಸಂಸ್ಕೃತಿ ತಿಳಿದು ಬಾಳಿದವನೇ ನಿಜವಾದ ದೇಶಭಕ್ತನು, ರಾಷ್ಟ್ರ ಹಿತಕ್ಕಾಗಿ ಕೆಲಸ ಮಾಡುವುದು ಪ್ರತಿಯೊಬ್ಬ ನಾಗರಿಕನ ಹೊಣೆ ಆಗಿದೆ. ನಾವೆಲ್ಲರೂ ಹಿಂದೂ ಎನ್ನುವ ಭಾವನೆಯನ್ನು ಎಲ್ಲರೂ ಬೆಳೆಸಿಕೊಳ್ಳಬೇಕು ಎಂದು ಸಾಮಾಜಿಕ ಕಾರ್ಯಕರ್ತ ಡಾ.ನಾಗರಾಜ ಮನ್ನೆ ಹೇಳಿದರು.

ತಾಲ್ಲೂಕಿನ ವಡಗಾಂವ (ದೇ) ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ ಹಿಂದೂ ಸಮ್ಮೇಳನ ಸಮಾವೇಶದಲ್ಲಿ ದಿಕ್ಸೂಚಿ ಭಾಷಣ ಮಾಡಿದ ಅವರು ಪಂಚ ಪರಿವರ್ತನೆಗಳಾದ ಸಾಮರಸ್ಯ, ಕುಟುಂಬ, ಪ್ರಬೋಧನ, ಪರಿಸರ ಸಂರಕ್ಷಣೆ, ಸ್ವದೇಶೀ ಜೀವನಶೈಲಿ ಹಾಗೂ ನಾಗರೀಕ ಶಿಷ್ಟಾಚಾರ ಇವುಗಳ ಮುಖಾಂತರ ಹಿಂದೂ ಸಮಾಜವನ್ನು ಒಗ್ಗೂಡಿಸಿ ಭಾರತವನ್ನು ವಿಶ್ವದಲ್ಲಿ ವೈಭವಿಕರಿಸೋಣ ಎಂದರು.


ಉದಯವಾಹಿನಿ ಚಿತ್ರ

**ದಿವ್ಯ ಬೃಹತ್ ಶೋಭಾಯಾತ್ರೆ:** ಗ್ರಾಮದ ವೀರಭದ್ರೇಶ್ವರ ದೇವಸ್ಥಾನದಿಂದ ತಾಯಿ ಭಾರತಾಂಬೆ ಮೆರವಣಿಗೆಯೊಂದಿಗೆ ಶೋಭಾಯಾತ್ರೆ ಜರುಗಿತು. ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ಬಂಜಾರ ಕಲಾ ತಂಡ, ವಾರಕಾರೀ ಭಜನಾ ಮಂಡಳಿ ಸೇರಿದಂತೆ ಅನೇಕ ಕಲಾ ತಂಡಗಳು ಭಾಗವಹಿಸಿದವು, ಸಮ್ಮೇಳನದಲ್ಲಿ ಬಂದ ಸಾರ್ವಜನಿಕರಿಗೆ ಅನ್ನ ಸಾಂಬಾರು, ಹುಗ್ಗಿಯ ಮಸ್ತ್ ಮಸ್ತ್ ಊಟದ ವ್ಯವಸ್ಥೆ ಮಾಡಲಾಯಿತು.

---

# ಗ್ರಾಮೀಣ ಭಾಗಕ್ಕೆ ಬಸ್ ವ್ಯವಸ್ಥೆ ಕಲ್ಪಿಸುವಂತೆ ಶಾಸಕರಿಗೆ ಮನವಿ

• ಉದಯವಾಹಿನಿ ಸುಳ್ಯ

ವಿದ್ಯಾರ್ಥಿಗಳ ಪ್ರಯಾಣಕ್ಕೆ ಅನುಕೂಲವಾಗುವಂತೆ ಸುಳ್ಯ ತಾಲ್ಲೂಕಿನ ಗ್ರಾಮೀಣ ಭಾಗಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿ ಎಬಿವಿಪಿ ವತಿಯಿಂದ ಶಾಸಕಿ ಭಾಗೀರಥಿ ಮುರುಳ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಬಾಳುಗೋಡು ಭಾಗಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕು. ಮಕಂಜ ಮಾರ್ಗದಲ್ಲಿ, ಪೇರಾಲು ಮಾರ್ಗದಲ್ಲಿ, ಉಬರಡ್ಕ ಮಡಪ್ಪಾಡಿ ಮಾರ್ಗದಲ್ಲಿ ತುರ್ತು ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಮನವಿಯಲ್ಲಿ ವಿನಂತಿಸಲಾಯಿತು. ಬಸ್ ಸಮಸ್ಯೆಯಿಂದ ಗ್ರಾಮೀಣ ನಾಗರಿಕರ ಹಾಗೂ ವಿದ್ಯಾರ್ಥಿಗಳ ದಿನನಿತ್ಯ ಪ್ರಯಾಣಕ್ಕೆ ಸಮಸ್ಯೆ ಉಂಟು ಮಾಡುತ್ತಿದೆ. ಆದ್ದರಿಂದ ಈ ಮಾರ್ಗಗಳ ಬಸ್ ಸೌಲಭ್ಯವನ್ನು ತಕ್ಷಣ ಪರಿಶೀಲಿಸಿ ಸಾರ್ವಜನಿಕರ ಹಿತದೃಷ್ಟಿಯಿಂದ ಸೂಕ್ತ ಪರಿಹಾರ ಒದಗಿಸುವಂತೆ ವಿನಂತಿಸಲಾಯಿತು.

# ಅಕ್ರಮ ಬೀಟೆ ಮರದ ದಿಮ್ಮಿಗಳ ಸಾಗಾಟ ಸೊತ್ತು ಸಮೇತ ಚಾಲಕ ವಶಕ್ಕೆ

• ಉದಯವಾಹಿನಿ ಕಡಬ

ಕಡಬ ಗ್ರಾಮದ ಬಾರ್ ಮತ್ತು ರೆಸ್ಟೋರೆಂಟ್‌ನಲ್ಲಿ ಹಲ್ಲೆ, ಜಾತಿ ಆಧಾರಿತ ನಿಂದನೆ ಮತ್ತು ಕ್ರಿಮಿನಲ್ ಬೆದರಿಕೆ ಆರೋಪದ ಮೇರೆಗೆ ಕಡಬ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಡಬ ತಾಲ್ಲೂಕಿನ ಪಾಲ್ತಾಡು ಗ್ರಾಮದ ನಿವಾಸಿ ಜಗದೀಶ್ (28) ಜನವರಿ 16 ರಂದು ರಾತ್ರಿ 10 ರಿಂದ 10.30 ರ ನಡುವೆ ಕಡಬ ಗ್ರಾಮದ ಕಲಾರದಲ್ಲಿರುವ ಸುರಭಿ ಬಾರ್, ರೆಸ್ಟೋರೆಂಟ್‌ಗೆ ಹೋಗಿದ್ದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಊಟ ಮುಗಿಸಿ ಕ್ಯಾಶ್ ಕೌಂಟರ್ ಹತ್ತಿರ ನಿಂತಿದ್ದಾಗ, ಪರಿಚಯಸ್ಥರಾದ ಅಜಯ್, ಬೇಬಿ ಮತ್ತು ಅನಿಲ್ ಎಂಬವರು ವಿನಾಕಾರಣ ಜಗಳ ಆರಂಭಿಸಿ ಜಾತಿನಿಂದನೆ ಮಾಡುತ್ತಾ, ಕೈಯಿಂದ ಕೆನ್ನೆ, ತಲೆ, ಭುಜ, ಬೆನ್ನಿಗೆ ಹಲ್ಲೆ ನಡೆಸಿ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದ್ದಾರೆ. ದೂರಿನ ಆಧಾರದ ಮೇಲೆ, ಕಡಬ ಪೊಲೀಸರು ಅಪರಾಧ ಸಂಖ್ಯೆ 08/2026 ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

---

# ಜ.26ರಂದು ಗಣರಾಜ್ಯೋತ್ಸವ: ಅಗತ್ಯ ಕೈಗೊಳ್ಳಲು ಸೂಚನೆ

• ಉದಯವಾಹಿನಿ ಕೊಲ್ಹಾರ

ಜ.26ರಂದು ಜರಗಲಿರುವ ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಸರ್ಕಾರದ ಆದೇಶದಂತೆ ಆಚರಿಸಲು ಅಗತ್ಯ ಕೈಗೊಳ್ಳಬೇಕೆಂದು ತಾಲ್ಲೂಕು ಪಂಚಾಯತಿ ಎಓ ಸುನಿಲ್ ಮುದ್ದೀನ್ ಹೇಳಿದರು. ಪಟ್ಟಣದ ತಾಲ್ಲೂಕು ಪಂಚಾಯತ್ ಕಾರ್ಯಾಲಯದಲ್ಲಿ ತಾಲ್ಲೂಕು ಆಡಳಿತ ವತಿಯಿಂದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದವರು, ತಾಲ್ಲೂಕು ಮಟ್ಟದ ಗಣರಾಜ್ಯೋತ್ಸವ ದಿನಾಚರಣೆ ವಿವಿಧ ಸಮಿತಿಗಳನ್ನು ರಚಿಸಲಾಗಿದೆ. ಆಯಾ ಸಮಿತಿಯವರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳು ಉಂಟಾಗದಂತೆ ಕಾರ್ಯನಿರ್ವಹಿಸಬೇಕು.

**ಸಮಿತಿಯವರು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು**

ಗಣರಾಜ್ಯೋತ್ಸವ ದಿನದಂದು ಎಲ್ಲಾ ಕಚೇರಿ ಮತ್ತು ಶಾಲಾ-ಕಾಲೇಜು ಸಿಬ್ಬಂದಿ ತಮ್ಮ ಕಾರ್ಯಾಲಯದಲ್ಲಿ ಧ್ವಜಾರೋಹಣವನ್ನು ಬೆಳಗ್ಗೆ 7.30 ರೊಳಗೆ ನೆರವೇರಿಸಿ ನಂತರ ಬೆಳಗ್ಗೆ 8:30 ನಿಗದಿತ ಸಮಯಕ್ಕೆ ಪಟ್ಟಣದ ಎಂಪಿಎಸ್ ಶಾಲಾ ಆವರಣದಲ್ಲಿ ಹಾಜರಾಗಬೇಕು.

ನಂತರ ಪ್ರತಿ ವರ್ಷದಂತೆ ಧ್ವಜಾರೋಹಣ ಕಾರ್ಯಕ್ರಮ ಜರಗಲಿದ್ದು ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಕಾರ್ಯಕ್ರಮ ಪ್ರಾರಂಭವಾದಲ್ಲಿ ದೇಶಭಕ್ತಿ ಗೀತೆ ಹಾಡು ಪ್ರಸಾರವಾಗಬೇಕು. ನಂತರ ವಿವಿಧ ರಂಗದಲ್ಲಿ ಸಾಧನೆಗೈದ ವ್ಯಕ್ತಿಗಳಿಗೆ ತಾಲ್ಲೂಕು ಆಡಳಿತ ವತಿಯಿಂದ ಸನ್ಮಾನ ಸಮಾರಂಭ ಮತ್ತು ಪಟ್ಟಣದ ನವ ಚೇತನ ಕಿರಿಯ ಪ್ರಾಥಮಿಕ ಶಾಲೆ, ಸರಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ಸರಕಾರಿ ಕನ್ನಡ ಹಿರಿಯ ಮಾದರಿ ಶಾಲೆ, ಕಿತ್ತೂರು ರಾಣಿ ಚನ್ನಮ್ಮಾ ವಸತಿ ಶಾಲೆ ಮತ್ತು ಆಕ್ಸ್‌ಫರ್ಡ್ ಕಿರಿಯ ಪ್ರಾಥಮಿಕ ಶಾಲೆ ಇವರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಳ್ಳಬೇಕೆಂದು ತಿಳಿಸಿದರು. ವಿವಿಧ ವ್ಯವಸ್ಥೆಯನ್ನು ತಾಲ್ಲೂಕು ಆಡಳಿತದಿಂದ ಹಮ್ಮಿಕೊಳ್ಳಲಾಗುವುದು ಎಂದರು.


ಉದಯವಾಹಿನಿ ಚಿತ್ರ

ಈ ಪೂರ್ವಭಾವಿ ಸಭೆಯಲ್ಲಿ ಪ ಪಂ ಅಧ್ಯಕ್ಷ ಚೆನ್ನಮಲ್ಲಪ್ಪ ಗಿಡ್ಡಪ್ಪಗೋಳ, ಪ ಪಂ ಮುಖ್ಯಧಿಕಾರಿ ವಿರೇಶ ಹಟ್ಟಿ, ತಾಲ್ಲೂಕು ವೈದ್ಯಾಧಿಕಾರಿ, ಲಕ್ಷ್ಮಿ ತೆಲ್ಲೂರು,ಪ ಪಂ ಸದಸ್ಯರು,ಶಾಲೆಯ ಮುಖ್ಯೋಪಾಧ್ಯರು, ಗುರುಮಾತೆಯರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

---

# ಬದುಕಿನ ಕತ್ತಲೆಗೆ ವಿವೇಕಾನಂದರ ತತ್ವಗಳೇ ಬೆಳಕು: ಡಾ. ಯಂಕನಗೌಡ ಪಾಟೀಲ

● ಪಟ್ಟಣದ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ 164ನೇ ಜಯಂತೋತ್ಸವ: ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ವೈಭವ

• ಉದಯವಾಹಿನಿ ಕೆಂಭಾವಿ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಕೇವಲ ಪಠ್ಯದ ಪುಸ್ತಕಗಳಿಗೆ ಸೀಮಿತವಾಗಬಾರದು. ಅಂಕಗಳಿಕೆ ಎಂಬುದು ಜೀವನದ ಒಂದು ಭಾಗವಷ್ಟೇ, ಆದರೆ ವ್ಯಕ್ತಿತ್ವ ನಿರ್ಮಾಣವೇ ಶಿಕ್ಷಣದ ಅಂತಿಮ ಗುರಿಯಾಗಬೇಕು. ಸ್ವಾಮಿ ವಿವೇಕಾನಂದರ ಅಪ್ರತಿಮ ವಿಚಾರಧಾರೆಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಸತ್ಪ್ರಜೆಗಳಾಗಿ ಬಾಳಲು ಸಾಧ್ಯ, ಎಂದು ಪ್ರಖ್ಯಾತ ಉಪನ್ಯಾಸಕ ಡಾ. ಯಂಕನಗೌಡ ಎಸ್. ಪಾಟೀಲ ಅಭಿಪ್ರಾಯಪಟ್ಟರು.

ಸ್ಥಳೀಯ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಸ್ವಾಮಿ ವಿವೇಕಾನಂದರ 164ನೇ ಜಯಂತೋತ್ಸವ ಅಂಗವಾಗಿ ವಿವೇಕೋತ್ಸವ ಮತ್ತು ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಪ್ರೇರಣಾದಾಯಕವಾಗಿ ಮಾತನಾಡಿದರು.

**ಗ್ರಾಮೀಣ ಭಾಗದ ಜ್ಞಾನ ದೇಗುಲ:** 30 ವರ್ಷಗಳ ಸಾರ್ಥಕ ಪಯಣ ಸಂಸ್ಥೆಯ ಶೈಕ್ಷಣಿಕ ಸೇವೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದ ಡಾ. ಪಾಟೀಲರು, ಕಳೆದ ಮೂರು ದಶಕಗಳಿಂದ ಈ ಶಾಲೆಯು ಕತ್ತಲ


ಉದಯವಾಹಿನಿ ಚಿತ್ರ

ಹಾದಿಯಲ್ಲಿದ್ದ ನೂರಾರು ಗ್ರಾಮೀಣ ಕುಟುಂಬಗಳಿಗೆ ಜ್ಞಾನದ ದೀಪ ಹಚ್ಚಿದೆ. ಆಡಳಿತ ಮಂಡಳಿಯ ನಿಸ್ವಾರ್ಥ ಸೇವೆ ಮತ್ತು ಶಿಕ್ಷಕರ ಶ್ರಮದಿಂದಾಗಿ ಈ ಭಾಗದ ಬಡ ಮಕ್ಕಳ ಪಾಲಿಗೆ ಇದು ನಿಜವಾದ ಆಶಾಕಿರಣವಾಗಿದೆ. ಸಂಸ್ಥೆಯು ಶೀಘ್ರದಲ್ಲೇ ಪ್ರೌಢಶಾಲಾ ವಿಭಾಗವನ್ನು ಆರಂಭಿಸಿ ಗ್ರಾಮೀಣ ಪ್ರತಿಭೆಗಳ ಉನ್ನತ ವ್ಯಾಸಂಗಕ್ಕೆ ಆಸರೆಯಾಗಬೇಕು, ಎಂದು ಆಶಿಸಿದರು.

**ಅಂಕಗಳಿಕೆ ಜೀವನದ ಒಂದು ಭಾಗವಷ್ಟೇ**

**ಸಂಸ್ಕಾರಯುತ ಶಿಕ್ಷಣಕ್ಕೆ ಆದ್ಯತೆ:** ಶಾಲೆಯ ಮುಖ್ಯ ಶಿಕ್ಷಕರಾದ ಬಾಬು ಪಟೇಲ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ಸಂಸ್ಥೆಯು ಕೇವಲ ಅಕ್ಷರ ಕಲಿಸದೆ ಸಂಸ್ಕಾರವನ್ನು ಕಲಿಸುತ್ತಿದೆ. ಇಲ್ಲಿ ಓದಿದ ವಿದ್ಯಾರ್ಥಿಗಳು ಇಂದು ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ದೇಶ-ವಿದೇಶಗಳಲ್ಲಿ ಉನ್ನತ ಸ್ಥಾನ ಅಲಂಕರಿಸಿರುವುದು ನಮ್ಮ ಶ್ರಮಕ್ಕೆ ಸಂದ ಗೌರವ, ಎಂದರು.

**ಉದಯ ವಾಹಿನಿ ಹೈಲೆಟ್ಸ್**

- **ವ್ಯಕ್ತಿತ್ವ ವಿಕಸನ:** ಅಂಕಗಳಿಗಿಂತ ಮೌಲ್ಯಯುತ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂಬ ಸಂದೇಶ.
- **ಸಂಸ್ಥೆಯ ಮೈಲಿಗಲ್ಲು:** 30 ವರ್ಷಗಳಿಂದ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಸಂಸ್ಥೆಯ ಶಿಸ್ತು.
- **ಹಳೆಯ ವಿದ್ಯಾರ್ಥಿಗಳ ಯಶೋಗಾಥೆ:** ಜಾಗತಿಕ ಮಟ್ಟದಲ್ಲಿ ವೈದ್ಯಕೀಯ ಮತ್ತು ತಾಂತ್ರಿಕ ಕ್ಷೇತ್ರದಲ್ಲಿ ಮಿಂಚುತ್ತಿರುವ ಶಾಲೆಯ ಪ್ರತಿಭೆಗಳು.
- **ಭವಿಷ್ಯದ ಕನಸು:** ಗ್ರಾಮೀಣ ವಿದ್ಯಾರ್ಥಿಗಳಿಗಾಗಿ ಪ್ರೌಢಶಾಲಾ ವಿಭಾಗದ ವಿಸ್ತರಣೆಗೆ ಯೋಜನೆ.

**ಮನಸೂರೆಗೊಂಡ ಸಾಂಸ್ಕೃತಿಕ ಕಾರ್ಯಕ್ರಮಗಳು:** ಜಯಂತೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳು ಜನರ ಗಮನ ಸೆಳೆದವು. ಪುಟ್ಟ ಮಕ್ಕಳು ಸ್ವಾಮಿ ವಿವೇಕಾನಂದರ ವೇಷಧರಿಸಿ ಅವರ ಐತಿಹಾಸಿಕ ಚಿಕಾಗೋ ಭಾಷಣವನ್ನು ಮರುಸೃಷ್ಟಿಸಿದರು. ವಿವೇಕಾನಂದರ ಜೀವನ ಚರಿತ್ರೆಯನ್ನು ಸಾರುವ ಕಿರು ನಾಟಕಗಳು ಮತ್ತು ದೇಶಭಕ್ತಿ ಗೀತೆಗಳ ಗಾಯನವು ನೆರೆದಿದ್ದ ಪೋಷಕರಲ್ಲಿ ರೋಮಾಂಚನ ಉಂಟುಮಾಡಿತು.

**ಗಣ್ಯರ ಉಪಸ್ಥಿತಿ ಮತ್ತು ಸನ್ಮಾನ:** ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಆದಿತ್ಯಗೌಡ ಪೊಲೀಸ್ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಪ್ರಮುಖ ಗಣ್ಯರಾದ ಬಂದೇನವಾಜ್ ಐ. ನಾಲತವಾಡ, ಗಂಗಾಧರ್ ಪತ್ತಾರ್, ಗೌಸ್ ಮೌಲಾನ, ಇಲ್ಯಾಸ್ ನಾಲತವಾಡ, ತಾಹೇರ ಹುಸೇನ್ ಪೇಶಮಾಮ್, ಹಾಗೂ ಇಲ್ಯಾಸ್ ಪಟೇಲ್ ಬಳಗಾನೂರ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ರಾಮಣ್ಣ ಪಾಟೀಲ್ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಶಾಲಾ ಸಿಬ್ಬಂದಿಗಳಾದ ಮದುಮತಿ, ಅಕ್ಷತಾ, ಮಿಜಬಾ, ಮದೀನಾ, ಮಾಸಾಬಿ ಯಲಗೋಡ ಸ್ವಾಗತಿಸಿದರು, ಸಾನಿಯಾ ನಾಲತವಾಡ ನಿರೂಪಿಸಿದರು, ಭಾರತಿ ಮಾಲಾರ್ಪಣೆ ಮಾಡಿದರು.




# ಗಿಲ್ಲಿ ನಿಜವಾದ ಬಡವ ಅಲ್ಲ

ಗಿಲ್ಲಿ ನಿಜವಾದ ಬಡವನಾ ನಿಜವಾದ ಬಡವ ಬೇರೆ, ಬಡವನ ರೀತಿ ಗೆಟಪ್ ಹಾಕ್ಕೊಂಡು ಬದುಕೋದು ಬೇರೆ ಎಂದು ಬಿಗ್ ಬಾಸ್ 2ನೇ ರನ್ನರ್ ಅಪ್ ಅಶ್ವಿನಿ ಗೌಡ ಟಾಂಗ್ ಕೊಟ್ಟಿದ್ದಾರೆ. ಅಶ್ವಿನಿ ಗೌಡ, ಬಡವರ ಮಕ್ಕಳು ಬೆಳೆಯಬೇಕು ಅನ್ನೋದು ನಮ್ಮ ಡಾಲಿ ಧನಂಜಯ್ ಅವರ ಡೈಲಾಗ್. ಆದ್ರೆ, ಗಿಲ್ಲಿ ನಿಜವಾದ ಬಡವನಾ ಅದು ಬಹಳ ಮುಖ್ಯ ಆಗುತ್ತೆ. ನಿಜವಾದ ಬಡವ ಬೇರೆ, ಬಡವನ ಥರ ಗೆಟಪ್ ಹಾಕ್ಕೊಂಡು ಬದುಕೋದು ಬೇರೆ. ಬಹುಶಃ ಅವರ ಆಟ ಎಲ್ಲರಿಗೂ ಇಷ್ಟ ಆಗಿದೆ ಅಂತ ಹೇಳೋಕೆ ನಾನು ಇಷ್ಟಪಡ್ತೀನಿ. ಗಿಲ್ಲಿ ಬಡವ ಅಂತ ಹೇಳೋದು ತಪ್ಪಾಗುತ್ತೆ ಎಂದು ಮಾತನಾಡಿದ್ದಾರೆ. ಬಡವನ ಗೆಟಪ್‌ನಲ್ಲಿ ಗಿಲ್ಲಿ ವಿನ್ನರ್ ಆದ್ರು. ಅಷ್ಟೇ ಬಿಟ್ರೆ, ಬಡವ ಅಂತ ಹೇಳಿದ್ರೆ, ತಪ್ಪಾಗುತ್ತೆ. ಅದನ್ನ ನಾವು ಯಾವತ್ತೂ ಸ್ಟ್ರ್ಯಾಟಜಿ ಕಾರ್ಡ್ ಆಗಿ ಬಳಸಬಾರದು. ಗಿಲ್ಲಿ ಗೆದ್ದಿದ್ದಾರೆ. ಅವರ ವ್ಯಕ್ತಿತ್ವ ಮತ್ತು ಆಟದ ವಿಚಾರದಲ್ಲಿ ಖಂಡಿತ ನನಗೆ ಹೆಮ್ಮೆಯಿದೆ. ಯಾಕಂದ್ರೆ, ಅವರೂ ನನ್ನ ಜೊತೆ ಪ್ರಯಾಣ ಮಾಡಿದ ಪ್ರತಿಸ್ಪರ್ಧಿ. ನಾನು ಅವರನ್ನ ಯಾವತ್ತೂ ಬಿಟ್ಟುಕೊಡೇಕೆ ಇಷ್ಟಪಡಲ್ಲ ಎಂದು ಹೇಳಿದ್ದಾರೆ.

ಯುದ್ಧ ಮಾಡಬೇಕಾದ್ರೆ, ಕತ್ತಿಯನ್ನು ಕೈಯಲ್ಲಿ ಹಿಡಿದುಕೊಂಡಿರ್ತೀವಿ. ಬಿಗ್ ಬಾಸ್ ಮುಗಿದ ಮೇಲೆ ಕತ್ತಿಯನ್ನು ಕೆಳಗಡೆ ಇಡ್ತೀವಿ. ಮತ್ತೆ ಅದನ್ನು ಕೈಗೆ ಎತ್ತಿಕೊಳ್ಳಲು ನನಗೆ ಇಷ್ಟ ಇಲ್ಲ. ಹಾಗಾಗಿ, ಗಿಲ್ಲಿ ಗೆದ್ದಿದ್ದಾರೆ. ಅವರ ಭವಿಷ್ಯ ಉಜ್ವಲ ಆಗ್ಲಿ, ಒಳ್ಳೆದಾಗ್ಲಿ. ನನ್ನನ್ನು ಅತ್ತೆ ಮಗಳು ಅಂತ ಕರೆದಿದ್ದಾರೆ. ನಾನು ಅವರನ್ನ ಮಾವನ ಮಗ ಅಂತ ಕರೆದಿದ್ದೀನಿ. ಖಂಡಿತ ಒಳ್ಳೆದಾಗಬೇಕು ಎಂದು ಆಶಿಸಿದ್ದಾರೆ.

# ಲಾಯರ್ ಆದ ಕೋಮಲ್

ನಟ ಕೋಮಲ್ ತೆನಾಲಿ ಡಿಎ ಎಲ್‌ಎಲ್‌ಬಿ ಎಂಬ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಇದರಲ್ಲಿ ಲಾಯರ್ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ ಕೋಮಲ್. ಸದ್ಯ ಬಿಡುಗಡೆ ಆಗಿರುವ ಪೋಸ್ಟರ್ ನಲ್ಲಿಯೂ ಕೋಮಲ್ ಲಾಯರ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ತೆನಾಲಿ ಡಿಎ ಎಲ್‌ಎಲ್‌ಬಿ ಸಿನಿಮಾವನ್ನು ಸಿದ್ದುವ್ ಸಿದ್ದು ನಿರ್ದೇಶನ ಮಾಡುತ್ತಿದ್ದಾರೆ.


ಈ ಹಿಂದೆ ವಿಜಯ ರಾಘವೇಂದ್ರ ನಟನೆಯ ಮರೀಚಿ ಸಿನಿಮಾವನ್ನ ಸಿದ್ದುವ್ ಸಿದ್ದು ನಿರ್ದೇಶನ ಮಾಡಿದ್ದರು. ಸದ್ಯ ಪೋಸ್ಟರ್ ಬಿಡುಗಡೆ ಮಾಡಿರೋ ಸಿನಿಮಾ ತಂಡ ಮೇ ತಿಂಗಳಲ್ಲಿ ಚಿತ್ರೀಕರಣ ಪ್ರಾರಂಭ ಮಾಡಲಿದ್ದಾರೆ. ಇದೇ ಮೊದಲ ಬಾರಿಗೆ ಲಾಯರ್ ಆಗಿ ಅಭಿನಯ ಮಾಡುತ್ತಿರೋ ಕೋಮಲ್ ತಮ್ಮ ನಿಜ ಜೀವನದಲ್ಲಿಯೂ ಎಲ್ ಎಲ್ ಬಿ ಓದಿದ್ದಾರೆ. ಅನೇಕ ವರ್ಷಗಳ ಬಳಿಕ ಈಗ ತೆರೆ ಮೇಲೆ ಲಾಯರ್ ಆಗಿ ಮಿಂಚಲಿದ್ದಾರೆ.

ಚಿತ್ರಕ್ಕೆ ಸಿದ್ದುವ್ ಸಿದ್ದು, ಸಂತೋಷ್ ಮಾಯಪ್ಪ, ಪ್ರದೀಪ್ ಕುಮಾರ್ ಮಹಾಲಿಂಗಯ್ಯ, ರೇಣುಕಾ ಪ್ರಸಾದ್ ಬಂಡವಾಳ ಹಾಕಿದ್ದಾರೆ. ರಿತ್ವಿಕ್ ಮುರಳಿಧರನ್ ಸಂಗೀತಾ ನಿರ್ದೇಶನ ಮಾಡುತ್ತಿದ್ದು ಉದಯ್ ಲೀಲಾ ಛಾಯಾಗ್ರಹಣವಿದೆ.




# ಫೆ.6ಕ್ಕೆ ಜೆಸಿ ತೆರೆಗೆ

ಡಾಲಿ ಧನಂಜಯ ಅವರ ಡಾಲಿ ಪಿಕ್ಚರ್ಸ್' ನಿರ್ಮಾಣದಲ್ಲಿ ಮೂಡಿ ಬಂದಿರುವ ಜೆಸಿ- ದಿ ಯೂನಿವರ್ಸಿಟಿ ಸಿನಿಮಾ ಫೆಬ್ರವರಿ 6ಕ್ಕೆ ತೆರೆಗೆ ಬರುತ್ತಿದೆ. ಸೂರ್ಯ ಪ್ರಖ್ಯಾತ್ ಮತ್ತು ಭಾವನಾ ರೆಡ್ಡಿ ನಟನೆಯ ಜೆಸಿ ಸಿನಿಮಾದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಗಿದ್ದು, ಶಿವರಾಜ್ ಕುಮಾರ್ ಹಾಗೂ ನಿರ್ದೇಶಕ ಪ್ರೇಮ್ ಟ್ರೇಲರ್ ರಿಲೀಸ್ ಮಾಡಿ ತಂಡಕ್ಕೆ ಶುಭಕೋರಿದರು.



ಚೇತನ್ ಜೈರಾಮ್ ಅವರ ಚೊಚ್ಚಲ ನಿರ್ದೇಶನದಲ್ಲಿ ಬಂದಿರುವ ಜೆಸಿ, ಜೈಲಿನಲ್ಲಿ ನಡೆಯುವ ಕಥೆ. ಜೈಲು ಒಳಗಿನ ಅವ್ಯವಹಾರ, ಕೈದಿಗಳ ದರ್ಬಾರ್ ಈ ಸಿನಿಮಾದಲ್ಲಿ ತೋರಿಸಲಾಗಿದೆ. ಹೊಡೆದಾಟ, ಕೊಲೆ, ರಕ್ತ ಇದರ ನಡುವೆ ಅಪ್ಪ ಮಗನ ಭಾವನಾತ್ಮಕ ಕಥೆಯನ್ನು ಹೇಳಲಾಗಿದೆ.

ಟ್ರೇಲರ್‌ರಿಲೀಸ್ ಮಾಡಿಕೊಟ್ಟ ಶಿವಣ್ಣ ಮತ್ತು ಜೋಗಿ ಪ್ರೇಮ್ ಅವರಿಗೆ ಡಾಲಿ ಧನ್ಯವಾದ ತಿಳಿಸಿದರು. ಚಿತ್ರರಂಗದಲ್ಲಿ ಒಬ್ಬ ಅಣ್ಣನ ಹಾಗೆ ಸಹಾಯಕ್ಕೆ ನಿಂತ ವ್ಯಕ್ತಿ ಶಿವಣ್ಣ. ನನ್ನ ಮೊದಲ ನಿರ್ಮಾಣದ ಸಿನಿಮಾದಿಂದ ಇಲ್ಲಿಯ ವರೆಗೂ ತುಂಬಾ ಸಹಾಯ ಮಾಡಿದ್ದಾರೆ ಎಂದರು. ನಾಯಕ ಪ್ರಖ್ಯಾತ್ ಮಾತನಾಡಿ, ದುಡ್ಡು ಇರೋರೆಲ್ಲ ಹೀರೋ ಆಗಲು ಸಾಧ್ಯವಿಲ್ಲ. ಜನ ಒಪ್ಪೊಬೇಕು, ಸರಸ್ವತಿ ಆಶೀರ್ವಾದ ಇರಬೇಕು. ಸೂಪರ್‌ಸ್ಟಾರ್ ಮಕ್ಕಳು ಫೇಲ್ ಆಗಿರೋದು ಇದೆ. ಬಡವರ ಮಕ್ಕಳು ಸೂಪರ್‌ಸ್ಟಾರ್‌ಆಗಿರುವ ಉದಾಹರಣೆಯೂ ಇದೆ. ದುಡ್ಡು ಇದ್ರೆ ಎಲೆಕ್ಷನ್ ಗೆಲ್ಲಬಹುದು, ಆದರೆ ಸಿನಿಮಾ ಗೆಲ್ಲಿಸೋದು ಕಷ್ಟ ಎಂದರು. ನಾಯಕಿ ಭಾವನಾ ರೆಡ್ಡಿ ಕೂಡಾ ತಮ್ಮ ಸಿನಿಮಾ ಅನುಭವ ಹಂಚಿಕೊಂಡರು.

# ಕಾವ್ಯನ್ನ ಮದ್ವೆ ಆಗ್ತಾರಾ ಗಿಲ್ಲಿ

ಗಿಲ್ಲಿ ನಟ ಕರುನಾಡೇ ಮೆಚ್ಚುವಂತೆ ಬೆಳೆದು ನಿಂತಿದ್ದಾನೆ. ಬಿಗ್‌ಬಾಸ್ ಸೀಸನ್-12 ಕ್ಕೆ ಒಬ್ಬ ಸ್ಪರ್ಧಿಯಾಗಿ ಆಗಮಿಸಿದ ಹಳ್ಳಿಹೈದ ತನ್ನದೇ ಮ್ಯಾನರಿಸಂನಿಂದ ಈ ಬಾರಿ ಬಿಗ್‌ಬಾಸ್ ಕ್ರೇಜ್ ಹೆಚ್ಚಿಸಿದ್ದಲ್ಲದೇ ದೊಡ್ಡ ಮಟ್ಟದ ಗೆಲುವು ಪಡೆದುಕೊಂಡಿದ್ದಾರೆ. ತನ್ನಂತೆ ಬಿಗ್‌ಬಾಸ್‌ಗೆ ಎಂಟ್ರಿ ಕೊಟ್ಟ 24 ಸ್ಪರ್ಧಿಗಳನ್ನ ಮುಲಾಜಿಲ್ಲದೇ ಹಿಮ್ಮೆಟ್ಟಿಸಿ ಬಿಗ್‌ಬಾಸ್ ಕಿರೀಟವನ್ನ ತಮ್ಮದಾಗಿಸಿಕೊಂಡಿದ್ದಾರೆ.

ಇನ್ನೂ ಮನೆಯೊಳಗೆ ಇದ್ದಾಗಿನಿಂದಲೂ ಗಿಲ್ಲಿ ಮತ್ತು ಕಾವ್ಯ ಅವರ ನಡುವಿನ ಸ್ನೇಹದ ಬಗ್ಗೆ ಹಲವು ಚರ್ಚೆಗಳು ನಡೆದಿತ್ತು. ಮನೆಯಿಂದ ಹೊರಬರ್ತಿದ್ದಂತೆ ಗಿಲ್ಲಿ ಕಾವ್ಯ ಶೈವ ಅವರ ಮದ್ವೆ ಮಾತು ಜೋರಾಗಿದೆ. ಅಭಿಮಾನಿಗಳಂತೂ ಗಿಲ್ಲಿ ಕಾವ್ಯ ಕಟೌಟ್‌ಗೆ ಹಾಲಿನ ಅಭಿಷೇಕವನ್ನೂ ಮಾಡ್ತಿದ್ದಾರೆ. ಇನ್ನೂ ಕೆಲವರು ಮದ್ವೆ ಮಾಡಿಸಿಯೇ ತೀರುತ್ತೇವೆ ಎಂದು ಹೇಳ್ತಿದ್ದಾರೆ. ನಾನು ಕಾವ್ಯಾ, ಒಳ್ಳೇ ಸ್ನೇಹಿತರು ಸ್ನೇಹಿತರಾಗೇ ಇರ್ತೀವಿ ಅಂದಿದ್ದಾರೆ. ಇನ್ನೂ ಗಿಲ್ಲಿ ಮನಸು ಕದ್ದ ಹುಡುಗಿ ಯಾರು ಅನ್ನೋ ಪ್ರಶ್ನೆಗೆ ಟೈಂ ಬರಲಿ ಹೇಳ್ತೀನಿ, ಮದ್ವೆ ಆದ್ರೆ ಸೆಟಲ್ ಆಗ್ತೀನಿ ಅನ್ನೋದೆಲ್ಲ ಸುಳ್ಳು ಅಂತ ಹೇಳಿದ್ದಾರೆ. ಅಲ್ಲದೇ ಕಾವ್ಯನ್ನ ಫೈನಲ್‌ವರೆಗೂ ಕರ್ಕೊಂಡ್ ಹೋಗ್ತೀನಿ ಅಂತ ಹೇಳಿದ ಬಗ್ಗೆ ಮಾತನಾಡಿ, ಕಾವ್ಯ ಕೂಡ ಚೆನ್ನಾಗಿ ಆಡಿದ್ದಕ್ಕೆ ಫಿನಾಲೆ ವರೆಗೂ ಕರ್ಕೊಂಡ್ ಬಂದ್ರು, ನಾನ್ನಿಂದ ಅಲ್ಲ. ನಾನ್ ಹೇಳಿದ್ದು ಕೊನೆಯಲ್ಲಿ ಸಿಂಕ್ ಆಯ್ತು ಅಷ್ಟೇ. ಮುಂದಿನ ಯಾವುದೇ ಸಿನಿಮಾಗಳು ಬಂದಿಲ್ಲ, ಬಂದಮೇಲೆ ನೋಡ್ತೀನಿ, ಜನ ಇಲ್ಲಿಯವರೆಗೂ ಪ್ರೀತಿ ತೋರ್ಸಿದ್ದಾರೆ ಅಷ್ಟೇ ಸಾಕು ಅಂತ ಗಿಲ್ಲಿ ನಟ ಹೇಳಿಕೊಂಡಿದ್ದಾರೆ.

ಗಿಲ್ಲಿ ಕಾವ್ಯ ಸಂಬಂಧ ಹೇಗಿತ್ತು ಬಿಗ್ ಬಾಸ್ ಕನ್ನಡ 12 ಕಾರ್ಯಕ್ರಮ ಆರಂಭದಿಂದಲೂ ಗಿಲ್ಲಿ ಮತ್ತು ಕಾವ್ಯ ಅವರ ನಡುವೆ ಉತ್ತಮ ಸ್ನೇಹ ಇದೆ. ಇಬ್ಬರೂ ಸ್ಪರ್ಧಿಗಳು ಮನೆಯೊಳಗೆ ಬಂದಾಗಿನಿಂದಲೂ ಒಬ್ಬರೊಂದಿಗೆ ಒಬ್ಬರು ಚೆನ್ನಾಗಿ ಬೆರೆತಿದ್ದರು. ಆದರೆ ಕೆಲವೊಮ್ಮೆ ಸಣ್ಣಪುಟ್ಟ ಜಗಳಗಳು ಸಹ ಆಗಿವೆ.




# ಸಹ ನಟನ ಕಪಾಳಕ್ಕೆ ಬಾರಿಸಿದ್ರಾ ಪೂಜಾ ಹೆಗ್ಡೆ

ಬಹುಭಾಷಾ ನಟಿ ಪೂಜಾ ಹೆಗ್ಡೆ ಸೌತ್ ಮಾತ್ರವಲ್ಲದೆ, ಬಾಲಿವುಡ್‌ನಲ್ಲೂ ಮಿಂಚಿದ್ದಾರೆ. ಬಹುತೇಕ ಎಲ್ಲಾ ಬಿಗ್ ಸ್ಟಾರ್ಸ್‌ಗಳ ಜತೆ ಪೂಜಾ ಕೆಲಸ ಮಾಡಿದ್ದಾರೆ. ಬಹುಬೇಡಿಕೆಯ ನಟಿಯಾಗಿ ಪೂಜಾ ಹೆಗ್ಡೆ ಅವರ ಹೇಳಿಕೆಯೊಂದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಸೋಶಿಯಲ್ ಮೀಡಿಯಾದಲ್ಲಿ ಮಿಮ್ ಪೇಜ್‌ವೊಂದು ಪೂಜಾ ಹೆಗ್ಡೆ ಅವರ ಫೋಟೋ ಹಾಕಿಕೊಂಡು ಅವರು ಹೇಳಿರುವ ಮಾತೆನ್ನುವ ಫೋಟೋವೊಂದನ್ನು ಹಂಚಿಕೊಳ್ಳಲಾಗಿದೆ. ಸಿನಿಮಾ ಉದ್ಯಮದಲ್ಲಿ, ಕೆಲವೊಮ್ಮೆ ನಾವು ನಟರು ಸಹ ನಮ್ಮ ಅನುಮತಿ ಅಥವಾ ಒಪ್ಪಿಗೆಯಿಲ್ಲದೆ ನಮ್ಮ ಕ್ಯಾರವಾನ್‌ಗೆ ಪ್ರವೇಶಿಸುವ ಸಂದರ್ಭಗಳನ್ನು ಎದುರಿಸುತ್ತೇವೆ. ಕೆಲವು ವರ್ಷಗಳ ಹಿಂದೆ, ದೊಡ್ಡ ಪ್ಯಾನ್ ಇಂಡಿಯನ್ ಚಿತ್ರವೊಂದರಲ್ಲಿ ಕೆಲಸ ಮಾಡುತ್ತಿದ್ದಾಗ, ನಾನು ಅಂತಹ ಘಟನೆಯನ್ನು ಎದುರಿಸಿದೆ. ನಾನು ಅವನಿಗೆ ಕಪಾಳಮೋಕ್ಷ ಮಾಡಿದೆ ಮತ್ತು ಅಂದಿನಿಂದ, ಅವನು ನನ್ನೊಂದಿಗೆ ಮತ್ತೆ ಕೆಲಸ ಮಾಡಲು ಬಯಸಲಿಲ್ಲ.' ಎಂದು ಪೂಜಾ ಹೆಗ್ಡೆ ಹೇಳಿರುವುದಾಗಿ ಮಿಮ್ ಪೇಜ್‌ನಲ್ಲಿ ಹಾಕಿರುವ ಪೋಸ್ಟ್ ವೈರಲ್ ಆಗಿದೆ. ಆಗುತ್ತಿದ್ದಂತೆ ಟಾಲಿವುಡ್ ಟಾಪ್ ಸ್ಟಾರ್‌ಗಳೊಂದಿಗೆ ಇದನ್ನು ಲಿಂಕ್ ಮಾಡಲಾಗುತ್ತಿದೆ. 'ಸಾಕ್ಷಿ', 'ಫಿಲ್ಮಬೀಟ್' ಮತ್ತು 'ತೆಲುಗು360 ನಂತಹ ಸೈಟ್‌ಗಳು ಪೂಜಾ ಹೆಗ್ಡೆ ಅವರು ಈ ಮಾತನ್ನು ಹೇಳಿರುವುದು ಇತ್ತೀಚೆಗಿನ ಸಂದರ್ಶನದಲ್ಲಿ ಎಂದು ವರದಿ ಮಾಡಿವೆ. ಆದರೆ ಅಧಿಕೃತವಾಗಿ ಸಂದರ್ಶನ ತುಣುಕು ಇದುವರೆಗೆ ಸಿಕ್ಕಿಲ್ಲವೆಂದು ಸಿಯಾಸತ್.ಕಾಂ' ವರದಿ ಮಾಡಿದೆ. ಪೂಜಾ ಹೆಗ್ಡೆ ಅವರ ಹೇಳಿಕೆ ಎನ್ನಲಾಗುತ್ತಿರುವ ಪೋಸ್ಟ್ ವೈರಲ್ ಆದ ಬಳಿಕ ಪ್ರಭಾಸ್ ಅವರ ಹೆಸರು ಇದಕ್ಕೆ ಲಿಂಕ್ ಮಾಡಲಾಗುತ್ತಿದೆ. ಈ ಘಟನೆ 2021ರಲ್ಲಿ 'ರಾಧೆ ಶ್ಯಾಮ್' ವೇಳೆ ಆಗಿರುವುದು ಎಂದು ನೆಟ್ಟಿಗರು ಕಮೆಂಟ್ ಮಾಡುತ್ತಿದ್ದಾರೆ. 'ರಾಧೆ ಶ್ಯಾಮ್' ಶೂಟಿಂಗ್ ವೇಳೆ ಟಾಪ್ ಹೀರೋ ಒಬ್ಬರು ನಾಯಕಿಯ ಕ್ಯಾರವಾನ್‌ಗೆ ಅನುಮತಿ ಇಲ್ಲದೆ ಪ್ರವೇಶ ಮಾಡಿದ್ದರು ಎಂದು ವರದಿಗಳಾಗಿತ್ತು. ಆ ಸಂದರ್ಭದಲ್ಲಿ ಅದು ಪ್ರಭಾಸ್ ಆಗಿರಬಹುದೆಂದು ಪರೋಕ್ಷವಾಗಿ ಕೆಲ ಮಾಧ್ಯಮಗಳು ವರದಿ ಮಾಡಿದ್ದವು. ಪೂಜಾ ಹೆಗ್ಡೆ ಪ್ರಭಾಸ್ ನಡುವಿನ ಸ್ನೇಹ 'ರಾಧೆ ಶ್ಯಾಮ್' ಬಳಿಕ ಅಷ್ಟಾಗಿ ಚೆನ್ನಾಗಿಲ್ಲವೆನ್ನುವ ಮಾತು ಕೇಳಿ ಬಂದಿದ್ದು, ಈಗ ಅದನ್ನೇ ಇಟ್ಕಂಡು ಈ ವಿಚಾರಕ್ಕೆ ಕನೆಕ್ಟ್ ಮಾಡಲಾಗುತ್ತಿದೆ.

# ಪಾಕಿಸ್ತಾನ ಮೂಲದ 42 ಆಟಗಾರರು ಸಿಬ್ಬಂದಿಗೆ ಭಾರತೀಯ ವೀಸಾ

2026ರ ಟಿ20 ವಿಶ್ವಕಪ್‌ಗಾಗಿ ಭಾರತಕ್ಕೆ ಬರುವ ಪಾಕ್ ಮೂಲದ ಆಟಗಾರರು ಮತ್ತು ಅಧಿಕಾರಿಗಳಿಗೆ ವೀಸಾ ಸಮಸ್ಯೆ ಎದುರಾಗಿತ್ತು. ಭಾರತದ ಕಠಿಣ ವೀಸಾ ನೀತಿಯಿಂದಾಗಿ ಉಂಟಾದ ಈ ವಿಳಂಬ, ಇಂಗ್ಲೆಂಡ್, ನೆದರ್‌ಲ್ಯಾಂಡ್ಸ್, ಯುಎಸ್‌ಎ ಸೇರಿದಂತೆ ಹಲವು ತಂಡಗಳ 42 ಸದಸ್ಯರಿಗೆ ಪರಿಣಾಮ ಬೀರಿತ್ತು. ಇದೀಗ ಐಸಿಸಿ ಮಧ್ಯಪ್ರವೇಶಿಸಿ, ಭಾರತೀಯ ಹೈಕಮಿಷನ್‌ಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಈ ಸಮಸ್ಯೆಯನ್ನು ಬಗೆಹರಿಸುತ್ತಿದೆ. ಹಲವರ ವೀಸಾ ಅರ್ಜಿಗಳು ಈಗಾಗಲೇ ಅನುಮೋದನೆಯಾಗಿವೆ.

2026 ರ ಟಿ20 ವಿಶ್ವಕಪ್ ಭಾರತ ಹಾಗೂ ಶ್ರೀಲಂಕಾದ ಆತಿಥ್ಯದಲ್ಲಿ ನಡೆಯುತ್ತಿರುವುದು ಎಲ್ಲರಿಗೂ ಗೊತ್ತಿರುವ ಸಂಗತಿಯೆ. ಆದರೆ ಭಾರತದಲ್ಲಿ ನಡೆಯಲಿರುವ ವಿಶ್ವಕಪ್ ಪಂದ್ಯಗಳಲ್ಲಿ ಭಾಗವಹಿಸಲು ಪಾಕಿಸ್ತಾನ ಮೂಲದ ಆಟಗಾರರು ಹಾಗೂ ಅಧಿಕಾರಿಗಳಿಗೆ ಭಾರತದ ವೀಸಾ ಸಿಗುವುದು ಅನುಮಾನವಾಗಿತ್ತು. ಇದರಿಂದ ವಿಶ್ವಕಪ್‌ನಲ್ಲಿ ಭಾಗವಹಿಸುವ ತಂಡಗಳಿಗೆ ಸಂಕಷ್ಟ ಎದುರಾಗಿತ್ತು.

ಆದರೀಗ ಸಿಕ್ಕಿರುವ ಮಾಹಿತಿಯ ಪ್ರಕಾರ, ಭಾರತದಲ್ಲಿ ನಡೆಯಲಿರುವ ಟಿ20 ವಿಶ್ವಕಪ್ 2026 ರಲ್ಲಿ ಭಾಗವಹಿಸುವ ಪಾಕಿಸ್ತಾನ ಮೂಲದ ಎಲ್ಲಾ 42 ಆಟಗಾರರು ಮತ್ತು ಅಧಿಕಾರಿಗಳಿಗೆ ಎದುರಾಗಿರುವ ವೀಸಾ ಸಮಸ್ಯೆಯನ್ನು ಬಗೆಹರಿಸಲು ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ ಕ್ರಮಗಳನ್ನು ತೆಗೆದುಕೊಂಡಿದೆ. ಇಂಗ್ಲೆಂಡ್‌ನ ಪಾಕಿಸ್ತಾನಿ ಮೂಲದ ಆಟಗಾರರಾದ ಆದಿಲ್ ರಶೀದ್, ರೆಹಾನ್ ಅಹ್ಮದ್ ಮತ್ತು ವೇಗಿ ಸಾಕಿಬ್ ಮಹಮೂದ್ ಅವರ ವೀಸಾ ಅರ್ಜಿಗಳನ್ನು ಈಗಾಗಲೇ ಅನುಮೋದಿಸಲಾಗಿದೆ ಎಂದು ವರದಿಯಾಗಿದೆ.

ನೆದರ್ಲ್ಯಾಂಡ್ಸ್ ತಂಡದ ಸದಸ್ಯರು ಮತ್ತು ಕೆನಡಾದ ಸಹಾಯಕ ಸಿಬ್ಬಂದಿ ಶಾ ಸಲೀಮ್ ಜಾಫರ್ ಅವರಿಗೂ ವೀಸಾ ನೀಡಲಾಗಿದೆ. ಟಿ20 ವಿಶ್ವಕಪ್‌ಗಾಗಿ ಭಾರತಕ್ಕೆ ಪ್ರಯಾಣಿಸುತ್ತಿರುವ ಯುಎಸ್‌ಎ ತಂಡದಲ್ಲಿ ಅಲಿ ಖಾನ್ ಮತ್ತು ಶಯಾನ್ ಜಹಾಂಗೀರ್‌ರಂತಹ ಪಾಕಿಸ್ತಾನಿ ಮೂಲದ ಕೆಲವು ಆಟಗಾರರು ಇದ್ದಾರೆ ಮತ್ತು ನೆದರ್ ಲ್ಯಾಂಡ್ಸ್ ತಂಡದಲ್ಲಿ ಜುಲ್ಫಿಕರ್ ಸಾಕಿಬ್ ಇದ್ದಾರೆ. ಯುನೈಟೆಡ್ ಅರಬ್ ಎಮಿರೇಟ್ಸ್, ಇಟಲಿ, ಬಾಂಗ್ಲಾದೇಶ ಮತ್ತು ಕೆನಡಾಗಳು ಪಾಕಿಸ್ತಾನಿ ರಾಷ್ಟ್ರೀಯತೆ ಅಥವಾ ಪಾಕಿಸ್ತಾನಿ ಮೂಲದ ಆಟಗಾರರು ಮತ್ತು ಅಧಿಕಾರಿಗಳನ್ನು ತಮ್ಮ ತಂಡಗಳಲ್ಲಿ ಹೊಂದಿವೆ.





# ಟಿ20 ವಿಶ್ವಕಪ್ ಹಿಂದೆ ಸರಿಯಲು ಪಾಕಿಸ್ತಾನ್ ಚಿಂತನೆ!

ಭಾರತದಲ್ಲಿ ಟಿ20 ವಿಶ್ವಕಪ್ ಪಂದ್ಯವಾಡಲು ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಹಿಂದೇಟು ಹಾಕಿದೆ. ಬಾಂಗ್ಲಾದೇಶ್ ಆಟಗಾರರ ಸುರಕ್ಷತೆಯನ್ನು ಮುಂದಿಟ್ಟುಕೊಂಡು ಬಿಸಿಬಿ ಪಂದ್ಯಗಳ ಸ್ಥಳಾಂತರಕ್ಕೆ ಐಸಿಸಿಗೆ ಮನವಿ ಮಾಡಿದೆ.

ಈ ಮನವಿಗೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್‌ನಿಂದ ಬೆಂಬಲ ವ್ಯಕ್ತವಾಗಿದೆ. ಟಿ20 ವಿಶ್ವಕಪ್‌ನಲ್ಲಿ ಬಾಂಗ್ಲಾದೇಶ್ ತಂಡದ ಭಾಗವಹಿಸುವಿಕೆ ತೂಗುಯ್ಯಾಲೆಯಲ್ಲಿರುವಾಗಲೇ ಟೂರ್ನಿಯಿಂದ ಹಿಂದೆ ಸರಿಯಲು ಪಾಕಿಸ್ತಾನ್ ತಂಡ ಚಿಂತನೆ ನಡೆಸಿದೆ ಎಂಬ ಮಾಹಿತಿಯೊಂದು ಹೊರಬಿದ್ದಿದೆ. ಇದಕ್ಕೆ ಮುಖ್ಯ ಕಾರಣ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ನ ಮನವಿಗೆ ಐಸಿಸಿ ಪ್ರಾಮುಖ್ಯತೆ ನೀಡದಿರುವುದು. ಅಂದರೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ತನ್ನ ಪಂದ್ಯಗಳನ್ನು ಭಾರತದಿಂದ ಶ್ರೀಲಂಕಾಗೆ ಸ್ಥಳಾಂತರಿಸುವಂತೆ ಮನವಿ ಮಾಡಿದೆ. ಈ ಮನವಿಯ ಹೊರತಾಗಿಯೂ ಪಂದ್ಯಗಳ ಸ್ಥಳಾಂತರಕ್ಕೆ ಐಸಿಸಿ ಒಪ್ಪಿಗೆ ಸೂಚಿಸಿಲ್ಲ. ಅತ್ತ ಐಸಿಸಿ ಕಡೆಯಿಂದ ಸಕರಾತ್ಮಕ ಸ್ಪಂದನೆ ದೊರೆಯದ ಹಿನ್ನಲೆ ಬಾಂಗ್ಲಾದೇಶ್ ಕ್ರಿಕೆಟ್ ಮಂಡಳಿ, ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್‌ನ ಬೆಂಬಲ ಪಡೆಯಲು ಮುಂದಾಗಿದೆ. ಅದರ ಮೊದಲ ಹೆಜ್ಜೆಯಾಗಿ ಈಗಾಗಲೇ ಬಿಸಿಬಿ ಅಧಿಕಾರಿಗಳು ಪಾಕಿಸ್ತಾನ್ ಕ್ರಿಕೆಟ್ ಮಂಡಳಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ್ದಾರೆ. ಈ ಚರ್ಚೆಯ ವೇಳೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್‌ನಿಂದ ಸಕರಾತ್ಮಕ ಸ್ಪಂದನೆ ದೊರೆತಿದೆ. ಅಲ್ಲದೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ನ ಸಮಸ್ಯೆಯನ್ನು ಬಗೆಹರಿಸದಿದ್ದರೆ, ಪಾಕಿಸ್ತಾನವು ಟಿ20 ವಿಶ್ವಕಪ್‌ನಲ್ಲಿ ತನ್ನ ಭಾಗವಹಿಸುವಿಕೆಯನ್ನು ಮರುಪರಿಶೀಲಿಸಲಿದೆ ಎಂದು ಪಾಕ್ ಸರ್ಕಾರದ ಮೂಲಗಳು ತಿಳಿಸಿದೆ

ಅಂದರೆ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ನ ಬೇಡಿಕೆಯನ್ನು ಈಡೇರಿಸದೇ ಇದ್ದರೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಕೂಡ ಟಿ20 ವಿಶ್ವಕಪ್‌ನಿಂದ ಹಿಂದೆ ಸರಿಯುವುದಾಗಿ ಪರೋಕ್ಷವಾಗಿ ತಿಳಿಸಿದೆ. ಈ ಮೂಲಕ ಐಸಿಸಿ ಮೇಲೆ ಒತ್ತಡ ಹೇರಲು ಎರಡು ಕ್ರಿಕೆಟ್ ಬೋರ್ಡ್ ಮುಂದಾಗಿದೆ.




ಶ್ರೀಲಂಕಾದ ಎಡಗೈ ಸ್ಪಿನ್ನರ್ ಮಲಿಂದಾ ಪುಷ್ಪಕುಮಾರ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 1,000 ವಿಕೆಟ್‌ಗಳನ್ನು ಪಡೆದು ಇತಿಹಾಸ ನಿರ್ಮಿಸಿದ್ದಾರೆ. ಈ ಸಾಧನೆ ಮಾಡಿದ ನಾಲ್ಕನೇ ಶ್ರೀಲಂಕಾದ ಬೌಲರ್ ಇವರು.

ಮುತ್ತಯ್ಯ ಮುರಳೀಧರನ್‌ಗಿಂತ ಉತ್ತಮ ಸ್ಟ್ರೈಕ್ ರೇಟ್ ಹೊಂದಿರುವ ಪುಷ್ಪಕುಮಾರ, ತಮ್ಮ ಪ್ರಭಾವಶಾಲಿ ದಾಖಲೆಗಳ ಹೊರತಾಗಿಯೂ ರಾಷ್ಟ್ರೀಯ ತಂಡದಲ್ಲಿ ಕಡಿಮೆ ಅವಕಾಶಗಳನ್ನು ಪಡೆದಿದ್ದಾರೆ. ಅವರ ಬೌಲಿಂಗ್ ಸರಾಸರಿ 20.06 ಗಮನಾರ್ಹವಾಗಿದೆ.

ಶ್ರೀಲಂಕಾದ ದೇಶಿ ಸೂಪರ್‌ಸ್ಟಾರ್ ಎಡಗೈ ಸ್ಪಿನ್ನರ್ ಮಲಿಂದಾ ಪುಷ್ಪಕುಮಾರ ಕ್ರಿಕೆಟ್ ಇತಿಹಾಸದಲ್ಲಿ ತಮ್ಮ ಹೆಸರನ್ನು ಸುವರ್ಣಾಕ್ಷರಗಳಲ್ಲಿ ಬರೆದಿದ್ದಾರೆ. ಈ ಸ್ಪಿನ್ ಮಾಂತ್ರಿಕ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 1,000 ವಿಕೆಟ್‌ಗಳನ್ನು ಪಡೆದ ಅಪರೂಪದ ದಾಖಲೆಯನ್ನು ನಿರ್ಮಿಸಿದ್ದಾರೆ. ಕೊಲಂಬೊದ ಕೋಲ್ಟ್ಸ್ ಕ್ರಿಕೆಟ್ ಕ್ಲಬ್ ಮೈದಾನದಲ್ಲಿ ನಡೆದ ಮೂರ್ ಸ್ಪೋರ್ಟ್ಸ್ ಕ್ಲಬ್ ವಿರುದ್ಧದ ಪಂದ್ಯದಲ್ಲಿ ಸೋಹನ್ ಡಿ ಲಿವೇರಾ ಮತ್ತು ಪಸಿಂದು ಸೂರ್ಯಬಂಡರ ಅವರನ್ನು ಔಟ್ ಮಾಡುವ ಮೂಲಕ ಪುಷ್ಪಕುಮಾರ ಈ ಅದ್ಭುತ ಮೈಲಿಗಲ್ಲು ಸ್ಥಾಪಿಸಿದರು. ಈ ಸಾಧನೆ ಮಾಡಿದ ನಾಲ್ಕನೇ ಶ್ರೀಲಂಕಾದ ಬೌಲರ್ ಎಂಬ ದಾಖಲೆಯನ್ನು ಅವರು ಸೃಷ್ಟಿಸಿದರು.

ಶ್ರೀಲಂಕಾ ಪರ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 1000 ವಿಕೆಟ್‌ಗಳನ್ನು ಪಡೆದ ಬೌಲರ್‌ಗಳ ಪಟ್ಟಿಯಲ್ಲಿ ಮುತ್ತಯ್ಯ ಮುರಳೀಧರನ್ (1374 ವಿಕೆಟ್‌ಗಳು), ರಂಗನ ಹೆರಾತ್ (1080 ವಿಕೆಟ್‌ಗಳು) ಮತ್ತು ದಿನುಕಾ ಹೆಟ್ಟಿಯಾರಾಚಿ (1001 ವಿಕೆಟ್‌ಗಳು) ಮಾತ್ರ ಇದ್ದರು. ಆದರೆ ಈಗ ಮಲಿಂದಾ ಪುಷ್ಪಕುಮಾರ ಕೂಡ ಈ ಪಟ್ಟಿಗೆ ಸೇರಿಕೊಂಡಿದ್ದಾರೆ. ಇನ್ನು ಜಾಗತಿಕವಾಗಿ, ಪುಷ್ಪಕುಮಾರ ಪ್ರಥಮ ದರ್ಜೆ ಕ್ರಿಕೆಟ್ ಇತಿಹಾಸದಲ್ಲಿ ಈ ಸಾಧನೆ ಮಾಡಿದ 218 ನೇ ಆಟಗಾರ ಎನಿಸಿಕೊಂಡಿದ್ದಾರೆ. ಆದಾಗ್ಯೂ ಮಲಿಂದಾ ಪುಷ್ಪಕುಮಾರ ಸ್ಟ್ರೈಕ್ ರೇಟ್ ವಿಚಾರದಲ್ಲಿ ಮಾಜಿ ಲೆಜೆಂಡರಿ ಸ್ಪಿನ್ನರ್ ಮುತ್ತಯ್ಯ ಮುರಳೀಧರನ್‌ಗಿಂತ ಮುಂದಿದ್ದಾರೆ. ಮುರಳೀಧರನ್ ಪ್ರತಿ 48.7 ಎಸೆತಗಳಿಗೆ ಒಂದು ವಿಕೆಟ್ ಪಡೆದರೆ, ಪುಷ್ಪಕುಮಾರ ಕೇವಲ 38.3 ಎಸೆತಗಳಲ್ಲಿ ವಿಕೆಟ್ ಪಡೆದಿದ್ದಾರೆ. ಅವರ ಬೌಲಿಂಗ್ ಸರಾಸರಿ ಕೂಡ ಕೇವಲ 20.06 ಆಗಿದೆ. ಮಲಿಂದಾ ಪುಷ್ಪಕುಮಾರ ತಮ್ಮ ಸುದೀರ್ಘ ವೃತ್ತಿಜೀವನದಲ್ಲಿ ಒಂದು ಇನ್ನಿಂಗ್ಸ್‌ನಲ್ಲಿ 86 ಬಾರಿ ಐದು ವಿಕೆಟ್‌ಗಳನ್ನು ಮತ್ತು ಒಂದು ಪಂದ್ಯದಲ್ಲಿ 10 ವಿಕೆಟ್‌ಗಳನ್ನು 28 ಬಾರಿ ಪಡೆದಿದ್ದಾರೆ. ಇನ್ನು ಜನವರಿ 2019ರಲ್ಲಿ ಸ್ಯಾರಸೆನ್ಸ್ ಸ್ಪೋರ್ಟ್ಸ್ ಕ್ಲಬ್ ವಿರುದ್ಧದ ಪಂದ್ಯದಲ್ಲಿ, ಅವರು ಒಂದೇ ಇನ್ನಿಂಗ್ಸ್‌ನಲ್ಲಿ ಒಟ್ಟು 10 ವಿಕೆಟ್‌ಗಳನ್ನು ಪಡೆಯುವ ಮೂಲಕ ಇತಿಹಾಸ ನಿರ್ಮಿಸಿದ್ದರು.

ಇಷ್ಟೊಂದು ಪ್ರಭಾವಶಾಲಿ ದಾಖಲೆಯ ಹೊರತಾಗಿಯೂ, ಪುಷ್ಪಕುಮಾರ ಅವರಿಗೆ ಶ್ರೀಲಂಕಾ ರಾಷ್ಟ್ರೀಯ ತಂಡದಲ್ಲಿ ಆಡಲು ಕಡಿಮೆ ಅವಕಾಶಗಳು ಸಿಕ್ಕವು. ಪುಷ್ಪಕುಮಾರ ಶ್ರೀಲಂಕಾ ಪರ ಕೇವಲ 4 ಟೆಸ್ಟ್ ಪಂದ್ಯಗಳನ್ನು ಆಡಿದ್ದು 14 ವಿಕೆಟ್‌ಗಳನ್ನು ಪಡೆದಿದ್ದಾರೆ. ಎರಡು ಏಕದಿನ ಪಂದ್ಯಗಳನ್ನು ಆಡಿರುವ ಅವರು ಒಂದು ವಿಕೆಟ್ ಪಡೆದಿದ್ದಾರೆ.

ಪಾಕಿಸ್ತಾನ್ ಮತ್ತು ಆಸ್ಟ್ರೇಲಿಯಾ ನಡುವಣ ಮೂರು ಪಂದ್ಯಗಳ ಟಿ20 ಸರಣಿಯು ಜನವರಿ 29 ರಿಂದ ಶುರುವಾಗಲಿದೆ. ಟಿ20 ವಿಶ್ವಕಪ್‌ಗೂ ಮುನ್ನ ನಡೆಯಲಿರುವ ಈ ಟೂರ್ನಿಗಾಗಿ ಆಸ್ಟ್ರೇಲಿಯಾ 17 ಸದಸ್ಯರುಗಳ ಬಲಿಷ್ಠ ತಂಡವನ್ನು ಘೋಷಿಸಿದೆ. ಈ ತಂಡದಲ್ಲಿ ಆಸೀಸ್ ಪಡೆಯ ನಾಲ್ವರು ಪ್ರಮುಖ ಆಟಗಾರರು ಕಾಣಿಸಿಕೊಂಡಿಲ್ಲ.

ಪಾಕಿಸ್ತಾನ್ ವಿರುದ್ಧದ ಟಿ20 ಸರಣಿಗಾಗಿ ಆಸ್ಟ್ರೇಲಿಯಾ ತಂಡವನ್ನು ಪ್ರಕಟಿಸಲಾಗಿದೆ. 17 ಸದಸ್ಯರುಗಳ ಈ ತಂಡವನ್ನು ಮಿಚೆಲ್ ಮಾರ್ಷ್ ಮುನ್ನಡೆಸಲಿದ್ದಾರೆ. ಇನ್ನು ಟಿ20 ವಿಶ್ವಕಪ್‌ಗೆ ಆಯ್ಕೆಯಾಗಿರುವ ನಾಲ್ವರು ಆಟಗಾರರು ಈ ತಂಡದಲ್ಲಿ ಸ್ಥಾನ ಪಡೆದಿಲ್ಲ ಎಂಬುದು ವಿಶೇಷ. ಭಾರತ-ಶ್ರೀಲಂಕಾ ಜಂಟಿಯಾಗಿ ಆಯೋಜಿಸಲಿರುವ ಟಿ20 ವಿಶ್ವಕಪ್‌ಗೆ ಈಗಾಗಲೇ ಆಸ್ಟ್ರೇಲಿಯಾ ತಾತ್ಕಾಲಿಕ ತಂಡವನ್ನು ಘೋಷಿಸಲಾಗಿದೆ. ಈ ತಂಡದಲ್ಲಿ ಕಾಣಿಸಿಕೊಂಡಿದ್ ಜೋಶ್ ಹೇಝಲ್‌ವುಡ್, ಗ್ಲೆನ್ ಮ್ಯಾಕ್ಸ್‌ವೆಲ್, ಟಿಮ್ ಡೇವಿಡ್ ಹಾಗೂ ಪ್ಯಾಟ್ ಕಮಿನ್ಸ್ ಪಾಕಿಸ್ತಾನ್ ವಿರುದ್ಧದ ಸರಣಿಗೆ ಆಯ್ಕೆಯಾಗಿಲ್ಲ. ಈ ನಾಲ್ವರನ್ನು ತಂಡದಿಂದ ಕೈ ಬಿಡಲು ಮುಖ್ಯ ಕಾರಣ ಗಾಯದ ಸಮಸ್ಯೆ.




# ನಾಲ್ವರು ಪ್ರಮುಖ ಆಟಗಾರರು ಔಟ್

ಜೋಶ್ ಹೇಝಲ್‌ವುಡ್ ಅಕಿಲ್ಸ್ ನೋವಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಇನ್ನು ಟಿಮ್ ಡೇವಿಡ್ ಭುಜದ ನೋವಿಗೆ ಒಳಗಾಗಿದ್ದಾರೆ. ಹಾಗೆಯೇ ಪ್ಯಾಟ್ ಕಮಿನ್ಸ್ ಬೆನ್ನು ನೋವಿನ ಸಮಸ್ಯೆಯಿಂದ ಇನ್ನೂ ಸಹ ಸಂಪೂರ್ಣವಾಗಿ ಚೇತರಿಸಿಕೊಂಡಿಲ್ಲ. ಮತ್ತೊಂದೆಡೆ ಮ್ಯಾಕ್ಸ್‌ವೆಲ್ ಕೂಡ ಗಾಯದ ಸಮಸ್ಯೆಗೀಡಾಗಿದ್ದಾರೆ. ಹೀಗಾಗಿ ಈ ನಾಲ್ವರನ್ನು ಪಾಕ್ ವಿರುದ್ಧದ ಸರಣಿಯಿಂದ ಹೊರಗಿಡಲಾಗಿದೆ.

ಇನ್ನು ಫೆಬ್ರವರಿ 7 ರಿಂದ ಶುರುವಾಗಲಿರುವ ಟಿ20 ವಿಶ್ವಕಪ್‌ಗೂ ಮುನ್ನ ನಾಲ್ವರು ಸಂಪೂರ್ಣ ಚೇತರಿಸಿಕೊಳ್ಳುವ ವಿಶ್ವಾಸದಲ್ಲಿದೆ ಕ್ರಿಕೆಟ್ ಆಸ್ಟ್ರೇಲಿಯಾ. ಒಂದು ವೇಳೆ ಟಿ20 ವಿಶ್ವಕಪ್ ಮೊದಲ ಸುತ್ತಿನ ಪಂದ್ಯಗಳ ವೇಳೆ ಸಂಪೂರ್ಣ ಫಿಟ್‌ನೆಸ್ ಸಾಧಿಸಲು ಸಾಧ್ಯವಾಗದೇ ಇದ್ದರೆ ಮಾತ್ರ ಬದಲಿ ಆಟಗಾರರನ್ನು ಆಯ್ಕೆ ಮಾಡಲು ಕ್ರಿಕೆಟ್ ಆಸ್ಟ್ರೇಲಿಯಾ ನಿರ್ಧರಿಸಿದೆ.

**ಟಿ20 ತಂಡ:** ಮಾರ್ಷ್, ಅಬಾಟ್, ಬಾರ್ಟ್ಲೆಟ್, ಮಹ್ಲಿ ಬಿಯರ್ಡ್‌ಮನ್, ಕೊನೊಲಿ, ಬೆನ್ ದ್ವಾರ್ಶುಯಿಸ್, ಎಡ್ವರ್ಡ್ಸ್, ಗ್ರೀನ್, ಹೆಡ್, ಇಂಗ್ಲಿಸ್, ಮ್ಯಾಥ್ಯೂ ಕುಹ್ನೆಮನ್, ಮಿಚೆಲ್ ಓವನ್, ಜೋಶ್ ಫಿಲಿಪಿ, ಮ್ಯಾಥ್ಯೂ ರೆನ್‌ಶಾ, ಮ್ಯಾಥ್ಯೂ ಶಾರ್ಟ್, ಮಾರ್ಕಸ್ ಸ್ಟೊಯಿನಿಸ್, ಆಯಡಂ ಝಂಪಾ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**